ಸಂಪುಟ: ೦೭/ ಸಂಚಿಕೆ: ೧೨೬/ಬುಧವಾರ ದಿನಾಂಕ : ೦೨-೦೭-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 126/ WEDNESDAY Date : 02-07-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

# ಮಾಧ್ಯಮಗಳು ಸತ್ಯವನ್ನು ಮರೆಮಾಚುವ ಕೆಲಸ ಮಾಡಬಾರದು: ಮುಖ್ಯಮಂತ್ರಿ



ಬೆಂಗಳೂರು, : ಮಾಧ್ಯಮಗಳು ವಸ್ತುಸ್ಥಿತಿಯನ್ನು ಜನರ ಮುಂದೆ ಇಡಬೇಕೇ ವಿನಃ, ಸತ್ಯವನ್ನು ಮರೆಮಾಚುವ ಕೆಲಸ ಮಾಡಬಾರದೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಅವರು ಇಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸುಲೋಚನಾ ಸಭಾಂಗಣದಲ್ಲಿ ಕರ್ನಾಟಕ ಮಾಧ್ಯಮ ಅಕಾಡೆಮಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾದ ಪತ್ರಿಕಾ ದಿನಾಚರಣೆ 2025, ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ವಿತರಣೆ ಹಾಗೂ ಮುಖ್ಯಮಂತ್ರಿಗಳ ಮಾಧ್ಯಮ ಸಂಜೀವಿನಿ ಯೋಜನೆ ಉದ್ಘಾಟಿಸಿ ಮಾತನಾಡಿದರು.

ಮಾಧ್ಯಮಗಳು ದೀನ, ದಮನಿತರ ದನಿಯಾಗಿ ಕೆಲಸ ಮಾಡಬೇಕು. ಸಂವಿಧಾನಶಿಲ್ಪಿ ಅಂಬೇಡ್ಕರ್ ಅವರು ಸಂವಿಧಾನದಲ್ಲಿ ನ್ಯಾಯ, ಸಮಾನತೆ ಎತ್ತಿಹಿಡಿದಿದ್ದರು. ಮಾಧ್ಯಮಗಳು ಸಹಿತ ಮೌಲ್ಯಗಳನ್ನು ಉಳಿಸಿ ಜನಪರ ದನಿಯಾಗಬೇಕು ಎಂದರು.

ನಮಗೆ ಈ ಕ್ಷಣ ಅಗತ್ಯವಿರುವುದು ಜಾತಿ ರಹಿತ, ಮಾನವೀಯ ಮೌಲ್ಯಗಳುಳ್ಳ ಸಮಾಜ. ಆದರೂ ಕೆಲವರು ದ್ವೇಷ, ಅಸಹನೆಯಿಂದ ಸಮಾಜದ ಸ್ವಾಸ್ಥ್ಯವನ್ನು ನಾಶಪಡಿಸುವ ಕೆಲಸ ಮಾಡುತ್ತಿದ್ದಾರೆ. ಇದಕ್ಕೆ ನಾವು ಯಾವುದೇ ಆಸ್ಪದ ನೀಡಬಾರದು. ಇತ್ತೀಚೆಗೆ ಸುಳ್ಳು ಸುದ್ದಿಗಳು ಮಾಧ್ಯಮಗಳಲ್ಲಿ ರಾರಾಜಿಸುತ್ತಿವೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ನಾಲ್ಕನೇ ಅಂಗ ಎನಿಸಿರುವ ಪತ್ರಿಕಾರಂಗಕ್ಕೆ ಬಹಳಷ್ಟು ಜವಾಬ್ದಾರಿಗಳಿವೆ. ಕಾಸಿಗಾಗಿ ಸುದ್ದಿ, ಸುಳ್ಳು ಸುದ್ದಿಗೆ ಮಾಧ್ಯಮಗಳು ಕಡಿವಾಣ ಹಾಕುವುದು ಮುಖ್ಯ. ಪತ್ರಿಕಾ ಸ್ವಾತಂತ್ರ್ಯವನ್ನು ಉತ್ತಮವಾಗಿ ಬಳಸಿಕೊಂಡ ಒಟ್ಟು 180 ದೇಶಗಳ ಪೈಕಿ ಭಾರತ 151 ನೇ ಸ್ಥಾನದಲ್ಲಿದೆ. ಇದು ಉತ್ತಮ ಬೆಳವಣಿಗೆಯಲ್ಲ. ಮಾಧ್ಯಮದವರಾಗಿ ಪ್ರಾಮಾಣಿಕವಾಗಿ ಕೆಲಸ ನಿರ್ವಹಿಸಿ, ತಮ್ಮ ಕೆಲಸವನ್ನು ಆತ್ಮಾವಲೋಕನ ಮಾಡಬೇಕು. ಮೌಢ್ಯವನ್ನು ತೊಡೆದು ಹಾಕಿ ವೈಚಾರಿಕತೆ ಬೆಳೆಸಿಕೊಳ್ಳಬೇಕು. ಸುಳ್ಳು ಸುದ್ದಿ ನಿಯಂತ್ರಣಕ್ಕೆ ಸರ್ಕಾರ ಸದ್ಯದಲ್ಲೇ ಕಾಯ್ದೆ ತರಲಿದೆ ಎಂದು ತಿಳಿಸಿದರು.

ಮ್ಯಾಗ್ಸಸೆ ಪ್ರಶಸ್ತಿ ವಿಜೇತ, ಹಿರಿಯ ಪತ್ರಕರ್ತರಾದ ಪಿ. ಸಾಯಿನಾಥ್ ಮಾತನಾಡಿ, 40 ವರ್ಷಗಳ ಹಿಂದೆ ಚಾಲ್ತಿಯಿದ್ದ ಪತ್ರಿಕೋದ್ಯಮ ಈಗಿಲ್ಲ. ಈಗ ಕಾಪೆರ್ರೊ?ರೇಟ್ ವಲಯದೊಳಗೆ ಪತ್ರಿಕಾರಂಗ ತೆರೆದುಕೊಳ್ಳುತ್ತಿದೆ. ಮಾರ್ಚ್ 31, 2021ಕ್ಕೆ ದೇಶದ ಮಾಧ್ಯಮಗಳು ಒಟ್ಟು 2.51 ಟ್ರಿಲಿಯನ್ ಬಂಡವಾಳ ಹೊಂದಿದೆ. ಕೆಲವೇ ವ್ಯಕ್ತಿಗಳಲ್ಲಿ ದೇಶದ 70 ಮೀಡಿಯಾಗಳು ವಶವಾಗಿದೆ. 4 ನೇ ದೊಡ್ಡ ಆರ್ಥಿಕತೆ ಹೊಂದಿರುವ ನಮ್ಮ ರಾಷ್ಟ್ರದಲ್ಲಿನ 211 ಬಿಲಿಯನೇರ್ಗಳಿಂದ ಶೇ.25ರಷ್ಟು ಜಿಡಿಪಿ ಉತ್ಪತ್ತಿಯಾಗುತ್ತಿದೆ. ಮಾಧ್ಯಮಗಳೂ ಆರ್ಥಿಕವಾಗಿ, ಸಬಲಗೊಂಡರೂ ಸುದ್ದಿಯ ಪ್ರಸಾರ ಹಾಗೂ ಗುಣಮಟ್ಟ ಕಡಿಮೆಯಾಗುತ್ತಿದೆ. ಈ ಕಾಪೆರ್ರೊ?ರೇಟ್ ಜಗತ್ತು ಬಹುತೇಕ ಮಾಧ್ಯಮಗಳನ್ನು ನಿಯಂತ್ರಣದಲ್ಲಿಟ್ಟುಕೊಂಡಿದ್ದು, ಇದರಿಂದ ಸತ್ಯ, ಸಮಂಜಸ ಸುದ್ದಿ ಪ್ರಸಾರಕ್ಕೆ ಧಕ್ಕೆ ಉಂಟಾಗುತ್ತಿದೆ. ಕೋವಿಡ್-19 ಸಂದರ್ಭದಲ್ಲಿ ಸುಮಾರು 4000 ಪತ್ರಕರ್ತರು ತಮ್ಮ ಕೆಲಸವನ್ನು ಕಳೆದುಕೊಂಡರು. ಮಾಧ್ಯಮಗಳು ಸಹ ತನ್ನ ವ್ಯಾಪಾರಿ ಮನೋಭಾವದಿಂದ ನೈಜ ಪತ್ರಿಕೋದ್ಯಮವನ್ನು ಮರೆತಂತಿದೆ. ಇದು ಪತ್ರಕರ್ತ ಹಾಗೂ ಮಾಧ್ಯಮ ಈ ಇಬ್ಬರ ಭವಿಷ್ಯಕ್ಕೂ ಮಾರಕವೆಂದು ತಿಳಿಸಿದರು.

ಹಿರಿಯ ಸಾಹಿತಿಗಳು ಹಾಗೂ ಸಂಸ್ಕೃತಿ ಚಿಂತಕರಾದ ರಹಮತ್ ತರೀಕೆರೆ ಮಾತನಾಡಿ ಸುದ್ದಿಯನ್ನು ನೋಡುವ ದೃಷ್ಟಿಕೋನ, ವ್ಯಾಖ್ಯಾನದಲ್ಲಿ ಹಲವು ವ್ಯತ್ಯಾಸಗಳಿರುತ್ತದೆ. ನಿಜ ಸುದ್ದಿಯನ್ನು ವ್ಯಾಖ್ಯಾನಿಸಿದಾಗ ಅದರಲ್ಲಿ ಹತ್ತು ಹಲವು ಪದರಗಳು ತೆರೆದುಕೊಳ್ಳುತ್ತದೆ. ಕಳೆದ 20 ವರ್ಷಗಳಿಗೆ ಹೋಲಿಸಿದರೆ ಮಾಧ್ಯಮಗಳು ಮಲಿನಗೊಂಡಿದೆ. ನೋಡುಗರನ್ನು ಹೆಚ್ಚಿಸುವ, ವ್ಯಾಪಾರೀಕರಣದಲ್ಲಿ ಕೆಲಸವನ್ನು ಕೆಲವೊಂದು ಮಾಧ್ಯಮ ಮಾಡುತ್ತಿದೆ. ಇದು ಸಮಾಜಕ್ಕೆ ಮಾರಕ. ಭಾ?ಯನ್ನು ದ್ವೇಷಕ್ಕೆ ಬಳಸುವ ಕೆಲಸ ಮಾಡಬಾರದು. ಮಾಧ್ಯಮಗಳು ಅಶ್ಲೀಲ ಭಾ? ಬಳಸಿ ಸಮಾಜವನ್ನು ವಿರೂಪಗೊಳಿಸಬಾರದು. ಮಾಧ್ಯಮ ಸ್ವಾತಂತ್ರ್ಯವನ್ನು ಸಹ ಸದ್ಬಳಕೆ ಮಾಡಬೇಕೇ ವಿನಃ ಅದನ್ನು ಸ್ವಾರ್ಥಕ್ಕೆ ಬಳಸಿಕೊಳ್ಳಬಾರದು. ಇತ್ತೀಚೆಗೆ ನಾಟಕ, ಸಿನಿಮಾ ಸೇರಿದಂತೆ ಇತರ ಮಾಧ್ಯಮಗಳಲ್ಲಿ ಸಹ ಭಾ?ಯ ಸ್ವರೂಪ ಪತನ ಹೊಂದುತ್ತಿದ್ದು, ನಾವು ಎಚ್ಚೆತ್ತುಕೊಳ್ಳದಿದ್ದರೆ, ಇದರಿಂದ ದುಷ್ಪರಿಣಾಮ ಅನುಭವಿಸಬೇಕಾಗುತ್ತದೆ ಎಂದರು.

ಕನ್ನಡ ಮಾಧ್ಯಮ ಅಕಾಡೆಮಿಯ ಅಧ್ಯಕ್ಷರಾದ ಶ್ರೀಮತಿ ಆಯೇ?ಾ ಖಾನಂ ಮಾತನಾಡಿ, ಇಂದು ಪತ್ರಿಕಾ ದಿನಾಚರಣೆಯ ಹುಟ್ಟು ಹಬ್ಬ. ಕನ್ನಡ ಪತ್ರಿಕೋದ್ಯಮದ ಇತಿಹಾಸಕ್ಕೆ 182 ವರ್ಷಗಳು ಸಂದಿವೆ. ಕನ್ನಡದ ಮೊದಲ ಪತ್ರಿಕೆ ಮಂಗಳೂರು ಸಮಾಚಾರ್ 1843ರ ಜುಲೈ 1 ರಿಂದ ಮಂಗಳೂರಿನಲ್ಲಿ ಬಾಸೆಲ್ ಮಿಷನ್ ಅವರ ಮುದ್ರಣಾಲಯದಿಂದ ಪ್ರಕಟವಾಯಿತು. ರೆವರೆಂಡ್ ಹರ್ಮನ್ ಮೋಗ್ಲಿಂಗ್ ಅವರು ಸಂಪಾದಕರಾಗಿದ್ದರು. ಜರ್ಮನ್ ಮತ ಪ್ರಚಾರಕರಾದ ಮೋಗ್ಲಿಂಗ್ ಅವರು ಕನ್ನಡ ಕಲಿತು ಸ್ಥಳೀಯ ಸಾಹಿತ್ಯ ಮತ್ತು ಶಿಕ್ಷಣದಲ್ಲಿ ಆಸಕ್ತಿ ಹೊಂದಿ ನಾಲ್ಕು ಪುಟಗಳನ್ನೊಳಗೊಂಡ ಮಂಗಳೂರು ಸಮಾಚಾರ್ ಪತ್ರಿಕೆಯನ್ನು ಪ್ರಕಟಿಸಿದರು. ವರ್ತಮಾನಗಳು, ವಾಚಕರ ವಾಣಿಗಳು, ಅಂಕಣಗಳನ್ನು, ಸಾಹಿತ್ಯಗಳನ್ನು ಕುರಿತು ಪತ್ರಿಕೆಯಲ್ಲಿ ಪ್ರಕಟವಾಗುತ್ತಿತ್ತು ಎಂದು ಪತ್ರಿಕೋದ್ಯಮದ ಹಿನ್ನಲೆಯನ್ನು ತಿಳಿಸಿದರು.

ಮುಂಬೈ, ಕಾಸರಗೋಡು, ಚತ್ತೀಸ್‌ಘಡ್, ದುಬೈ, ಅಮೆರಿಕಾದಲ್ಲಿ ಕನ್ನಡಿಗರು ಇರುವ ಜಾಗದಲ್ಲಿ ಕನ್ನಡ ಭಾಷೆ ಬೆಳೆದಿದೆ. ಸುಳ್ಳು ಸುದ್ದಿ ಪ್ರಸಾರ ಕುರಿತಂತೆ ಮಾಧ್ಯಮ ಅಕಾಡೆಮಿ ವತಿಯಿಂದ ಸೆಮಿನಾರ್ ಗಳನ್ನು ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಮಾತನಾಡಿ, ಮೂರು ದಶಕಗಳಿಂದ ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ವಿತರಿಸುವ ಕುರಿತು ಬೇಡಿಕೆ ಇಡಲಾಗಿತ್ತು, ಇದನ್ನು ಮುಖ್ಯಮಂತ್ರಿಗಳು ಕಾರ್ಯರೂಪಕ್ಕೆ ತಂದಿದ್ದಾರೆ. ಅದೇ ರೀತಿ ಪತ್ರಕರ್ತರ ಆಸ್ಪತ್ರೆ ವೆಚ್ಚ ಭರಿಸಲು ಯೋಜನೆ ನೀಡಬೇಕು ಎಂದು ಬೇಡಿಕೆಗೆ ಸ್ಪಂದಿಸಿ "ಮುಖ್ಯಮಂತ್ರಿಗಳ ಮಾಧ್ಯಮ ಸಂಜೀವಿನಿ" ಯನ್ನು ಉದ್ಘಾಟಿಸಿ ನುಡಿದಂತೆ ನಡೆದಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳು ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ಯೋಜನೆಯನ್ನು ಲೋಕಾರ್ಪಣೆಗೊಳಿಸಿ, ಫಲಾನುಭವಿಗಳಿಗೆ ಬಸ್ ಪಾಸ್ ವಿತರಿಸಿದರು. ಇದರಿಂದ 5500 ಕ್ಕೂ ಹೆಚ್ಚು ಗ್ರಾಮೀಣ ಪತ್ರಕರ್ತರು ಪ್ರಯೋಜನೆ ಪಡೆಯಲಿದ್ದು, 16 ಕೋಟಿ ವೆಚ್ಚವಾಗಲಿದೆ. ಮುಖ್ಯಮಂತ್ರಿ ಮಾಧ್ಯಮ ಸಂಜೀವಿನಿಯಡಿ ಮಾನ್ಯತೆ ಪಡೆದ ಪತ್ರಕರ್ತರಿಗೆ ಹಾಗೂ ಅವರ ಅವಲಂಬಿತ ಕುಟುಂಬದ ಸದಸ್ಯರಿಗೆ 5 ಲಕ್ಷದವರೆಗೆ ನಗದು ರಹಿತ ಚಿಕಿತ್ಸೆಯನ್ನು ನೀಡಲಾಗುತ್ತಿದೆ. ಈ ಯೋಜನೆಯಡಿ ರಾಜ್ಯದ 25000 ಪತ್ರಕರ್ತರು ಸೇರ್ಪಡೆಯಾಗಿದ್ದು, ಪ್ರತಿ ವರ್ಷ ಇದಕ್ಕೆ 3.60 ಕೋಟಿ ವೆಚ್ಚವಾಗುತ್ತಿದ್ದು, ಈಗಾಗಲೇ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ನಲ್ಲಿ 6.79 ಕೋಟಿ ಠೇವಣಿ ಇರಿಸಲಾಗಿದೆ. ಅಲ್ಲದೆ ಫಲಾನುಭವಿಗಳಿಗೆ ಮಾಧ್ಯಮ ಅಕಾಡೆಮಿಯಿಂದ ಎಸ್ ಸಿ ಪಿ/ ಟಿಎಸ್ ಪಿ ಯೋಜನೆಯಡಿ ಮೋಜೋ ಕಿಟ್ ಸಹ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಮುಖ್ಯಮಂತ್ರಿಗಳ ಕಾರ್ಯದರ್ಶಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಾರ್ಯದರ್ಶಿ ಶ್ರೀಮತಿ ಬಿ.ಬಿ. ಕಾವೇರಿ, ವಾರ್ತಾ ಇಲಾಖೆ ಆಯುಕ್ತರಾದ ಹೇಮಂತ್ ಎಂ ನಿಂಬಾಳ್ಕರ್, ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ. ಪ್ರಭಾಕರ್, ಕಂಠೀರವ ಸ್ಟುಡಿಯೋ ಅಧ್ಯಕ್ಷರಾದ ಮೊಹಬೂಬ್ ಪಾಷಾ, ಕರ್ನಾಟಕ ಪತ್ರಕರ್ತೆಯರ ಸಂಘ ಅಧ್ಯಕ್ಷರಾದ ಶ್ರೀಮತಿ ಪದ್ಮಾ ಶಿವಮೊಗ್ಗ, ಕರ್ನಾಟಕ ಮಾಧ್ಯಮ ಅಕಾಡೆಮಿ ಕಾರ್ಯದರ್ಶಿ ಸಹನಾ .ಎಂ ಸೇರಿದಂತೆ ಹಿರಿಯ ಗಣ್ಯರು, ಅಧಿಕಾರಿಗಳು ಉಪಸ್ಥಿತರಿದ್ದರು.

# ಸಭೆಗಳ ಜನಜಂಗುಳಿ ನಿಯಂತ್ರಣಕ್ಕೆ ಹೊಸ ಮಾರ್ಗಸೂಚಿ ಪ್ರಕಟ



ಬೆಂಗಳೂರು: ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ವಿಜಯೋತ್ಸವದ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಸಂಭವಿಸಿದ ಕಾಲ್ತುಳಿತ ದುರಂತ ಹಿನ್ನೆಲೆಯಲ್ಲಿ ಕರ್ನಾಟಕ ಪೊಲೀಸ್ ಇಲಾಖೆಯು ಸಾರ್ವಜನಿಕ ಸಮಾರಂಭಗಳಲ್ಲಿ ಜನಸಂದಣಿ ನಿಯಂತ್ರಣಕ್ಕಾಗಿ ಮಾರ್ಗಸೂಚಿ ಬಿಡುಗಡೆ ಮಾಡಿದೆ.

ಹೆಚ್ಚು ಜನ ಸೇರುವ ಕಾರ್ಯಕ್ರಮಗಳಲ್ಲಿ ಜನಜಂಗುಳಿ ನಿಯಂತ್ರಣಕ್ಕೆ ಈ ಮಾರ್ಗಸೂಚಿ ಜಾರಿಗೆ ತರಲಾಗಿದ್ದು, ಯಾವುದೇ ಬಹಳಷ್ಟು ಸಂಖ್ಯೆಯಲ್ಲಿ ಜನ ಸೇರುವ ಸಭೆ ಸಮಾರಂಭಗಳಿಗೆ ಈ ಮಾರ್ಗಸೂಚಿಗಳು ಅನ್ವಯವಾಗಲಿದೆ. ಹಾಗಾದ್ರೆ, ಮಾರ್ಗಸೂಚಿಯಲ್ಲಿ ಏನೆಲ್ಲಾ ಅಂಶಗಳು ಇವೆ ಎನ್ನುವುದು ಈ ಕೆಳಗಿನಂತಿದೆ ನೋಡಿ.

ಹಬ್ಬಗಳು, ಪ್ರತಿಭಟನೆಗಳು, ಮೆರವಣಿಗೆಗಳು ಮತ್ತು ಕ್ರೀಡಾ ಕೂಟಗಳಂತಹ ಬೃಹತ್ ಜನ ಸಮುದಾಯ ಸೇರುವ ಯಾವುದೇ ಕಾರ್ಯಕ್ರಮಗಳಲ್ಲಿ ಸಾರ್ವಜನಿಕ ಭದ್ರತೆ, ಕಾನೂನು-ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಈ ಮಾರ್ಗಸೂಚಿ ಜಾರಿಗೆ ತರಲಾಗಿದೆ.

ಸಾರ್ವಜನಿಕ ಕಾರ್ಯಕ್ರಮಕ್ಕೂ ಮುನ್ನ ಸ್ಥಳದ ಸಂಪೂರ್ಣ ಪರಿಶೀಲನೆ ಮತ್ತು ಕಾರ್ಯಕ್ರಮ ಆಯೋಜಕರ ಸಹಯೋಗದೊಂದಿಗೆ ವಿವರವಾದ ಯೋಜನೆ ರಚಿಸುವುದು ಈಗ ಕಡ್ಡಾಯ. ಕಾರ್ಯಕ್ರಮ ನಡೆಯುವ ಸ್ಥಳದ ಸಾಮರ್ಥ್ಯ, ತುರ್ತು ನಿರ್ಗಮನ ಮಾರ್ಗಗಳ ಲಭ್ಯತೆ ಮತ್ತು ತಂತ್ರಜ್ಞಾನದ ಬಳಕೆಯ ಸಾಧ್ಯತೆಗಳನ್ನು ಪರಿಶೀಲಿಸಲೇಬೇಕು. ಜನಸಂದಣಿ ನಿರ್ವಹಣೆಗೆ ಪೊಲೀಸರ ಹೊಣೆಗಾರಿಕೆಗಳು, ಟ್ರಾಫಿಕ್ ನಿಯಂತ್ರಣ, ವೈದ್ಯಕೀಯ ನೆರವು ಮತ್ತು ಟಿಕೆಟ್ ವ್ಯವಸ್ಥೆಗಳನ್ನು ಮಾಡಲೇಬೇಕು ಎಂದು ಮಾರ್ಗಸೂಚಿಯಲ್ಲಿ ತಿಳಿಸಲಾಗಿದೆ.

ಸಾರ್ವಜನಿಕರ ಪ್ರವೇಶ ದ್ವಾರಗಳಲ್ಲಿ ತರಬೇತಿ ಪಡೆದ ಸಿಬ್ಬಂದಿಯನ್ನು ನಿಯೋಜಿಸಬೇಕು. ಜನಸಂದಣಿಯನ್ನು ಸುಗಮಗೊಳಿಸಲು ಕಿಖ ಕೋಡ್ ಅಥವಾ ಬಯೋಮೆಟ್ರಿಕ್ ತಂತ್ರಜ್ಞಾನದ ಬಳಕೆ ಮತ್ತು ವಿಭಿನ್ನ ವರ್ಗಗಳಿಗೆ (ಉದಾಹರಣೆ: ಪುರುಷರು, ಮಹಿಳೆಯರು, ವೃದ್ಧರು, ವಿಶೇಷಚೇತನರು) ಪ್ರತ್ಯೇಕ ಪ್ರವೇಶ ದ್ವಾರಗಳನ್ನು ಒದಗಿಸಬೇಕು.

ತುರ್ತು ನಿರ್ಗಮನ ಮಾರ್ಗಗಳನ್ನು ಸ್ಪಷ್ಟವಾಗಿ ಗುರುತಿಸಬೇಕು ಮತ್ತು ಯಾವುದೇ ಸಂದರ್ಭದಲ್ಲಿಯೂ ಲೌಡ್‌ಸ್ಪೀಕರ್‌ಗಳ ಮೂಲಕ ಸಾರ್ವಜನಿಕರಿಗೆ ಸೂಚನೆಗಳನ್ನು ನೀಡುವ ವ್ಯವಸ್ಥೆ ಇರಬೇಕು. ಅಲ್ಲದೆ, ತುರ್ತು ವಾಹನಗಳಾದ ಅಂಬುಲೆನ್ಸ್‌ಗಳಿಗೆ ಪಾರ್ಕಿಂಗ್ ವ್ಯವಸ್ಥೆ ಸೇರಿದಂತೆ ವೈದ್ಯಕೀಯ ನೆರವಿನ ವ್ಯವಸ್ಥೆಗಳನ್ನು ಖಚಿತಪಡಿಸಿಕೊಳ್ಳಬೇಕು.

ತುರ್ತು ಪರಿಸ್ಥಿತಿ ನಿರ್ವಹಣೆ

ಪ್ರತಿಭಟನೆ ಅಥವಾ ಹವಾಮಾನ ದುರಂತಗಳಂತಹ ಅನಿರೀಕ್ಷಿತ ಪರಿಸ್ಥಿತಿಗಳಿಗೆ ತಯಾರಿ ನಡೆಸಲು ಸಿಮ್ಯುಲೇಷನ್ ಡ್ರಿಲ್‌ಗಳನ್ನು ನಡೆಸುವ ಮೂಲಕ ರಕ್ಷಣಾ ತಂಡಗಳ ಜವಾಬ್ದಾರಿಗಳನ್ನು ಮೊದಲೇ ಗುರುತಿಸಬೇಕು. ಯಾವುದೇ ಘಟನೆಯ ಸಮಯದಲ್ಲಿ, ಪೊಲೀಸರು ಅನಗತ್ಯ ತಕರಾರುಗಳನ್ನು ತಪ್ಪಿಸಿ, ಸ್ಥಳೀಯರ ಸುರಕ್ಷತೆಗೆ ಆದ್ಯತೆ ನೀಡಬೇಕು. ಜನಸಂದಣಿ ನಿಯಂತ್ರಿಸಲು ಅಥವಾ ಚದುರಿಸಲು ಬಲವನ್ನು ಬಳಸುವ ಅನಿವಾರ್ಯತೆ ಬಂದಾಗ, ಮೂರು ಬಾರಿ ಎಚ್ಚರಿಕೆಗಳನ್ನು ನೀಡಿದ ನಂತರವೇ ಕಾನೂನು ರೀತಿ ನಡೆದಯಕೊಳ್ಳಬೇಕು ಮತ್ತು ಕಾನೂನುಬದ್ಧ ಬಂಧನಕ್ಕೆ ಮುಂದಾಗಬೇಕೆಂದು ಎಂದು ಮಾರ್ಗಸೂಚಿಯಲ್ಲಿದೆ.

ಜನಸಂದಣಿಯ ಸಂಚಾರ, ತೆಗೆದುಕೊಂಡ ನಿರ್ಧಾರಗಳು ಮತ್ತು ನೀಡಿದ ಎಚ್ಚರಿಕೆಗಳನ್ನು ಆಡಿಯೋ/ವಿಡಿಯೋ ದಾಖಲೆಗಳ ಮೂಲಕ ದಾಖಲಿಸಬೇಕು. ಕರ್ನಾಟಕ ಪೊಲೀಸ್ ಕಾಯಿದೆ **(KP Act)** ಮತ್ತು ಬಿಎನ್‌ಎಸ್‌ಎಸ್ *(BNSS – CrPC)* ಪಾಲನೆಯ ಮೂಲಕ ಸಾರ್ವಜನಿಕ ಭದ್ರತೆ, ಕಾನೂನು ಸುವ್ಯವಸ್ಥೆ ಮತ್ತು ಮಾನವ ಘನತೆ ಎತ್ತಿಹಿಡಿಯುವ ಗುರಿ ಹೊಂದಿದೆ ಎಂದು ಮಾರ್ಗಸೂಚಿಯಲ್ಲಿ ಉಲ್ಲೇಖಿಸಲಾಗಿದೆ.

### ಆಲಮಟ್ಟಿ- ನಾರಾಯಣಪುರ ಡ್ಯಾಂಗಳಲ್ಲಿ 80.58 ಟಿಎಂಸಿ ನೀರು ಸಂಗ್ರಹ

# ಕೃಷ್ಣಾ ಅಚ್ಚುಕಟ್ಟು ಪ್ರದೇಶಗಳಿಗೆ ಜುಲೈ 8 ರಿಂದ ನೀರು ಬಿಡುಗಡೆ



ಬಾಗಲಕೋಟೆ: ಆಲಮಟ್ಟಿ ಹಾಗೂ ನಾರಾಯಣಪುರ ಜಲಾಶಯಗಳಲ್ಲಿ 80.58 ಟಿಎಂಸಿ ನೀರು ಸಂಗ್ರಹವಾಗಿದ್ದು, ಜುಲೈ 8 ರಿಂದ ಕೃಷ್ಣಾ ಅಚ್ಚುಕಟ್ಟು ಪ್ರದೇಶಗಳಿಗೆ ಹೆಚ್ಚು ನೀರು ಹರಿಸಲು ತೀರ್ಮಾನ ಕೈಗೊಳ್ಳಲಾಗಿದೆ ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಕೃಷ್ಣಾ ಮೇಲ್ದಂಡೆ ನೀರಾವರಿ ಸಲಹಾ ಸಮಿತಿ ಅಧ್ಯಕ್ಷರಾದ ಆರ್.ಬಿ.ತಿಮ್ಮಾಪೂರ ತಿಳಿಸಿದರು.

ಬೆಂಗಳೂರಿನ ವಿಕಾಸಸೌಧದಲ್ಲಿ ಮಂಗಳವಾರ ಜರುಗಿದ ಕೃಷ್ಣಾ ಮೇಲ್ದಂಡೆ ಯೋಜನೆ ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನ ನೀರಾವರಿ ಸಲಹಾ ಸಮಿತಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಆಲಮಟ್ಟಿ ಮತ್ತು ನಾರಾಯಣಪುರ ಡ್ಯಾಂಗಳಲ್ಲಿ 80.58 ನೀರು ಸಂಗ್ರಹವಾಗಿದ್ದು, ಕಳೆದ ಸಾಲಿಗಿಂತ 54.77 ಟಿಎಂಸಿ ಹೆಚ್ಚುವರಿ ನೀರು ಸಂಗ್ರಹವಾಗಿದೆ. ಕೃಷ್ಣಾ ಮೇಲ್ದಂಡೆ ಯೋಜನೆಯ ಅಚ್ಚುಕಟ್ಟು ಪ್ರದೇಶವು ಮುಂಗಾರು ಹಂಗಾಮಿನ ಮಳೆ ಆಧರಿತವಾಗಿದ್ದು, ಮಳೆಯನ್ನು ಆಧರಿಸಿ ಅವಶ್ಯಕತೆಗೆ ತಕ್ಕಂತೆ ನೀರು ಹರಿಸಲು ಸಚಿವರು ಸೂಚಿಸಿದರು.

ಸಭೆಯಲ್ಲಿ ಜುಲೈ 8 ರಿಂದ ಮುಂದಿನ 120 ದಿನಗಳಿಗೆ ಮುಂಗಾರು ಹಂಗಾಮಿಗೆ ನೀರು ಪೂರೈಸಲು ತೀರ್ಮಾನಿಸಲಾಯಿತು. ಒಳಹರಿವು ಆಧರಿಸಿ ಕಾಲುವೆಗಳಿಗೆ ಸತತವಾಗಿ ನೀರು ಬಿಡಲು ಸಚಿವ ತಿಮ್ಮಾಪೂರ ಅಧಿಕಾರಿಗಳಿಗೆ ತಿಳಿಸಿದರು. ಸಭೆಯಲ್ಲಿ ಬೀಳಗಿ ಶಾಸಕ ಹಾಗೂ ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷ ಜೆ.ಟಿ.ಪಾಟೀಲ ಸೇರಿದಂತೆ ಆಲಮಟ್ಟಿ ಹಾಗೂ ನಾರಾಯಣಪುರ ಜಲಾಶಯಕ್ಕೆ ಸಂಬಂಧಿಸಿದ ಅಧಿಕಾರಿಗಳು ಉಪಸ್ಥಿತರಿದ್ದರು.

## 'ಜಾತಿಗಣತಿ' ವಿವರವನ್ನು ಆನ್‌ಲೈನ್‌ನಲ್ಲಿಯೂ ಸಲ್ಲಿಸುವ ವ್ಯವಸ್ಥೆ ಇದೆ: ಸಿಎಂ ಸಿದ್ದರಾಮಯ್ಯ



ಬೆಂಗಳೂರು: 'ಪರಿಶಿಷ್ಟ ಜಾತಿಯ ಒಳಮೀಸಲಾತಿ ಸಮೀಕ್ಷೆ ನಡೆಸಲು ಆನ್‌ಲೈನ್ ಸೇರಿದಂತೆ ಹಲವು ವ್ಯವಸ್ಥೆಯನ್ನು ಕಲ್ಪಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರತಿಕ್ರಿಯೆ ನೀಡಿದ್ದಾರೆ.

ಮಂಗಳವಾರ ಇಲ್ಲಿನ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಚೇರಿಯಲ್ಲಿ ಮಾಧ್ಯಮ ಪ್ರತಿನಿಧಿಗಳ ಜತೆ ಮಾತನಾಡಿದ ಅವರು, 'ಸಮೀಕ್ಷೆ ನಡೆಸಲಾಗಿದೆ' ಎಂಬ ಪೋಸ್ಟರ್ಗಳನ್ನು ಮನೆಗಳಿಗೆ ಭೇಟಿ ನೀಡದೇ, ಮನೆಯ ಮುಂದೆ ಅಂಟಿಸುತ್ತಿಲ್ಲ. ಬದಲಿಗೆ ಸಮೀಕ್ಷೆ ಮಾಡಲಾಗಿದೆ. ಹೀಗಾಗಿ ಪೋಸ್ಟರ್ ಹಾಕಿದ್ದಾರೆ ಎಂದರು.

ಶಿಕ್ಷಕರೇ ಖುದ್ದು ಪರಿಶೀಲನೆ ನಡೆಸಿ ಸಮೀಕ್ಷೆ ನಡೆಸಿದ್ದಾರೆ. ಅಲ್ಲದೆ, ಆನ್‌ಲೈನ್ ಮೂಲಕವೂ ಪರಿಶಿಷ್ಟ ಜಾತಿಯವರು ತಮ್ಮ ಜಾತಿಯ ವಿವರಗಳನ್ನು ನೀಡಬಹುದು ಅಥವಾ ಮನೆಗಳಿಗೆ ಭೇಟಿ ನೀಡಿ ಶಿಕ್ಷಕರು ವಿವರಗಳನ್ನು ಪಡೆದಿದ್ದಾರೆ. ಈ ಬಗ್ಗೆ ಸತ್ಯಾಸತ್ಯತೆ ತಿಳಿದು ಮಾಧ್ಯಮದವರು ಪ್ರಶ್ನಿಸಬೇಕು ಎಂದು ಸಿದ್ದರಾಮಯ್ಯ ತಿಳಿಸಿದರು.

### ಸ್ವಚ್ಛ ಸರ್ವೇಕ್ಷಣ ಗ್ರಾಮೀಣ-2025 ಸರ್ವೇ ನಡೆಸಲು ಬರುವ ಸಂಸ್ಥೆಗೆ ಅಗತ್ಯ ಸಹಕಾರ ಮತ್ತು ಸೂಕ್ತ ಮಾಹಿತಿ ನೀಡಿ : ಜಿಪಂ ಸಿಇಒ ರಾಹುಲ್ ಶಿಂಧೆ

# ಜಿಲ್ಲೆಯ ಎಲ್ಲ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚನೆ



ಬೆಳಗಾವಿ(ಜು.01) : ಸ್ವಚ್ಛ ಭಾರತ ಮಿಷನ್(ಗ್ರಾ) ಯೋಜನೆಯಡಿ ಜಿಲ್ಲೆಯಲ್ಲಿ ಗ್ರಾಮೀಣ ಸ್ವಚ್ಛತೆ, ನೈರ್ಮಲ್ಯ ಕಾಪಾಡುವಿಕೆ, ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆ, ಬಯಲು ಬಹಿರ್ದೆಸೆ ಮುಕ್ತ ಸುಸ್ಥಿರತೆ ಕಾಯ್ದುಕೊಳ್ಳಲು ಹಲವು ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಈ ಎಲ್ಲಾ ಘಟಕಾಂಶಗಳ ಪ್ರಗತಿ ಹಾಗೂ ಸುಸ್ಥಿರತೆಯಲ್ಲಿ ಸಮುದಾಯ ಭಾಗವಹಿಸುವಿಕೆಗೆ ಹಮ್ಮಿಕೊಂಡಿರುವ ಹಲವು ಚಟುವಟಿಕೆಗಳ ಕುರಿತು ಕೇಂದ್ರ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ವತಿಯಿಂದ ಪ್ರತಿ ವರ್ಷ "ಸ್ವಚ್ಛ ಸರ್ವೇಕ್ಷಣ ಗ್ರಾಮೀಣ" ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ.

ಈ ಸಮೀಕ್ಷೆಯಿಂದ ಜಿಲ್ಲೆ ಹಾಗೂ ಗ್ರಾಮ ಪಂಚಾಯತಿಗಳ ಪ್ರಗತಿ ಪರಿಶೀಲಿಸಿ ಅಂಕಗಳನ್ನು ನೀಡುವ ಮೂಲಕ ಶ್ರೇಯಾಂಕವನ್ನು ನೀಡಿ ಅತಿ ಹೆಚ್ಚು ಅಂಕಗಳನ್ನು ಪಡೆದ ಜಿಲ್ಲೆಗಳಿಗೆ ಸನ್ಮಾನವನ್ನು ಸಹ ನೀಡಲಾಗುತ್ತಿದೆ. ಅಲ್ಲದೇ ಸಮೀಕ್ಷೆಯಿಂದ ಸ್ವಚ್ಛ ಭಾರತ ಮಿಷನ್(ಗ್ರಾ) ಯೋಜನೆಯಡಿ ಈವರೆಗೆ ನಿರ್ಮಿಸಿದ ಘಟಕಗಳ ಪ್ರಗತಿಯನ್ನು ಮೌಲ್ಯಮಾಪನ ನಡೆಸುವಂತಾಗುತ್ತದೆ.

ಸ್ವಚ್ಛ ಸರ್ವೇಕ್ಷಣ ಗ್ರಾಮೀಣ-2025ರ ಸರ್ವೆ ಕಾರ್ಯಕ್ಕೆ ಪ್ರತಿ ಜಿಲ್ಲೆಯಿಂದ 20 ಗ್ರಾಮಗಳನ್ನು ಆಯ್ಕೆ ಮಾಡಿಕೊಳ್ಳಲಾಗಿರುತ್ತದೆ. ವೈಯಕ್ತಿಕ ಗೃಹ ಶೌಚಾಲಯ, ಸಮುದಾಯ ಶೌಚಾಲಯ, ಘನ ತ್ಯಾಜ್ಯ ನಿರ್ವಹಣಾ ಘಟಕ, ದ್ರವ ತ್ಯಾಜ್ಯ ನಿರ್ವಹಣೆ, ಗೋಬರ್-ಧನ್ ಘಟಕ, ಮಾಹಿತಿ ಶಿಕ್ಷಣ ಮತ್ತು ಸಂವಹನ ಹಾಗೂ ತರಬೇತಿ ಕಾರ್ಯಕ್ರಮಗಳ ಕುರಿತು ನೇರವಾಗಿ ಪರಿಶೀಲಿಸಲಿದ್ದಾರೆ ಹಾಗೂ ಸಾರ್ವಜನಿಕರಿಂದ ಖಖಉ-2025 ಒಕಿಭುಟಜ ೦ಠಿಠಿ ಮೂಲಕ ಸ್ವಚ್ಛ ಭಾರತ ಮಿಷನ್(ಗ್ರಾ) ಯೋಜನೆಯಡಿ ಪಡೆದ ಸೌಲಭ್ಯಗಳ ಕುರಿತು ಅಭಿಪ್ರಾಯ ಸಂಗ್ರಹಿಸಲಿದ್ದಾರೆ.

ಸರ್ವೆ ಕಾರ್ಯವು ದಿನಾಂಕ 22.06.2025 ರಿಂದ 15.07.2025ರವರೆಗೆ ನಡೆಸುವುದಾಗಿ ತಿಳಿಸಿದ್ದು, ಈ ಕಾರ್ಯಕ್ಕೆ ಕೇಂದ್ರ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯು, ೦ಭಿಚಿಜಜಟಥಿ ಠಜಿ ಒಚಿಟಿಚಿರಜಟಜಟಣ ಖಣಣಜಜಭ(೦ಒಖ) ಐಣಛಿ ಇಟಿಠಿತಿ ಎಂಬ ಸಂಸ್ಥೆಯನ್ನು ನೇಮಿಸಿಕೊಂಡಿದೆ. ಈ ಸಂಸ್ಥೆಯ ಪ್ರತಿನಿಧಿಗಳು ನಿಗದಿತ ದಿನಾಂಕದಂದು ಕೇಂದ್ರ ಸರ್ಕಾರ ನೀಡಿರುವ ಗ್ರಾಮಗಳಿಗೆ ನೇರವಾಗಿ ಸರ್ವೇ ಕಾರ್ಯಕ್ಕೆ ಭೇಟಿ ನೀಡಿ ಸರ್ವೆ ನಡೆಸಲಿದ್ದು ಈ ಸಂಸ್ಥೆಯ ಪ್ರತಿನಿಧಿಗಳು ಆಯ್ದ ಗ್ರಾಮ ಪಂಚಾಯತಿಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಇವರಿಗೆ ಅಗತ್ಯ ಸಹಕಾರ ಮತ್ತು ಸೂಕ್ತ ಮಾಹಿತಿ ನೀಡಲು ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಜಿಪಂ ಸಿಇಒ ರಾಹುಲ್ ಶಿಂಧೆ ರವರು ಸೂಚನೆ ನೀಡಿದ್ದಾರೆ.

ಸದರಿ ವಿಷಯವನ್ನು ಅತೀ ಜರೂರು ಎಂದು ಭಾವಿಸಿ ತಮ್ಮ ತಾಲೂಕಿನಲ್ಲಿ ಈವರೆಗೆ ಸ್ವಚ್ಛ ಭಾರತ ಮಿಷನ್(ಗ್ರಾ) ಯೋಜನೆಯಡಿ ನಿರ್ಮಿಸಿದ ವಿವಿಧ ಘಟಕಗಳು ನಿರಂತರ ಕಾರ್ಯಾಚರಣೆ ಮತ್ತು ಸುಸ್ಥಿರತೆ ಕಾಯ್ದುಕೊಳ್ಳಲು ಅಗತ್ಯ ಕ್ರಮವಹಿಸುವುದು ಹಾಗೂ ಸ್ವಚ್ಛ ಸರ್ವೇಕ್ಷಣ ಗ್ರಾಮೀಣ-2025ರ ಕುರಿತು ಗ್ರಾಮ ಪಂಚಾಯತಿಗಳಿಗೆ ಹಾಗೂ ಸಾರ್ವಜನಿಕರಿಗೆ ಮಾಹಿತಿ ನೀಡುವಂತಹ ಮಾಹಿತಿ ಶಿಕ್ಷಣ ಮತ್ತು ಸಂವಹನ ಕಾರ್ಯಕ್ರಮಗಳು ಮತ್ತು ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಸಾರ್ವಜನಿಕರು ಖಖಉ-2025 ಒಕಿಭುಟಜ ೦ಠಿಠಿ ನಲ್ಲಿ ತಾವೂ ಖಃಒ-ಉ ಅಡಿ ಪಡೆದಿರುವ ಸೌಲಭ್ಯಗಳ ಕುರಿತು ಮಾಹಿತಿ ನೀಡಲು ಪ್ರೇರೇಪಿಸುವಂತಹ ಸಂದೇಶಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಪ್ರಚಾರ ಪಡಿಸಿ "ಸ್ವಚ್ಛ ಸರ್ವೇಕ್ಷಣ ಗ್ರಾಮೀಣ- 2025" ರ ಸರ್ವೆ ಕಾರ್ಯವನ್ನು ಯಶಸ್ವಿಗೊಳಿಸುವಂತೆ ಜಿಪಂ ಸಿಇಒ ರಾಹುಲ್ ಶಿಂಧೆ ರವರು ತಾಲೂಕಿನ ಎಲ್ಲ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

# ರಾಜ್ಯದಲ್ಲಿ ಮೂರು ದಿನಗಳ ಕಾಲ ಸಾಧಾರಣ ಮಳೆ ನಿರೀಕ್ಷೆ

ಬೆಂಗಳೂರು, ಜು.1- ರಾಜ್ಯದಲ್ಲಿ ನಾಲ್ಕೈದು ದಿನಗಳಿಂದ ಮಳೆ ಪ್ರಮಾಣ ಇಳಿಕೆಯಾಗಿದ್ದು, ಪ್ರಮುಖ ನದಿಗಳ ನೀರಿನ ಮಟ್ಟವೂ ಇಳಿಕೆಯಾಗಿದೆ. ಕರಾವಳಿ ಮತ್ತು ಮಲೆನಾಡು ಭಾಗದ ಜಿಲ್ಲೆಗಳಲ್ಲಿ ಮಳೆ ಮುಂದುವರೆದಿದೆ. ಒಳನಾಡಿನ ಹಲವು ಜಿಲ್ಲೆಗಳಲ್ಲಿ ಮಳೆ ಕೊರತೆ ಮುಂದುವರೆದಿದೆ.

ವಾತಾವರಣದಲ್ಲಿ ಉಂಟಾಗಿರುವ ಕೆಲವು ಬದಲಾವಣೆಗಳಿಂದಾಗಿ ರಾಜ್ಯದ ಹಲವು ಕಡೆಗಳಲ್ಲಿ ಮೋಡ ಕವಿದ ವಾತಾವರಣ ಇರಲಿದ್ದು, ಕೆಲವೆಡೆ ಹಗುರದಿಂದ ಸಾಧಾರಣ ಮಳೆಯಾಗಲಿದೆ. ಕರಾವಳಿ ಹಾಗೂ ಕರಾವಳಿಗೆ ಹೊಂದಿಕೊಂಡಿರುವ ಜಿಲ್ಲೆಗಳಲ್ಲಿ ವ್ಯಾಪಕ ಪ್ರಮಾಣದ ಸಾಧಾರಣ ಮಳೆಯಾಗುವ ಸಾಧ್ಯತೆಗಳಿವೆ.

ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಮಾಹಿತಿ ಪ್ರಕಾರ ನಿನ್ನೆ ಕರಾವಳಿ ಹಾಗೂ ಮಲೆನಾಡು ಭಾಗದ ಜಿಲ್ಲೆಗಳಲ್ಲಿ ವ್ಯಾಪಕ ಪ್ರಮಾಣದ ಮಳೆಯಾಗಿದೆ. ಕೆಲವೆಡೆ ಚದುರಿದಂತೆ ಮಳೆಯಾಗಿದ್ದು, ಮತ್ತೆ ಕೆಲವೆಡೆ ಅಲ್ಲಲ್ಲಿ ಅತ್ಯಲ್ಪ ಮಳೆಯಾಗಿದ್ದು, ಒಳನಾಡಿನ ಬಹುತೇಕ ಜಿಲ್ಲೆಗಳಲ್ಲಿ ಒಣ ಹವೆ ಮುಂದುವರೆದಿದೆ.

ಇದರಿಂದ ಪ್ರಮುಖ ನದಿಗಳ ನೀರಿನ ಮಟ್ಟ ಹಾಗೂ ಜಲಾಶಯಗಳ ಒಳ ಹರಿವು ಮತ್ತು ಹೊರ ಹರಿವಿನಲ್ಲಿ ಇಳಿಕೆಯಾಗಿದೆ. ಒಟ್ಟಾರೆ, ರಾಜ್ಯದ ಪ್ರಮುಖ ಜಲಾಶಯಗಳಲ್ಲಿ ಶೇ.60ಕ್ಕೂ ಹೆಚ್ಚು ನೀರು ಸಂಗ್ರಹವಾಗಿದ್ದು, ಕಳೆದ ಬಾರಿಗಿಂತ ದುಪ್ಪಟ್ಟು ನೀರು ಸಂಗ್ರಹವಾಗಿದೆ.

ಬೆಳಗಾವಿ ಜಿಲ್ಲೆ ಖಾನಾಪುರ ತಾಲ್ಲೂಕಿನ ಪರವಾಡ ಗ್ರಾಮ ಪಂಚಾಯ್ತಿ ವ್ಯಾಪ್ತಿಯಲ್ಲಿ 72.5 ಮಿ.ಮೀ.ನಷ್ಟು ರಾಜ್ಯದಲ್ಲೇ ಅತಿ ಹೆಚ್ಚು ಮಳೆಯಾಗಿದೆ. ರಾಜಧಾನಿ ಬೆಂಗಳೂರು ಸೇರಿದಂತೆ ಸುತ್ತಮುತ್ತಲ ಜಿಲ್ಲೆಗಳಲ್ಲಿ ಮೋಡ ಕವಿದ ವಾತಾವರಣವಿದ್ದು, ಇಂದಿನಿಂದ ಮೂರು ದಿನಗಳ ಕಾಲ ಹಗುರದಿಂದ ಸಾಧಾರಣ ಮಳೆಯಾಗುವ ಮುನ್ಸೂಚನೆಗಳಿವೆ.

ಮುಂಗಾರು ಹಂಗಾಮಿನ ಮೊದಲ ತಿಂಗಳಾದ ಜೂನ್‌ನಲ್ಲಿ ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗಿದೆ. 66 ಮಿ.ಮೀ. ವಾಡಿಕೆ ಮಳೆಗೆ 50 ಮಿ.ಮೀ. ನಷ್ಟು ಮಳೆಯಾಗಿದ್ದು, ಶೇ.24ರಷ್ಟು ಮಳೆ ಕೊರತೆ ಉಂಟಾಗಿದೆ. ಉತ್ತರ ಒಳನಾಡಿನಲ್ಲಿ ವಾಡಿಕೆಗಿಂತ ಶೇ. 6ರಷ್ಟು ಕಡಿಮೆ ಮಳೆಯಾಗಿದೆ. ಆದರೆ, ಮಲೆನಾಡಿನಲ್ಲಿ ಶೇ.14, ಕರಾವಳಿಯಲ್ಲಿ ಶೇ.6 ಹಾಗೂ ರಾಜ್ಯದಲ್ಲಿ ಶೇ. 2ರಷ್ಟು ವಾಡಿಕೆಗಿಂತ ಅಧಿಕ ಮಳೆಯಾಗಿದೆ. ಜೂನ್ ಒಂದರಿಂದ 30ರ ವರೆಗಿನ ಅವಧಿಯಲ್ಲಿ ರಾಜ್ಯದ ವಾಡಿಕೆ ಮಳೆ ಪ್ರಮಾಣ 199 ಮಿ.ಮೀ. ಆಗಿದ್ದು, 203 ಮಿ.ಮೀ.ನಷ್ಟು ಮಳೆ ಬಿದ್ದಿದೆ.

# ವನ್ನೂರ ಗ್ರಾಮಕ್ಕೆ ಎ ಸಿ ಪ್ರಭಾವತಿ ಪಕೀರಪೂರ ಭೇಟಿ



ನೇಸರಗಿ. ಸಮೀಪದ ವನ್ನೂರ ಗ್ರಾಮಕ್ಕೆ ಬೈಲಹೊಂಗಲ ಉಪವಿಭಾಗಧಿಕಾರಿಗಳಾದ ಶ್ರೀಮತಿ ಪ್ರಭಾವತಿ ಫಕೀರಪೂರ ಅವರು ಗ್ರಾಮದ ಪರಿಶಿಷ್ಟ ಜಾತಿ ಕಾಲನಿ ಗೆ ಭೇಟಿ ನೀಡಿ ಎಸ್ ಸಿ ಜನಾಂಗದವರ ಕುಂದು ಕೋರತೆಗಳನ್ನು ಆಲಿಸಿದರು ಹಾಗೂ ಎಸ್ ಸಿ ಕಾಲನಿಯ ಅಂಗನವಾಡಿ, ಕಾಲನಿ ಜನರ ನೀರಿನ ಸೌಕರ್ಯ, ಮೂಲಭೂತ ಸೌಕರ್ಯಗಳ ಕುರಿತು ಕಾಲನಿ ಜನರೊಂದಿಗೆ ಮುಕ್ತವಾಗಿ ಚರ್ಚೆ ಮಾಡಿ ಕುಂದು ಕೊರತೆಗಳನ್ನು ಅಳಿಸಿದರು.

ಗ್ರಾಮಕ್ಕೆ ಬೇಟಿ ನೀಡಿ ಮಾತನಾಡಿ ಇಲ್ಲಿನ ಜನರಿಗೆ ಸರ್ಕಾರದಿಂದ ಅನೇಕ ಸವಲತ್ತು ದೊರಕುತಿದ್ದು ಅದರ ಪ್ರಯೋಜನ ಪಡೆಯಲು ಜನಾಂಗದ ಜನರಿಗೆ ತಿಳಿಸಿದರು.

ದಲಿತ ಮುಖಂಡ ಮನೋಜ ಕೆಳಗೇರಿ ಎ ಸಿ ಅವರಿಗೆ ಇಲ್ಲಿನ ಮಹಿಳೆಯರಿಗೆ ಶೌಚಾಲಯ ಸಮಸ್ಯ ಇದ್ದು ಅದರ ಅನುಕೂಲ ಕಲ್ಪಿಸಲು ಮನವಿ ಮಾಡಿದರು.

ಈ ಸಂಧರ್ಭದಲ್ಲಿ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ಶಿವಾನಂದ ಕಲ್ಲೂರ, ಗ್ರಾಮ ಲೆಕ್ಕಧಿಕಾರಿ ಬಸವರಾಜ ಕೆರಕನವರ, ಗ್ರಾಮ ಪಂಚಾಯತಿ ಸದಸ್ಯರಾದ ಅಶೋಕ ಕೆಳಗೇರಿ, ಶ್ರೀಮತಿ ಮಧುಮತಿ ಕೆಳಗೇರಿ ಹಾಗೂ ಊರಿನ ಪ್ರಮುಖರು ಹಾಜರಿದ್ದರು.

# ಶಾಸಕರ ನಮ್ಮ ನಡುವೆ ಭಿನ್ನಾಭಿಪ್ರಾಯವಿಲ್ಲ: ಸಚಿವ ಸತೀಶ್ ಜಾರಕಿಹೊಳಿ



ಬೆಳಗಾವಿ: ಶಾಸಕರ ಬಳಿ ನಾವು ಪತ್ರ ಪಡೆಯುತ್ತೇವೆ. ನೀವು ಪತ್ರ ನೀಡಿ ಎಂದಾಗ ಅಧಿಕಾರಿಗಳಿಗೆ ವರ್ಗಾವಣೆಗಾಗಿ ನಾವು ಪತ್ರ ನೀಡಿರುತ್ತೇವೆ ಅಷ್ಟೇ. ಹೀಗಾಗಿ ಅಧಿಕಾರಿಗಳ ವರ್ಗಾವಣೆಯ ಸಮಸ್ಯೆ ಇಲ್ಲ. ಈ ಪ್ರಕ್ರಿಯೇ ಸದಾ ನಡೆಯುತ್ತದೆ. ಈ ವಿಷಯದಲ್ಲಿ ಶಾಸಕರ ನಮ್ಮ ನಡುವೆ ಯಾವುದೇ ಭಿನ್ನಾಭಿಪ್ರಾಯವಿಲ್ಲ ಎಂದು ಲೋಕೋಪಯೋಗಿ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ನಗರದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿ, ಬೆಳಗಾವಿ ಜಿಲ್ಲೆಯ ಅಧಿಕಾರಿಗಳ ವರ್ಗಾವಣೆ ಕುರಿತು ಪ್ರತಿಕ್ರಿಯಿಸಿದ ಅವರು, ರಾಜಕೀಯವೆಂದರೇ ಆರೋಪಗಳನ್ನು ಮಾಡುವುದು ಸಹಜ. ಎಲ್ಲ ಅಧಿಕಾರಿಗಳು 4 ವರ್ಷ ಸೇವೆ ಸಲ್ಲಿಸಬೇಕೆಂಬುದು ನಮ್ಮ ಆಶಯ. ಯಾವುದೇ ಅಧಿಕಾರಿಯನ್ನ ಒಂದೇ ವರ್ಷದಲ್ಲಿ ಬದಲಾವಣೆ ಮಾಡುವ ಪದ್ಧತಿ ನಮ್ಮಲ್ಲಿಲ್ಲ. ದೆಹಲಿಯಲ್ಲಿ ಅಧಿಕಾರಿ ಬದಲಾವಣೆ ಬಗ್ಗೆ ಯಾವುದೇ ಚರ್ಚೆಯಾಗಿಲ್ಲ ಎಂದರು. ನಮ್ಮಲ್ಲಿ ಯಾವುದೇ ಅಸಮಾಧಾನವಿಲ್ಲ. ಸಾರ್ವಜನಿಕ ಸೇವಕರೆಂಬ ಭಾವನೆ ನಮ್ಮಲ್ಲಿದೆ. ಅಧಿಕಾರಿಗಳ ವರ್ಗಾವಣೆ ಸಾಮಾನ್ಯ ಗಂಭೀರ ವಿಷಯವಲ್ಲ ಎಂದರು. ಬೈಲಹೊಂಗಲ್ ಎಸಿ ಅವರಿಂದ ಸರ್ಕಾರಿ ಜಮೀನನ್ನು ಖಾಸಗಿ ಜಮೀನು ಎಂದು ಪರಿವರ್ತಿಸಿದ ವಿಷಯಕ್ಕೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳಿಂದ ವರದಿ ಪಡೆಯಲಾಗುವುದು. ಈ ಕುರಿತು ಜಿಲ್ಲಾಧಿಕಾರಿಗಳು ತನಿಖೆ ಮಾಡುತ್ತಾರೆ. ಅಕ್ರಮ ಎಸಗಿದ್ದರೆ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುತ್ತಾರೆಂದು ತಿಳಿಸಿದರು.

ಈಚೆಗೆ ಸಿಎಂ ಸಿದ್ದರಾಮಯ್ಯ ಅವರೊಂದಿಗೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿಯಾಗಿದ್ದ ಕುರಿತು ಮಾಹಿತಿ ನೀಡಿದ ಅವರು, ತೆರಿಗೆ ಪಾಲಿನಲ್ಲಿ ರಾಜ್ಯಕ್ಕೆ ನ್ಯಾಯಯುತ ಪಾಲು ಸಿಗುತ್ತಿಲ್ಲ, ಇನ್ಮುಂದೆಯಾದರು ರಾಜ್ಯಕ್ಕೆ ತೆರಿಗೆ ಪಾಲಿನಲ್ಲಿ ಅನ್ಯಾಯ ಆಗಬಾದರೆಂದು ಮನವಿ ಮಾಡಿದ್ದಾಗಿ ಹೇಳಿದರು.

ಸರ್ವಿಸ್ ರಸ್ತೆಗಳು ಹಾಳಾಗಿದ್ದರ ಕುರಿತು ಎನ್‌ಎಚ್‌ಐ ಅಧಿಕಾರಿಗಳ ಗಮನಕ್ಕೆ ತರುತ್ತೇನೆ. ಈ ಹಿಂದೆ ಗೋವಾಗೆ ಸಂಪರ್ಕಿಸುವ ರಸ್ತೆ ಹಾಳಾಗಿದ್ದರ ಬಗ್ಗೆ ಗಮನಕ್ಕೆ ತಂದಾಗ ಎನ್‌ಎಚ್‌ಐ ಅಧಿಕಾರಿಗಳು ಶೀಘ್ರವೇ ಟೆಂಟರ್ ಕರೆದು ಅನುದಾನ ಬಿಡುಗಡೆಗೊಳಿಸಿ ರಸ್ತೆಯನ್ನು ಅಭಿವೃದ್ಧಿಪಡಿಸಿದ್ದಾರೆ ಎಂದರು.

ಹುಕ್ಕೇರಿ ತಾಲೂಕಿನ ಇಂಗಳಗಿಯಲ್ಲಿ ಶ್ರೀರಾಮಸೇನಾ ಕಾರ್ಯಕರ್ತರನ್ನು ಮರಕ್ಕೆ ಕಟ್ಟಿ ಥಳಿಸಿದ ಘಟನೆಯ ಹಿನ್ನೆಲೆ ಬೇರೆಯಾಗಿದೆ. ಶ್ರೀರಾಮಸೇನೆ ಅಥವಾ ಮುಸ್ಲಿಂ ಯುವಕರ ಜಗಳವಲ್ಲ. ಈಗಾಗಲೇ ಪೊಲೀಸರು ತಮ್ಮ ತನಿಖೆಯನ್ನು ಆರಂಭಿಸಿದ್ದಾರೆ ಎಂದರು.

ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್‌ಸಿಂಗ್ ಸುರ್ಜೇವಾಲಾ ಅವರು ನಡೆಸುತ್ತಿರುವ ಸಭೆಗೆ ಶಾಸಕ ರಾಜು ಕಾಗೆ ಗೈರಾದ ಬಗ್ಗೆ ಮಾತನಾಡಿ, ಬೆಳಗಾವಿಯಲ್ಲಿ ಇಂದು ಅಧಿಕಾರಿಗಳ ಸಭೆ ಇತ್ತು. ಹೀಗಾಗಿ ನಾಳೆ ಹೋಗಿ ಸುರ್ಜೇವಾಲಾ ಅವರನ್ನ ಭೇಟಿ ಆಗುತ್ತಾರೆ. ಇದಕ್ಕೆ ಬೇರೆ ಅರ್ಥ ಕಲ್ಪಿಸುವುದು ಬೇಡವೆಂದು ಮಾಧ್ಯವದವರಿಗೆ ಪ್ರತಿಕ್ರಿಯೇ ನೀಡಿದರು.

# ನೂತನ ಪೊಲೀಸ್ ಠಾಣೆ ಕಟ್ಟಡ ಕಾಮಗಾರಿಗೆ ಚಾಲನೆ ನೀಡಿದ ಸಚಿವ ಸತೀಶ್ ಜಾರಕಿಹೊಳಿ

## ಕಾಕತಿಯಲ್ಲಿ ಸ್ಮಾರ್ಟ್ ಸಿಟಿ ಯೋಜನೆಗಳ ಲೋಕಾರ್ಪಣೆ



ಬೆಳಗಾವಿ: ತಾಲೂಕಿನ ಕಾಕತಿಯಲ್ಲಿ 2.5 ಕೋಟಿ ರೂ. ವೆಚ್ಚದಲ್ಲಿ ನೂತನವಾಗಿ ನಿರ್ಮಿಸಲಾಗುತ್ತಿರುವ ಪೊಲೀಸ್ ಠಾಣೆ ಕಟ್ಟಡ ಕಾಮಗಾರಿಗೆ ಸಚಿವ ಸತೀಶ ಜಾರಕಿಹೊಳಿ ಅವರು ಚಾಲನೆ ನೀಡಿದರು.

ನಂತರ ಕಾಕತಿಯಲ್ಲಿ ಸಿಸಿಟಿವಿ ಅಳವಡಿಕೆ ಮತ್ತು ನೂತನ ಬಸ್ ತಂಗುದಾಣವನ್ನು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರು ಲೋಕಾರ್ಪಣೆಗೊಳಿಸಿದರು.

ಸ್ಮಾರ್ಟ್ ಸಿಟಿ ವ್ಯವಸ್ಥಾಪಕರಾದ ಸಯೀದಾ ಅಫ್ರೀನಾಬಾನು ಬಳ್ಳಾರಿ ಅವರು ಮಾತನಾಡಿ, ಸ್ಮಾರ್ಟ್ ಸಿಟಿ ಯೋಜನೆಯಡಿಯಲ್ಲಿ ಪ್ರಥಮಬಾರಿ ಕಾಕತಿ ಗ್ರಾಮದಲ್ಲಿ 2 ಕೋಟಿ ಅನುದಾನದಲ್ಲಿ ವಿವಿಧ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ಎಂದರು.

ಎರಡು ಶುದ್ಧ ಕುಡಿಯುವ ನೀರಿನ ಘಟಕ, ಸುಸಜ್ಜಿತ ಅತ್ಯಾಧುನಿಕ ಸ್ಮಾರ್ಟ್ ಬಸ್ ತಂಗುದಾಣ, ಕಾಕತಿ ಗ್ರಾಮದಲ್ಲಿನ ರಸ್ತೆ, ಒಳಚರಂಡಿ, 27 ಬೀದಿ ದೀಪಗಳ ಅಭಿವೃದ್ಧಿ ಮಾಡಲಾಗಿದೆ. 24 ಅತ್ಯಾಧುನಿಕ ಸಿಸಿಟಿವಿ ಕಣ್ಗಾವಲು ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಚಿವರ ಆಪ್ತ ಸಹಾಯಕ ಅರವಿಂದ ಕಾರ್ಚಿ, ಮಹಾಂತೇಶ ಮಗದುಮ್ಮ, ಮಲಗೌಡ ಪಾಟೀಲ ಮಾರುತಿ ಗುಟಗುದ್ದಿ, ಮಾಜಿ ಜಿಪಂ ಸಿದ್ದುಗೌಡ ಸುಣಗಾರ, ಕಾಕತಿ ಪೊಲೀಸ್ ಠಾಣೆ ಸಿಪಿಐ ಸುರೇಶ ಸಿಂಗಿ, ಪಿಎಸ್ ಐ ಮಂಜುನಾಥ ನಾಯಕ, ಮೃತ್ಯುಂಜಯ ಮಠದ, ಪರಶುರಾಮ ನಾರವೇಕರ್, ಹೊಳಿ ನಾರಾಯಣ, ಯಲ್ಲಪ ಮುಚ್ಚಂಡಿ, ಗಂಗಾಧರ ವರಗ, ಕಾಕತಿ ಅಧ್ಯಕ್ಷೇ ವರ್ಷಾ ಮುಚ್ಚಂಡಿಕರ್, ಉಪಾಧ್ಯಕ್ಷರಾದ ರೇಣುಕಾ ಕೊಳಿ ಹಾಗೂ ಇತರರು ಇದ್ದರು.

# ಡಾಂಬರೀಕರಣಕ್ಕೆ ಒತ್ತಾಯಿಸಿ ರೈತಸಂಘ ಶಾಸಕರಿಗೆ ಮನವಿ



ಜಮಖಂಡಿ: ನಗರದ ಶಾಸಕ ಗೃಹ ಕಛೇರಿಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘದವರು ಮೈಗೂರದಿಂದ ಶಿರಗುಪ್ಪಿ ಹಾಗೂ ಪುನರವಸತಿ ಕೇಂದ್ರದವರೆಗೆ ರಸ್ತೆ ರಿಪೇರಿ ಸಹಿತ ಡಾಂಬರೀಕರಣಕ್ಕೆ ಒತ್ತಾಯಿಸಿ ಶಾಸಕ ಜಗದೀಶ ಗುಡಗುಂಟಿ ಅವರಿಗೆ ಮನವಿ ಸಲ್ಲಿಸಿದರು. ಇದೇ ಸಂದರ್ಭದಲ್ಲಿ ರೈತ ಸಂಘದ ತಾಲೂಕ ಘಟಕ ಅಧ್ಯಕ್ಷ ಶ್ರೀಶೈಲ ಭೂಮಾರ, ರೈತರಾದ ಕಲ್ಲಪ್ಪ ಬಿರಾದಾರ ಶಿರಗುಪ್ಪಿ ಗ್ರಾಮಸ್ಥರು, ರೈತರು ಇದ್ದರು.

# ತಾಲೂಕಾ ನಿವೃತ್ತ ನೌಕರರ ಸಂಘದಿಂದ ಪ್ರತಿಭಟನೆ



ಜಮಖಂಡಿ: ನಗರದ ತಾಲೂಕಾಡಳಿತ ಭವನದ ಎದುರಿಗೆ ಕರ್ನಾಟಕ ರಾಜ್ಯ ಸರಕಾರಿ ನಿವೃತ್ತ ನೌಕರರ ಸಂಘದ ತಾಲೂಕ ಘಟಕ ಪದಾಧಿಕಾರಿಗಳು ಪ್ರಮುಖ ಬೇಡಿಕೆ ಈಡೇಸುವಂತೆ ಒತ್ತಾಯಿಸಿ ಪ್ರತಿಭಟನೆ ನಡೆಸಿದರು.

ರಾಷ್ಟ್ರದ ಎಲ್ಲ ಹಿರಿಯ ನಾಗರಿಕರು ರಾಷ್ಟ್ರದ ಸಂಪತ್ತು ಎಂದು ಘೋಷಣೆ ಮಾಡಬೇಕು. ಆರ್ಥಿಕವಾಗಿ ದುರ್ಬಲ ಎಲ್ಲ ಹಿರಿಯ ನಾಗರಿಕರಿಗೆ ಮಾಸಿಕ 10 ಸಾವಿರ ವೃದ್ಧಾಪಿವೇತನ ನೀಡಬೇಕು. ಕೇಂದ್ರ ಮತ್ತು ಎಲ್ಲ ರಾಜ್ಯ ಸರ್ಕಾರಗಳಲ್ಲಿ ಹಿರಿಯ ನಾಗರಿಕರಿಗಾಗಿ ಪ್ರತ್ಯೇಕ ಸಚಿವಾಲಯ ಸಚಿವರನ್ನು ನೇಮಕ ಮಾಡಬೇಕು. ಹಿರಿಯ ನಾಗರಿಕರ ರೇಲ್ವೆ ಪ್ರಯಾಣದಲ್ಲಿ ರಿಯಾಯತಿ ತಕ್ಷಣ ಆರಂಭಿಸುವದು.ಹಿರಿಯ ನಾಗರಿಕರ ಆಯುಷ್ಮಾನ ಭಾರತ ಆರೋಗ್ಯ ವಿಮೆ ಕಾರ್ಡ ಕರ್ನಾಟಕ ರಾಜ್ಯದಲ್ಲಿ ನಿಷ್ಕ್ರಿಯವಾಗಿದ್ದು ತಕ್ಷಣವೇ ಸರಿಪಡಿಸಬೇಕೆಂದು ಒತ್ತಾಯಿಸಿದರು.

ಇದೇ ಸಂದರ್ಭದಲ್ಲಿ ಗೌರವಾಧ್ಯಕ್ಷ ಯು..ಕೆ.ಗಸ್ತಿ, ಎಚ್.ಎಂ.ಶೆಟ್ಟರ, ಎಲ್.ಆರ್.ಪವಾರ, ಎಲ್.ಬಿ. ಮೀಸಿ, ಕೆ.ಜಿ. ಘಂಟಿ, ಎಸ್.ಕೆ. ಪಡೆನ್ನವರ, ಸಿ.ಪಿ.ಮೇಗಾಡೆ. ಎಂ.ಡಿ.ಸಂಕ ಸಹಿತ ಹಲವರು ಇದ್ದರು.

## ಖೇಲೋ ಇಂಡಿಯಾ ಕಿಡ್ಸ್ ಅಥ್ಲೇಟಿಕ್ಸ್ ಕ್ರೀಡಾಕೂಟದಲ್ಲಿ ಧಾರವಾಡ ಕ್ರೀಡಾಪಟುಗಳ ಸಾಧನೆ

ಧಾರವಾಡ : ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ಜೂನ್ 23, 2025 ರಂದು ನಡೆದ 14 ವರ್ಷದೊಳಗಿನ ಮತ್ತು 16 ವರ್ಷ ಒಳಗಿನ ಖೇಲೋ ಇಂಡಿಯಾ ಕಿಡ್ಸ್ ಅಥ್ಲೇಟಿಕ್ಸ್ ಕ್ರೀಡಾಕೂಟದಲ್ಲಿ ಧಾರವಾಡ ಜಿಲ್ಲೆಯ ಯುವ ಸಬಲೀಕರಣ ಕ್ರೀಡಾ ಇಲಾಖೆಯ ಅಧೀನದಲ್ಲಿರುವ ಖೇಲೋ ಇಂಡಿಯಾದಲ್ಲಿ ಆನಂದ ಠಾಕೋರ (5 ಮೀ. ಎತ್ತರ ಜಿಗಿತ:ಬಂಗಾರದ ಪದಕ) ಮತ್ತು ಹಿತಾಂಶ ಜೈನ್ (600 ಮೀ. ಬೆಳ್ಳಿ ಪದಕ) ಕ್ರೀಡಾಪಟುಗಳು ವಿಜೇತರಾಗಿರುತ್ತಾರೆ.

ಎಲ್ಲ ವಿಜೇತ ಖೇಲೋ ಇಂಡಿಯಾ ಕ್ರೀಡಾಪಟುಗಳಿಗೆ ಮತ್ತು ತರಬೇತುದಾರರಾದ ಸಕ್ಕೂಬಾಯಿ.ಬಿ.ಚಿಕ್ಕನ್ನವರ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಎಂ.ಟಿ.ಮಂಜುನಾಥ ಸ್ವಾಮಿ ಹಾಗೂ ಸಿಬ್ಬಂದಿ ವರ್ಗದವರು ಖೇಲೋ ಇಂಡಿಯಾ ಕ್ರೀಡಾಪಟುಗಳಿಗೆ ಮತ್ತು ತರಬೇತುದಾರರಿಗೆ ಶುಭ ಕೋರಿರುತ್ತಾರೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಕ್ರಮವಾಗಿ ಸಿಲೆಂಡರಗಳ ಮಾರಾಟ

### 409 ಸಿಲೆಂಡರಗಳ ಜಪ್ತಿ ಮಾಡಿ ಕಾನೂನು ಕ್ರಮ

ಧಾರವಾಡ : ಸರ್ಕಾರದಿಂದ ಸಹಾಯಧನಯುಕ್ತ ದರದಲ್ಲಿ ಗೃಹಬಳಕೆ ಸಿಲೆಂಡರಗಳನ್ನು ಸಾರ್ವಜನಿಕರಿಗೆ ವಿತರಿಸಲಾಗುತ್ತಿದೆ. ಕೆಲವು ಅನಧಿಕೃತ ವ್ಯಕ್ತಿಗಳು ಹುಬ್ಬಳ್ಳಿ-ಧಾರವಾಡ ಗೃಹಬಳಕೆ ಸಿಲೆಂಡರಗಳನ್ನು ಕಾಳಸಂತೆಯಲ್ಲಿ ಪಡೆದು ವಾಣಿಜ್ಯ ಸಿಲೆಂಡರಗಳನ್ನಾಗಿ ಅಥವಾ 5 ಕೆಜಿಯ ಸಣ್ಣ ಸಿಲೆಂಡರಗಳಿಗೆ ಗ್ಯಾಸ್ ಪರಿವರ್ತಿಸಲಾಗುತ್ತಿದೆ. ಇಂತಹ ಪ್ರಕರಣಗಳು ಹುಬ್ಬಳ್ಳಿ-ಧಾರವಾಡದಲ್ಲಿ ಹೆಚ್ಚಾಗಿ ಕಂಡುಬರುತ್ತಿವೆ.

ಹುಬ್ಬಳ್ಳಿಯ ಆನಂದನಗರದ ವೆಲ್‌ಕಮ್ ಹಾಲ್ ಹತ್ತಿರ ರಾಜೇಸಾಬ ತಾಜುಸಾಬ ಕಟ್ಟಿಮನಿ ಎಂಬುವವರು ಅನಧಿಕೃತವಾಗಿ ವಾಣಿಜ್ಯ ಸಿಲೆಂಡರಗಳನ್ನು ಸಂಗ್ರಹಿಸಿ, ಗೃಹಬಳಕೆ ಸಿಲೆಂಡರಗಳನ್ನಾಗಿ ಪರಿವರ್ತಿಸುವದು ಕಂಡುಬಂದಿದ್ದರಿಂದ ಸದರಿಯವರ ವಿರುದ್ಧ ಅಗತ್ಯ ವಸ್ತುಗಳ ಕಾಯ್ದೆ 1955ರ ಕ್ಲಾಜ್ 6(ಎ) ಹಾಗೂ ಕ್ರಿಮಿನಲ್ ಪ್ರಕರಣವನ್ನು ದಾಖಲಿಸಿದ್ದು, ಅವರಿಂದ 409 ಸಿಲೆಂಡರಗಳನ್ನು ಜಪ್ತ ಮಾಡಿ ಕಾನೂನು ಕ್ರಮ ಜರುಗಿಸಲಾಗಿದೆ.

ಕಾರಣ ಸಿಲೆಂಡರಗಳನ್ನು ಅನಧಿಕೃತವಾಗಿ ಸಂಗ್ರಹಿಸುವುದು ಒಂದು ಸಿಲೆಂಡರನಿಂದ ಮತ್ತೊಂದು ಸಿಲೆಂಡರಗೆ ವರ್ಗಾಯಿಸುವದು **Liquefied Petroleum Gas (REGULATION OF SUPPLY AND DISTRUBUTION) Order 2000** ರನ್ವಯ ಅಪರಾಧವಾಗಿರುತ್ತದೆ. ಅಲ್ಲದೇ ಅನಧಿಕೃತವಾಗಿ ಎಲ್‌ಪಿಜಿ ಗ್ಯಾಸ್‌ನ್ನು ಸಿಲೆಂಡರನಿಂದ ಮತ್ತೊಂದು ಸಿಲೆಂಡರಗೆ ವರ್ಗಾಯಿಸುವಾಗ ಸ್ಫೋಟಕವಾಗುವ ಸಂಭವವಿದ್ದು ಜೀವಹಾನಿ ಆಗಬಹುದಾಗಿರುತ್ತದೆ. ಆದ್ದರಿಂದ ಯಾವತ್ತು ಅನಧಿಕೃತ ಸಿಲೆಂಡರಗಳ ಸಂಗ್ರಹಣೆ, ಬಳಕೆ, ಮಾರ್ಗಾಂತರ ಮಾಡುವದು ಕಂಡುಬಂದಲ್ಲಿ ಅಂತಹವರ ವಿರುದ್ಧ ಅಗತ್ಯ ವಸ್ತುಗಳ ಕಾಯ್ದೆ 1955 ರಡಿಯಲ್ಲಿ ಕಾನೂನು ರೀತ್ಯ ಕಠಿಣ ಕ್ರಮ ಜರುಗಿಸಲಾಗುವದು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

****

# ಶಾಸಕರಿಂದ ಗ್ರಾಮಲೆಕ್ಕಾಧಿಕಾರಿಗಳಿಗೆ ಲ್ಯಾಪಟ್ಯಾಪ ವಿತರಣೆ



ಜಮಖಂಡಿ: ಸರ್ಕಾರದ ಎಲ್ಲ ರೀತಿಯ ಸೌಲಭ್ಯಗಳನ್ನು ಬಳಸಿಕೊಂಡು ರೈತರಿಗೆ ತ್ವರಿತ ಸೇವೆಯನ್ನು ನೀಡಬೇಕು ಎಂದು ಶಾಸಕ ಜಗದೀಶ ಗುಡಗುಂಟಿ ಹೇಳಿದರು. ನಗರದ ತಾಲೂಕಾಡಳಿತ ಭವನದ ಸಭಾಭವನದಲ್ಲಿ ಗ್ರಾಮ ಲೆಕ್ಕಾಧಿಕಾರಿಗಳಿಗೆ ಲ್ಯಾಪ್ ಟ್ಯಾಪ್ ವಿತರಿಸಿ ಮಾತನಾಡಿದ ಅವರು, ಪ್ರತಿ ಗ್ರಾಮದಲ್ಲಿ ರೈತರಿಗೆ ವಿವಿಧ ಕೆಲಸಗಳಿಗೆ ಗ್ರಾಮ ಲೆಕ್ಕಾಧಿಕಾರಿಗಳಿಂದ ಅನೇಕ ರೀತಿಯ ಪತ್ರಗಳ ಅವಶ್ಯಕತೆ ಮನಗಂಡ ಸರ್ಕಾರ ಕಂಪ್ಯೂಟರ್, ಲ್ಯಾಪಟ್ಯಾಪ್ ನೀಡಿ ಸರ್ಕಾರಿ ಸೇವೆ ವಿಳಂಬವಾಗದಂತೆ ಕ್ರಮ ಜರುಗಿಸಿದ್ದು ಶ್ಲಾಘನೀಯವಾಗಿದೆ ಎಂದರು.

ಅಧಿಕಾರಿಗಳು ತಂತ್ರಜ್ಞಾನದ ಸದುಪಯೋಗ ಪಡಿಸಿಕೊಂಡು ರೈತರಿಗೆ ತ್ವರಿತ ಸೇವೆ ಒದಗಿಸಬೇಕು. ಶಾಸಕರ ಅನುದಾನದಲ್ಲಿ ಈಗಾಗಲೇ 8 ಕಂಪ್ಯೂಟರಗಳನ್ನು ವಿತರಿಸಲಾಗಿದೆ. ತಾಲೂಕಿಗೆ ಒಟ್ಟು 30 ಲ್ಯಾಪಟ್ಯಾಪ್ ಅವಶ್ಯಕತೆ ಇದ್ದು ಪ್ರಸಕ್ತ 23 ಲ್ಯಾಪಟ್ಯಾಪ್ ವಿತರಣೆ ಮಾಡಲಾಗಿದೆ ಎಂದರು. ತಹಶೀಲ್ದಾರ ಸದಾಶಿವ ಮಕ್ಕೊಜಿ ಮಾತನಾಡಿ, ಕಳೆದ 3ವರ್ಷಗಳಿಂದ ಕಂದಾಯ ಇಲಾಖೆಯಲ್ಲಿ ಡಿಜಿಟಲಿಕರಣ ನಡೆಯುತ್ತಿದೆ. ಎಲ್ಲ ದಸ್ತಾವೇಜುಗಳನ್ನು ಒಂದೆಡೆ ದೊರಕುವಂತೆ ಮಾಡುವದು, ನಿಗದಿತ ಕಾಲದ ಮಿತಿಯಲ್ಲಿ ಸೇವೆಗಳನ್ನು ಒದಗಿಸುವದು ಸರ್ಕಾರದ ಉದ್ದೇಶವಾಗಿದೆ. ಸರ್ಕಾರ ಇ-ತಂತ್ರಾಂಶವನ್ನು ಸಿದ್ಧಪಡಿಸಿದ್ದು ಜನರಿಗೆ, ರೈತರಿಗೆ ಸರ್ಕಾರದ ಸೇವೆಗಳನ್ನು ತ್ವರಿತವಾಗಿ ಒದಗಿಸುವ ಉದ್ದೇಶ ಹೊಂದಿದೆ. ತಾಲೂಕಿನ 15 ಗ್ರಾಮ ಲೆಕ್ಕಾಧಿಕಾಗಿಗಳಿಗೆ ಲ್ಯಾಪಟ್ಯಾಪ್ ವಿತರಿಸಲಾಗುತ್ತಿದೆ ಎಂದರು.

ಇದೇ ಸಂದರ್ಭದಲ್ಲಿ ಕಂದಾಯ ನಿರೀಕ್ಷಕರಾದ ಮಂಜು ದೊಡಮನಿ, ಪವಾರ ಸಹಿತ ಕಂದಾಯ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಯವರು ಇದ್ದರು.

# ಶಿಕ್ಷಕರು ಶಿಸ್ತು- ಸಂಯಮ ಅಳವಡಿಸಿಕೊಳ್ಳಬೇಕು: ಕರಡಿ



ಜಮಖಂಡಿ: ಮೊದಲು ಪಂಚ ಸೋಪಾನ ಮಾದರಿ ಪಾಠ ಯೋಜನೆ ಇತ್ತು ಈಗ ಅದು 5-ಇ ಮಾದರಿ ಪಾಠ ಯೋಜನೆ ಪ್ರಚಲಿತದಲ್ಲಿದೆ. ಇದರಲ್ಲಿ ತೊಡಗಿಸುವಿಕೆ, ಅನ್ವೇಷಣೆ, ವಿವರಣೆ, ವಿಸ್ತರಣೆ ಹಾಗೂ ಮೌಲ್ಯಮಾಪನ ಒಳಗೊಂಡಿವೆ ಎಂದು ಭಕ್ತ ಕನಕದಾಸ ಪ್ರೌಢಶಾಲೆ ಮುಖ್ಯಶಿಕ್ಷಕ ಎಸ್.ಕೆ.ಕರಡಿ ಹೇಳಿದರು.

ನಗರದ ಬಿ.ಎಲ್.ಡಿ.ಇ ಸಂಸ್ಥೆ ಶಿಕ್ಷಣ ಮಹಾವಿದ್ಯಾಲಯ 5-ಇ ಮಾದರಿಯ ಪಾಠ ಯೋಜನೆ ಕಾರ್ಯಗಾರದ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ಇಂದಿನ ಶಿಕ್ಷಣ ವ್ಯವಸ್ಥೆಯಲ್ಲಿ ಜಾನಪದಸಾಹಿತ್ಯ, ಒಗಟು, ನಮ್ಮ ಪರಂಪರೆಯ ಅವಶ್ಯಕತೆ ಬಹಳಷ್ಟಿದ್ದು ಎಲ್ಲರೂ ಅಳವಡಿಸಿಕೊಳ್ಳಬೇಕಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ. ಡಿ.ಎಚ್.ಹುಸೇನಮಿಯ್ಯಾ ಮಾತನಾಡಿ, ಇಂದಿನ ದಿನಮಾನದಲ್ಲಿ ಗುರು ಶಿಷ್ಯರ ಸಂಬಂಧ ಬಹಳ ಮಹತ್ವದ್ದಗಿದೆ. ಇಂದಿನ ಶಿಕ್ಷಕರು ಶಿಸ್ತು, ಸಂಯಮ, ಅಳವಡಿಸಿಕೊಂಡು ಜೀವನದ ಪಾಠ ಕಲಿಸಬೇಕಾಗಿದೆ ಎಂದರು.

ವೇದಿಕೆಯಲ್ಲಿ ಉಪಪ್ರಾಚಾರ್ಯ ಪ್ರೊ.. ಕೆ.ಜೆ.ಜಿರಾಗಳಿ, ಪ್ರಾಯೋಗಿಕ ಪಾಠ ಬೋಧನಾ ವಿಭಾಗದ ಮುಖ್ಯಸ್ಥ ಪ್ರೊ.. ಎಲ್.ಎಂ.ಮಾರ್ಕಪನಳ್ಳಿ, ಸಾಂಸ್ಕೃತಿಕ ವಿಭಾಗದ ಕಾರ್ಯಧ್ಯಕ್ಷ ಪ್ರೊ.ಪ್ರೇಮಾನಂದ ಹಿರೇಮಠ, ರೆಡಕ್ರಾಸ್ ವಿಭಾಗ ಮುಖ್ಯಸ್ಥ ಪ್ರೊ.ಅಶ್ವಿನಿ ಅನಂತಪೂರ, ದೈಹಿಕ ನಿರ್ದೇಶಕ ಪ್ರೊ..ಮಹದೇವ ಗಲಬಿ ಸಹಿತ ಹಲವರು ಇದ್ದರು.

ಪ್ರಶಿಕ್ಷಣಾರ್ಥಿಗಳಾದ ಶ್ರುತಿ ಗುಡದಿ ಪ್ರಾರ್ಥಿಸಿದರು. ಈರನಗೌಡ ಬಿರಾದಾರ ಅತಿಥಿಗಳನ್ನು ಪರಿಚಯಿಸಿದರು. ರೂಪಾ ಕಂಕಣವಾಡಿ ಸ್ವಾಗತಿಸಿದರು. ವಿನಯ ಕಟ್ಟಿಮನಿ, ಪ್ರೀತಿ ಮರನೂರ ನಿರೂಪಿಸಿದರು. ಪವನ ಸದಲಗಿ ವಂದಿಸಿದರು.

# ಜೀನಗಾರ ಮನೆಯಲ್ಲಿ ಬಣ್ಣಕ್ಕೆ ತೆರಳಿದ್ದ ದೇವಿಯರ ವಿಗ್ರಹಗಳಿಗೆ ವಿಶೇಷ ಪೂಜೆ ಸಲ್ಲಿಕೆ



ಗೋಕಾಕ: ಗ್ರಾಮ ದೇವತೆಯರಾದ ಶ್ರೀ ದ್ಯಾಮವ್ವ ಮತ್ತು ದುರ್ಗಮ್ಮ ದೇವತೆಯರನ್ನು ನಗರದ ಜೀನಗಾರ ಮನೆಯಿಂದ ಅಂಬಿಗೇರ ಗಲ್ಲಿಗೆ ಕರೆತಂದು ಸಾಂಪ್ರದಾಯದಂತೆ ಪ್ರತಿಷ್ಠಾಪಿಸಲಾಯಿತು.

ನಗರದ ಜೀನಗಾರ ಮನೆಯಲ್ಲಿ ಬಣ್ಣಕ್ಕೆ ತೆರಳಿದ್ದ ದೇವಿಯರ ವಿಗ್ರಹಗಳನ್ನು ಸೋಮವಾರದಂದು ವಿಶೇಷ ಪೂಜೆ ಸಲ್ಲಿಸಿ ಗ್ರಾಮ ದೇವತೆಯರ ಜಾತ್ರಾ ಕಮೀಟಿಯವರ ನೇತ್ರತ್ವದಲ್ಲಿ ಗ್ರಾಮ ದೇವತೆಯರಾದ ಶ್ರೀ ದ್ಯಾಮವ್ವ ಮತ್ತು ದುರ್ಗಮ್ಮ ದೇವತೆಯರನ್ನು ನಗರದ ವಿವಿಧ ಬೀದಿಗಳಲ್ಲಿ ಮೆರವಣಿಗೆ ಮೂಲಕ ಅಂಬಿಗೇರ ಗಲ್ಲಿಗೆ ಕರೆ ತಂದು ಸಾಂಪ್ರದಾಯದಂತೆ ಪ್ರತಿಷ್ಠಾಪಿಸಲಾಯಿತು.

ಮೆರವಣಿಗೆಯೊದ್ದಕ್ಕೂ ದೇವತೆಯರ ಪರ ಜಯಘೋಷ, ಭಜನೆ, ವಿವಿಧ ವಾದ್ಯ ಮೇಳಗಳೊಂದಿಗೆ ಸಾವಿರಾರು ಜನ ಭಕ್ತಾಧಿಗಳು ಭಾಗವಹಿಸಿ ಶ್ರೀದೇವಿಯರ ಭಕ್ತಿಗೆ ಪಾತ್ರರಾದರು. ಮೆರವಣಿಗೆಯಲ್ಲಿ 200ಕ್ಕೂ ಹೆಚ್ಚು ಜನ ಪೊಲೀಸ್ ಸಿಬ್ಬಂಧಿಯನ್ನು ನಿಯೋಜಿಸಲಾಗಿತ್ತು.

ಈ ಸಂದರ್ಭದಲ್ಲಿ ಕಾರ್ಮಿಕ ಮುಖಂಡ ಅಂಬಿರಾವ ಪಾಟೀಲ, ಹಿರಿಯ ರಾಜಕೀಯ ಮುಖಂಡ ಅಶೋಕ ಪೂಜಾರಿ, ಯುವ ಮುಖಂಡರಾದ ಅಮರನಾಥ ಜಾರಕಿಹೊಳಿ, ಸರ್ವೋತ್ತಮ ಜಾರಕಿಹೊಳಿ, ಸನತ ಜಾರಕಿಹೊಳಿ, ಜಾತ್ರಾ ಕಮೀಟಿಯ ಪ್ರಭು ಚವ್ಹಾನ, ಬಸವಣ್ಣೆಪ್ಪ ಬನ್ನಿಶೆಟ್ಟಿ, ಶ್ರೀಪಾದ ದೇಶಪಾಂಡೆ, ಅಶೋಕ ಹೆಗ್ಗಣ್ಣವರ, ಅಡಿವೆಪ್ಪ ಕಿತ್ತೂರ, ತಹಶೀಲದಾರ ಡಾ.ಮೋಹನ ಭಸ್ಮೆ, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಪರಶುರಾಮ ಘಸ್ತೆ, ನಗರಸಭೆ ಪ್ರಭಾರ ಪೌರಾಯುಕ್ತ ಆರ್ ಎಸ್ ರಣಸುಭೆ, ಡಿವೈಎಸ್‌ಪಿ ರವಿ ನಾಯಿಕ, ಸಿಪಿಐ ಸುರೇಶಬಾಬು, ಪಿಎಸ್‌ಐಗಳಾದ ಕೆ ಬಿ ವಾಲಿಕಾರ, ಕಿರಣ ಮೋಹಿತೆ ಇದ್ದರು.



# ಪತ್ನಿ ಕೊಲೆ ಮಾಡಿ ತಲೆಮರೆಸಿಕೊಂಡಿದ್ದ ಆರೋಪಿಗೆ ಜೀವಾವಧಿ ಶಿಕ್ಷೆ ಪ್ರಕಟ

ಕೊಪ್ಪಳ : ಪತ್ನಿಯ ಕೊಲೆ ಮಾಡಿ 20 ವರ್ಷಗಳ ಕಾಲ ತಲೆಮರೆಸಿಕೊಂಡಿದ್ದ 73 ವರ್ಷದ ಆರೋಪಿಗೆ ಗಂಗಾವತಿಯ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರು ಜೀವಾವಧಿ ಶಿಕ್ಷೆ ಹಾಗೂ ದಂಡವನ್ನು ವಿಧಿಸಿ ತೀರ್ಪು ಪ್ರಕಟಿಸಿದೆ.

ಆರೋಗ್ಯ ಇಲಾಖೆಯಲ್ಲಿ ಕಿರಿಯ ಆರೋಗ್ಯ ಸಹಾಯಕನಾಗಿದ್ದ ಮಾನ್ವಿ ತಾಲ್ಲೂಕಿನ ಹಾಲ್ದಾಳ ಗ್ರಾಮದ ಹನುಮಂತಪ್ಪ ತಂದೆ ಹುಸೇನಪ್ಪ ಎಂಬ ವ್ಯಕ್ತಿಯು ಗಂಗಾವತಿಯ ಗುಂಡಮ್ಮ ಕ್ಯಾಂಪಿನಲ್ಲಿ ತನ್ನ ಮೂರನೇ ಹೆಂಡತಿಯಾದ ರೇಣುಕಮ್ಮಳೊಂದಿಗೆ ವಾಸವಾಗಿದ್ದನು. ತನ್ನ ಹೆಂಡತಿಯ ಶೀಲದ ಬಗ್ಗೆ ಸಂಶಯಪಟ್ಟು 2002ರ ಜೂನ್ 20 ರ ರಾತ್ರಿ ಆಕೆಯ ಮೇಲೆ ಕಬ್ಬಿಣದ ರಾಡ್‌ನಿಂದ ಹಲ್ಲೆ ಮಾಡಿ, ಕತ್ತು ಹಿಸುಕಿ ಕೊಲೆ ಮಾಡಿದ್ದನು. ನಂತರ ಸಾಕ್ಷಿ ನಾಶಪಡಿಸುವ ಸಲುವಾಗಿ ಬೇರೆ ಕಡೆ ಶವ ಸಾಗಿಸುವ ಉದ್ದೇಶದಿಂದ ಆಕೆಯ ಶವವನ್ನು ಗೋಣಿ ಚೀಲದಲ್ಲಿ ತುಂಬಿ ಅದನ್ನು ಗಂಗಾವತಿ ಬಸ್ ನಿಲ್ದಾಣದಿಂದ ಸಾರಿಗೆ ಬಸ್‌ನಲ್ಲಿ ಲಗೇಜ್ ರೂಪದಲ್ಲಿ ಶವವನ್ನು ಸಾಗಿಸಿದ್ದನು. ಕಂಪ್ಲಿ ಪಿಎಸ್‌ಐ ಸುಧಾಕರ ಅವರು ಕಂಪ್ಲಿ ಚೆಕ್‌ಪೋಸ್ಟ್‌ನಲ್ಲಿ ಬಸ್ ಚಕಿಂಗ್ ನಡೆಸಿದ್ದು, ಮೂಟೆಯಲ್ಲಿ ಶವವಿರುವುದು ಪತ್ತೆಯಾಗಿರುತ್ತದೆ. ಈ ಬಗ್ಗೆ ಬಸ್ ಚಾಲಕ ಗುರುದೇವ ಅವರು ಕಂಪ್ಲಿ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದರು.

ಅಂದಿನ ತನಿಖಾಧಿಕಾರಿಗಳಾದ ಹೊಸಪೇಟೆಯ ಗ್ರಾಮೀಣ ಸಿಪಿಐ(ಪ್ರಭಾರ) ಜಿ.ವಿಶ್ವನಾಥ, ಸಿಪಿಐ ಜಿ.ಜಿ.ಮರಿಬಾಶೆಟ್ಟಿ ಹಾಗೂ ಪ್ರಕರಣವನ್ನು ಸರಹದ್ದಿನ ಆಧಾರದ ಮೇಲೆ ಗಂಗಾವತಿ ನಗರ ಠಾಣೆಗೆ ವರ್ಗಾವಣೆಗೊಂಡಿದ್ದರಿಂದ ಅಂದಿನ ತನಿಖಾಧಿಖಾರಿ ಗಂಗಾವತಿ ನಗರಠಾಣೆಯ ಪಿಐ ಬಿ.ಎಸ್.ಶಾಂತಕುಮಾರ ಅವರು ಜಂಟಿಯಾಗಿ ಪ್ರಕರಣದ ತನಿಖೆ ನಡೆಸಿ ಆರೋಪಿಯ ವಿರುದ್ಧ ಆರೋಪ ಸಾಬೀತಾದ್ದರಿಂದ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದರು.

ನ್ಯಾಯಾಲಯದ ವಿಚಾರಣೆಯಲ್ಲಿ ಅಪರಾಧ ಸಾಬೀತಾದ್ದರಿಂದ ಗಂಗಾವತಿಯ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಸದಾನಂದ ನಾಗಪ್ಪ ನಾಯ್ಕ ಅವರು, ಆರೋಪಿತನಿಗೆ ಭಾರತೀಯ ದಂಡ ಸಂಹಿತೆ ಕಲಂ 302 ಅಪರಾಧಕ್ಕೆ ಜೀವಾವಧಿ ಶಿಕ್ಷೆ ಹಾಗೂ ರೂ.10,000 ಗಳ ದಂಡವನ್ನು ವಿಧಿಸಿ, ತೀರ್ಪಿನ ದಿನಾಂಕದಿಂದ ಮೂರು ತಿಂಗಳೊಳಗೆ ದಂಡ ಕಟ್ಟದೇ ಇದ್ದಲ್ಲಿ 1 ವರ್ಷ ಸಾದಾ ಕಾರಾಗೃಹ ವಾಸದ ಶಿಕ್ಷೆಯನ್ನು ಅನುಭವಿಸುವಂತೆ ಹಾಗೂ ಕಲಂ 201 ಅಪರಾಧಕ್ಕೆ 3 ವರ್ಷಗಳ ಕಾರಾಗೃಹ ವಾಸದ ಶಿಕ್ಷೆ ಹಾಗೂ ರೂ.5000 ಗಳ ದಂಡವನ್ನು ಮೂರು ತಿಂಗಳೊಳಗೆ ಪಾವತಿಸುವಂತೆ, ತಪ್ಪಿದಲ್ಲಿ 3 ತಿಂಗಳ ಸಾದಾ ಕಾರಾಗೃಹ ವಾಸದ ಶಿಕ್ಷೆಯನ್ನು ಅನುಭವಿಸುವಂತೆ ಮತ್ತು ದಂಡದ ಮೊತ್ತ ರೂ.15,000 ಗಳನ್ನು ಸರ್ಕಾರಕ್ಕೆ ಭರಿಸುವಂತೆ ಆದೇಶಿಸಿ, ಜೂನ್ 27 ರಂದು ತೀರ್ಪು ಪ್ರಕಟಿಸಿದೆ ಎಂದು ಗಂಗಾವತಿಯ ಸರಕಾರಿ ಅಭಿಯೋಜಕರಾದ ನಾಗಲಕ್ಷ್ಮೀ ಎಸ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

****

# ಹಿಂದೂ ಕಾರ್ಯಕರ್ತರ ಮೇಲೆ ಮಾರಣಾಂತಿಕ ಹಲ್ಲೆ ಕಠಿಣ ಕ್ರಮಕ್ಕೆ ಸುಭಾಷ ಪಾಟೀಲ ಅಗ್ರಹ



ಬೆಳಗಾವಿ. ನಿನ್ನೆ ಜಿಲ್ಲೆಯ ಹುಕ್ಕೇರಿ ತಾಲೂಕಿನ ಇಂಗಳಿ ಗ್ರಾಮದಲ್ಲಿ ಹಿಂದೂ ಕಾರ್ಯಕರ್ತರ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿದವರನ್ನು ಪೋಲಿಸ ವಶಕ್ಕೆ ಪಡೆದು ಸೂಕ್ತ ಕಾನೂನಾತ್ಮಕವಾಗಿ ಶಿಕ್ಷೆ ನೀಡಬೇಕು ಎಂದು ಆಗ್ರಹಿಸಿ ಪೋಲಿಸ್ ವರಿಷ್ಠಾಧಿಕಾರಿಗಳ ಕಚೇರಿ ಮುಂದೆ ಬಿಜೆಪಿ ವತಿಯಿಂದ ಪ್ರತಿಭಟನೆ ನಡೆಯಿತು.

ಮಾಧ್ಯಮದವರೊಂದಿಗೆ ಬಿಜೆಪಿ ಜಿಲ್ಲಾಧ್ಯಕ್ಷ ಸುಭಾಷ ಪಾಟೀಲ ಮಾತನಾಡಿ ಇತ್ತಿಚಿಗೆ ಬೆಳಗಾವಿ ಜಲ್ಲೆಯ ಹುಕ್ಕೇರಿ ತಾಲೂಕಿನ ಇಂಗಳಿ ಗ್ರಾಮದಲ್ಲಿ ನಡೆದ ಹಿಂದೂ ಕಾರ್ಯಕರ್ತರ ಮೇಲಿನ ಹಲ್ಲೆಯನ್ನು ಭಾರತೀಯ ಜನತಾ ಪಾರ್ಟಿ ತೀವ್ರವಾಗಿ ಖಂಡಿಸುತ್ತದೆ, ಗೋ ಶಾಲೆಯಿಂದ ಗೋವುಗಳನ್ನು ತೆಗೆದುಕೊಂದು ಹೋಗಿದ್ದನ್ನು ನೋಡಿ 5 ಜನ ಹಿಂದೂಪರ ಸಂಘಟನೆಯ ಕಾರ್ಯಕರ್ತರು ಪ್ರಶ್ನೆ ಮಾಡಿದ್ದಾರೆ. ಪ್ರಶ್ನೆ ಮಾಡಿದ್ದಕ್ಕೆ ದಲ್ಲಾಲಿಗಳು ಹಿಂದೂ ಕಾರ್ಯಕರ್ತರನ್ನು ಮರಕ್ಕೆ ಕಟ್ಟಿ ಹಾಕಿ ಮನಸೋಇಚ್ಛೆ ತಳಿಸಿದ್ದಾರೆ, ಈ ಕೃತ್ಯದ ವಿಡಿಯೋಗಳು ಇಗಾಗಲೇ ಸಾಮಾಜಿಕ ಜಾಲತಾಣದಲ್ಲಿ ಮತ್ತು ಸುದ್ದಿ ಮಾದ್ಯಮದಲ್ಲಿ ಹರಿದಾಡುತ್ತಿವೆ.

ಈ ಘಟನೆಯು ಯಮಕನಮರಡಿ ಪೋಲಿಸ ಠಾಣೆಯ ವ್ಯಾಪ್ತಿಯಲ್ಲಿ ನಡೆದಿದೆ. ಹಿಂದೂ ಕಾರ್ಯಕರ್ತರು ನಂತರ ಪೋಲಿಸ ಠಾಣೆಗೆ ದೂರು ದಾಖಲಿಸಲು ಹೋದಾಗ ಹಿಂದೂ ಕಾರ್ಯರ್ತರನ್ನು ಅವಾಚ್ಯ ಶಬ್ದಗಳಿಂದ ನಿಂದಿಸಿ ದೂರು ದಾಖಲಿಸಿಕೊಳ್ಳದೇ ಉದ್ಧಟತನ ಪ್ರದರ್ಶಿಸಿದ್ದಾರೆ. ಪೋಲಿಸರು ಯಾರ ಕುಮ್ಮಕ್ಕಿನಿಂದ ಈ ರೀತಿ ಮಾಡಿದ್ದಾರೆಂದು ತಿಳಿಯಬೇಕಾಗಿದೆ

ತಾವು ಈ ಕೂಡಲೇ ಈ ಪ್ರಕರಣಕ್ಕೆ ಸಂಬಂದಪಟ್ಟ ವಿಡಿಯೋದಲ್ಲಿ ಕಾಣಿಸಿರುವ ಹಲ್ಲೆಕೊರರನ್ನು ಬಂಧಿಸಿ ಅವರ ಮೇಲೆ ಎಫ್.ಐ.ಆರ್ ದಾಖಲಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸುತ್ತೇವೆ. ಹಾಗೂ ಉದ್ಧಟತನ ಮೆರದ ಪೋಲಿಸ ಅಧಿಕಾರಿಗಳ ಮೇಲೆ ಕಠಿಣ ಕ್ರಮ ಜರುಗಿಸಬೇಕೆಂದು ಅಗ್ರಹಿಸಿದರು.

ಹಲ್ಲೆಗೊಳಗಾದ ಹಿಂದೂ ಕಾರ್ಯಕರ್ತರಿಗೆ ನ್ಯಾಯ ಒದಗಿಸಿಕೊಡಬೇಕೆಂದು ಆಗ್ರಹಿಸಿದರು. ಇದೇ ವೇಳೆ ಪ್ರತಿಭಟನಾ ಸ್ಥಳಕ್ಕೆ ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿ ಭೀಮಾಶಂಕರ ಗುಳೇದ ಅವರು ಆಗಮಿಸಿ ಸೂಕ್ತ ಕ್ರಮ ಕೈಗೊಳ್ಳುವ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಮುಖಂಡ ಬಸವರಾಜ ಹುಂದ್ರಿ,ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಸಂದೀಪ ದೇಶಪಾಂಡೆ, ಮಲ್ಲಿಕಾರ್ಜುನ ಮಾದಮ್ಮನವರ, ಧನಶ್ರೀ ದೇಸಾಯಿ, ಮುರುಗೇಂದ್ರಗೌಡ ಪಾಟೀಲ, ಈರಯ್ಯ ಖೋತ, ಜಿಲ್ಲಾ ಉಪಾಧ್ಯಕ್ಷ ಬಸನಗೌಡ ಕೊಳದೂರ, ಜಿಲ್ಲಾ ಮಾಧ್ಯಮ ಪ್ರಮುಖ ಸಚಿನ್ ಕಡಿ, ಜಿಲ್ಲಾ ಕೋಶಾಧ್ಯಕ್ಷ ಸಂತೋಷ ದೇಶನೂರ, ಮುಖಂಡರಾದ ಧನಂಜಯ ಜಾಧವ, ರಾಜೇಶ ನೇರ್ಲಿ, ಶಿವಾನಂದ ಹನುಮಸಾಗರ, ಯುವ ಮೋರ್ಚಾ ಜಿಲ್ಲಾಧ್ಯಕ್ಷ ಮಹಾಂತೇಶ ಚಿನ್ನಪ್ಪಗೌಡ್ರ, ಶ್ರೀಕರ ಕುಲಕರ್ಣಿ,ಮನೋಜ ಪಾಟೀಲ, ಪ್ರಶಾಂತ ಅಮ್ಮಿನಭಾವಿ, ಮಹಾಂತೇಶ ವಕ್ಕುಂದ, ಪಂಡಿತ ಓಗಲೆ, ಪ್ರಸಾದ್ ದೇವರಮನಿ, ಆನಂದ ಬಾಗೋಡಿ, ಶ್ವೇತಾ ಜಗದಾಳೆ, ವೀರಭದ್ರ ಪೂಜಾರಿ, ಪ್ರಮುಖರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಸಂಚಾರಿ ಆರೋಗ್ಯ ವಾಹನ ಪ್ರಾರಂಭ



ರಾಯಬಾಗ: ನೊಂದಾಯಿತ ಕಟ್ಟಡ ಕಾರ್ಮಿಕರ ಆರೋಗ್ಯ ಕಾಪಾಡುವ ದೃಷ್ಟಿಯಿಂದ ರಾಜ್ಯ ಸರ್ಕಾರ ಸಂಚಾರಿ ಆರೋಗ್ಯ ವಾಹನ ಪ್ರಾರಂಭಿಸಿದ್ದು ಇದರ ಸದುಪಯೋಗ ಕಾರ್ಮಿಕರು ಪಡೆದುಕೊಳ್ಳಬೇಕೆಂದು ಶಾಸಕ ಡಿ.ಎಮ್.ಐಹೊಳೆಯವರು ಹೇಳಿದರು.

ಸೋಮವಾರ ಪಟ್ಟಣದ ಶಾಸಕರ ಗೃಹ ಕಚೇರಿ ಆವರಣದಲ್ಲಿ ಕಾರ್ಮಿಕ ಇಲಾಖೆಯ ಸಂಚಾರಿ ಆರೋಗ್ಯ ವಾಹನಕ್ಕೆ ಹಸಿರು ನಿಶಾನೆ ತೋರಿಸಿ, ಚಾಲನೆ ನೀಡಿ ಮಾತನಾಡಿದ ಅವರು, ಕಟ್ಟಡ ಕಾರ್ಮಿಕರು ಮತ್ತು ಅವರ ಅವಲಂಬಿತರಿಗೆ ಕೈಗೆಟುಕುವ ಎಲ್ಲ ವೈದ್ಯಕೀಯ ಉಪಕರಣವುಳ್ಳ ಮತ್ತು ನುರಿತ ವೈದ್ಯರ ತಂಡ ಹೊಂದಿರುವ ಹೈಟೆಕ್ ಸಂಚಾರಿ ವಾಹನದಲ್ಲಿ ಆರೋಗ್ಯ ಸೌಲಭ್ಯವಿದ್ದು, ಕಾರ್ಮಿಕರ ಕೆಲಸದ ಸ್ಥಳದಲ್ಲಿ ಅನಾರೋಗ್ಯಕ್ಕೆ ಒಳಗಾದರೆ, ತುರ್ತು ಚಿಕಿತ್ಸೆಯನ್ನು ನೀಡಲು ಈ ವಾಹನ ದಿಂದ ಅನುಕೂಲವಾಗಲಿದೆ ಎಂದರು.

ಕಾರ್ಮಿಕ ಇಲಾಖೆ ಅಧಿಕಾರಿ ಭುವನೇಶ್ವರಿ ಥಾಲೆ, ಡಾ.ದೇವರಾಜ, ಪ್ರಫುಲ್ ಕಾಂಬಳೆ, ವೈಶಾಲಿ ಮೋಳೆಕರ, ಜ್ಯೋತಿ ಕಸ್ತೂರಿ, ಆರತಿ ಹಳಿಜೋಳ, ಸುನೀತಾ ತಳವಾರ, ಅಂಕುಶ ಜಾಧವ ಹಾಗೂ ಕಟ್ಟಡ ಕಾರ್ಮಿಕರು ಇದ್ದರು.

****

# ಮನಸೂರೆಗೊಂಡ ಬಂಜೆ ತೊಟ್ಟಿಲು ನಾಟಕ ಪ್ರದರ್ಶನ



ಬಸವನಬಾಗೇವಾಡಿ, ಪಟ್ಟಣದ ವಿರಕ್ತಮಠದ ಶಿವಾನುಭವ ಮಂಟಪದಲ್ಲಿ ಹಾವೇರಿ ಜಿಲ್ಲೆಯ ಸವಣೂರ ತಾಲೂಕಿನ ಮಾವೂರಿನ ಬಾಲಲೀಲಾ ಸಂಗಮೇಶ್ವರ ನಾಟ್ಯ ಸಂಘವು ಹಿರಿಯ ಕಲಾವಿದ ಶಿವಲಿಂಗಯ್ಯ ಹಿರೇಮಠ ಅವರ ಮಗನ ಶಿಕ್ಷಣದ ಸಹಾಯರ್ಥವಾಗಿ ಭಾನುವಾರ ಸಂಜೆ ಪ್ರದರ್ಶನಗೊಂಡ ಬಂಜೆ ತೊಟ್ಟಿಲು ನಾಟಕ ಪ್ರೇಕ್ಷಕರನ್ನು ಮನಸೂರೆಗೊಂಡಿತ್ತು.

ನಾಟಕದಲ್ಲಿ ಕಲಾವಿದರಾದ ಅನಿತ ಹುಬ್ಬಳ್ಳಿ, ಶಶಿಕುಮಾರ ಜೀವಾಪುರ, ಮಂಜು ಹುಬ್ಬಳ್ಳಿ, ಶಿವಲಿಂಗಸ್ವಾಮಿ ಮಾವೂರು, ಚನ್ನವೀರಯ್ಯ, ಈರಣ್ಣ ಮೈಂದರಗಿ, ಸಾವಿತ್ರಮ್ಮ ದಾವಣಗೇರಿ, ಮಹಾದೇವಿ ದಾವಣಗೇರಿ, ಪ್ರೇಮಾಬಾಯಿ ತಾಳಿಕೋಟಿ, ಮಂಜುಳಾ ಹಾವೇರಿ ಮನೋಜ್ಞವಾಗಿ ಅಭಿನಯಿಸಿದರು. ನಾಟಕ ಪ್ರದರ್ಶನ ಎಂಟು ಗಂಟೆಗೆ ಆರಂಭವಾಗಿ ರಾತ್ರಿ ಹನ್ನೊಂದುವರೆ ಗಂಟೆಗೆ ಮುಕ್ತಾಯವಾಯಿತು.

ನಾಟಕಕ್ಕೆ ಜ್ಯೋತಿ ಬೆಳಗಿಸುವ ಮೂಲಕ ಚಾಲನೆ ನೀಡಿದ ಬಸವೇಶ್ವರ ಸೇವಾ ಸಮಿತಿ ಅಧ್ಯಕ್ಷ ಈರಣ್ಣ ಪಟ್ಟಣಶೆಟ್ಟಿ ಮಾತನಾಡಿ, ಇಂದಿನ ತಂತ್ರಜನ ಯುಗದಲ್ಲಿ ರಂಗಭೂಮಿಯ ನಾಟಕಗಳನ್ನು ನೋಡುವವರ ಸಂಖ್ಯೆ ಕಡಿಮೆಯಾಗುತ್ತಿದೆ. ಸಮಾಜದಲ್ಲಿ ಸಾಮಾಜಿಕ ಪ್ರಜಯನ್ನು ಬೆಳೆಸಲು ನಾಟಕಗಳು ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ಹೆಚ್ಚು ನಡೆಯಬೇಕು. ಆಧುನಿಕತೆಗೆ ಕಲೆಗಳು ಸೊರಗುತ್ತಿವೆ ಎಂಬ ಮನೋಭಾವ ಬೇಡ. ಕಲೆಗೆ ಸದಾ ಬೆಲೆ ಇರುತ್ತದೆ. ಇಂದಿಗೂ ಕಲಾಪ್ರೇಮಿಗಳು ಇರುವದರಿಂದಾಗಿ ಕೆಲವೆಡೆ ನಾಟಕಗಳು ಪ್ರದರ್ಶನವಾಗುತ್ತಿವೆ. ಕಲಾಪ್ರೇಮಿಗಳು ಸಂಖ್ಯೆ ಕ್ಷೀಣಿಸಿದರೆ ನಾಟಕ ಪ್ರದರ್ಶನ ನಶಿಸಿ ಹೋಗುತ್ತದೆ. ನಾಟಕ ಪ್ರದರ್ಶನ ನಶಿಸಿ ಹೋಗದಂತೆ ನೋಡುವ ಜವಾಬ್ದಾರಿ ಎಲ್ಲರ ಮೇಲಿದೆ.

ಹಿರಿಯ ಕಲಾವಿದ ಶಿವಲಿಂಗಯ್ಯ ಹಿರೇಮಠ ಅವರ ಮಗನ ಶಿಕ್ಷಣ ಸಹಾಯರ್ಥವಾಗಿ ಈ ನಾಟಕ ಪ್ರದರ್ಶನವಾಗುತ್ತಿದೆ. ಇದಕ್ಕೆ ಎಲ್ಲರೂ ತನು-ಮನ-ಧನದಿಂದ ಸಹಾಯ ಮಾಡಬೇಕೆಂದರು.

ಹಿರಿಯ ನ್ಯಾಯವಾದಿ ಬಿ.ಕೆ.ಕಲ್ಲೂರ ಮಾತನಾಡಿ, ಇಂದು ಟಿವ್ಹಿ ಧಾರವಾಹಿ ಹಾವಳಿದಿಂದಾಗಿ ಕಲಾವಿದರ ಬದುಕು ದುಸ್ತರವಾಗುತ್ತಿದೆ. ಕಲಾವಿದರ ಬದುಕು ಸಾಗಿಸಲು ಎಲ್ಲರೂ ಸಹಾಯ-ಸಹಕಾರ ನೀಡಬೇಕೆಂದರು.

ಅಧ್ಯಕ್ಷತೆ ವಹಿಸಿದ್ದ ಪುರಸಭೆ ಅಧ್ಯಕ್ಷೆ ಜಗದೇವಿ ಗುಂಡಳ್ಳಿ ಮಾತನಾಡಿ, ಪ್ರತಿಯೊಬ್ಬರೂ ಕಲೆಯನ್ನು ಪ್ರೋತ್ಸಾಹಿಸಬೇಕು.ಇದರಿಂದ ಕಲಾವಿದರನ್ನು ಪೋಷಿಸಿದಂತಾಗುತ್ತದೆ. ಬಸವನಬಾಗೇವಾಡಿ ಪಟ್ಟಣದಲ್ಲಿ ಸದಾ ಕಲಾವಿದರಿಗೆ ಪ್ರೋತ್ಸಾಹ ನೀಡುತ್ತಾ ಬಂದಿದೆ ಎಂದರು.

ನ್ಯಾಯವಾದಿ ರವಿ ರಾಠೋಡ, ಶಿಕ್ಷಕ ಬಸವರಾಜ ಬಿದರಕುಂದಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಬಸವೇಶ್ವರ ದೇವಾಲಯ ಅಂತರಾಷ್ಟ್ರೀಯ ಶಾಲೆಯ ಮೇಲುಸ್ತುವಾರಿ ಸಮಿತಿ ಅಧ್ಯಕ್ಷ ಅನಿಲ ಅಗರವಾಲ, ತಾಲೂಕು ಪಂಚಮಸಾಲಿ ಸಮಾಜದ ಅಧ್ಯಕ್ಷ ಬಸವರಾಜ ಗೊಳಸಂಗಿ, ಬಸವೇಶ್ವರ ಸೇವಾ ಸಮಿತಿ ಸದಸ್ಯ ಎಂ.ಜಿ.ಆದಿಗೊಂಡ, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಜನಪದ ಗಾಯಕ ಬಸವರಾಜ ಹಾರಿವಾಳ, ಸಾಹಿತಿ ವಿವೇಕಾನಂದ ಕಲ್ಯಾಣಶೆಟ್ಟಿ, ನಿವೃತ್ತ ಸೈನಿಕ ರುದ್ರಗೌಡ ಬಿರಾದಾರ, ಮುಖಂಡರಾದ ಸಂಕನಗೌಡ ಪಾಟೀಲ, ಪ್ರಕಾಶ ಕುಲಕರ್ಣಿ ಇತರರು ಇದ್ದರು.

ಅರುಣ ಬಸಾಪುರ ಪ್ರಾರ್ಥಿಸಿದರು. ಕೊಟ್ರೇಶ ಹೆಗ್ಡಾಳ ಸ್ವಾಗತಿಸಿದರು. ಮಹಾಂತೇಶ ಸಂಗಮ ನಿರೂಪಿಸಿದರು. ಶಿವಲಿಂಗಯ್ಯ ಹಿರೇಮಠ ವಂದಿಸಿದರು.

## 'ರಾಜ್ಯ ಮಟ್ಟದ ಬಸವ ಚೇತನ ಪ್ರಶಸ್ತಿ' ಗೆ ಶಿಕ್ಷಕ ಸಂತೋಷ ಬಂಡೆ ಆಯ್ಕೆ



ಇಂಡಿ: ತಾಲೂಕಿನ ಹಿರೇರೂಗಿ ಗ್ರಾಮದ ಯುಬಿಎಸ್ ಶಾಲೆಯ ಇಂಗ್ಲೀಷ್ ಶಿಕ್ಷಕ ಸಂತೋಷ ಬಂಡೆ ಅವರು 'ರಾಜ್ಯ ಮಟ್ಟದ ಬಸವ ಚೇತನ ಪ್ರಶಸ್ತಿ' ಗೆ ಆಯ್ಕೆ ಆಗಿದ್ದಾರೆ.

ಅಮ್ಮ ಫೌಂಡೇಶನ್ ವತಿಯಿಂದ ಜುಲೈ 6 ರಂದು ವಿಜಯಪುರ ನಗರದ ಕಂದಗಲ್ ಹನುಮಂತರಾಯ ರಂಗಮಂದಿರದಲ್ಲಿ ಜರುಗಲಿರುವ ರಾಜ್ಯ ಮಟ್ಟದ ಬಸವ ಸಂಸ್ಕೃತಿ ಉತ್ಸವದಲ್ಲಿ ಸಾಧಕ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುವದು. ಹಲವು ವರ್ಷಗಳಿಂದ ಶೈಕ್ಷಣಿಕ, ಸಾಹಿತ್ಯಿಕ ಹಾಗೂ ವಿವಿಧ ರಂಗದಲ್ಲಿ ನಿಸ್ವಾರ್ಥ ಸೇವೆ ಸಲ್ಲಿಸಿ, ಎಲೆಮರೆ ಕಾಯಿಯಂತೆ ಸಮಾಜಮುಖಿ ಆಗಿರುವ ಶಿಕ್ಷಕ ಸಂತೋಷ ಬಂಡೆ ಅವರಿಗೆ ಈ ಪ್ರಶಸ್ತಿ ನೀಡಿ ಗೌರವಿಸಲು ಹೆಮ್ಮೆ ಎನಿಸುತ್ತಿದೆ. ನಾಡಿನ ಶ್ರೇಷ್ಠ ಸಾಹಿತಿಗಳು, ಜನಪ್ರತಿನಿಧಿಗಳು, ಅಧಿಕಾರಿಗಳು, ಬಸವ ಚಿಂತಕರ ಸಮ್ಮುಖದಲ್ಲಿ ಸಮಾರಂಭ ಜರುಗಲಿದೆ ಎಂದು ಅಮ್ಮ ಫೌಂಡೇಶನ್ ಸಂಚಾಲಕ ಕಬೂಲ ಕೊಕಟನೂರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಹಳಿಯಾಳ: ವಸತಿ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನ.**

ಕಾರವಾರ, ಕೇಂದ್ರ ಸರ್ಕಾರದ ಪ್ರಧಾನಮಂತ್ರಿ ಆವಾಸ್ 2.0 ಯೋಜನೆಯಡಿ ನಗರದ ವಸತಿ ರಹಿತ ಹಾಗೂ ನಿವೇಶನ ರಹಿತ ಕುಟುಂಬಗಳಿಗೆ (ಕಚ್ಚಾ ಮನೆ ಹೊಂದಿರುವ) ವಸತಿ ಸೌಲಭ್ಯ ಕಲ್ಪಿಸಲು ಕೇಂದ್ರ ಸರ್ಕಾರದ **Unified web portal** ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ.

ಹಳಿಯಾಳ ಪುರಸಭಾ ವ್ಯಾಪ್ತಿಯೊಳಗಿನ ಎಲ್ಲಾ ವಾರ್ಡಗಳಲ್ಲಿರುವ ವಸತಿ ರಹಿತ (ಕಚ್ಚಾ ಮನೆ ಹೊಂದಿರುವ) ಮತ್ತು ನಿವೇಶನ ರಹಿತ ಅರ್ಹ ಫಲಾನಿಭವಿಗಳಿಗೆ ವಸತಿ ಸೌಲಭ್ಯ ಪಡೆಯಲು ಕೇಂದ್ರ ಸರ್ಕಾರದ **Unified web portal** ನಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಅರ್ಜಿ ಸಲ್ಲಿಸಲು ಜುಲೈ 15 ಕೊನೆಯ ದಿನವಾಗಿದ್ದು( ಸಲ್ಲಿಸಿದ ಒಂದು ಪ್ರತಿಯನ್ನು ದಾಖಲೆಗಳೊಂದಿಗೆ ಈ ಕಚೇರಿಗೆ ಸಲ್ಲಿಸಲು ಸೂಚಿಸಿದೆ) ಹೆಚ್ಚಿನ ಮಾಹಿತಿಗಾಗಿ ಕಾರ್ಯಾಲಯದ ವಸತಿ ಶಾಖೆಯನ್ನು ಸಂಪರ್ಕಿಸುವಂತೆ ಹಳಿಯಾಳ ಪುರಸಭೆ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಿ" -ಪ್ರೊ ನೀಲಕಂಠ ಭೂಮಣ್ಣವರ



ಪಾಶ್ಚಾಪೂರ: ಧರ್ಮಸ್ಥಳ ಗ್ರಾಮೀಣ ಅಭಿವೃದ್ಧಿ ಯೋಜನೆ ಬಿ.ಸಿ ಟ್ರಸ್ಟ್ ,ಹುಕ್ಕೇರಿ ವಲಯ ಹಾಗೂ ಮಹಿಳಾ ಒಕ್ಕೂಟ ಪಾಚ್ಚಾಪುರ ಇವರ ಸಹಯೋಗದಲ್ಲಿ ಬಸವೇಶ್ವರ ದೇವಾಲಯದ ಅವರಣದಲ್ಲಿ "ಮಾದಕ ವಸ್ತುಗಳ ವಿರೋಧಿ ದಿನಾಚರಣೆ"ಯನ್ನು ಆಚರಿಸಿದರು.

ಕಾರ್ಯಕ್ರಮ ಉದ್ಘಾಟನೆ ಮಾಡಿ ಮಾತನಾಡಿದ ಯಮಕನಮರಡಿ ಪಿ.ಎಸ್.ಐ.ಆರ್.ಎಂ ಪಾಟೀಲ್ ಸಾಹೇಬರು ಮಕ್ಕಳನ್ನು ದುರಾಬ್ಯಾಸಗಳಿಂದ ದೂರ ಇಡಬೇಕು ಎಂದು ಸಲಹೆ ನೀಡಿದರು.

ಇದೇ ಸಂದರ್ಭದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಸರಕಾರಿ ಪ್ರಥಮ ದರ್ಜೆ ಪದವಿ ಕಾಲೇಜಿನ ಕನ್ನಡ ಆಧ್ಯಾಪಕರಾದ ಪ್ರೊ. ನೀಲಕಂಠ ಭೂಮಣ್ಣವರ ಅವರು ಮಾತನಾಡಿ "ತಾಯಂದಿರು ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡುವುದರ ಮೂಲಕ ಮಾದಕ ವಸ್ತುವಿನ ವ್ಯಸನಗಳಿಂದ ದೂರವಿಡಬಹುದು "ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾಮೀಣ ಅಭಿವೃದ್ಧಿ ಯೋಜನೆಯ ಹುಕ್ಕೇರಿ ಕ್ಷೇತ್ರ ಯೋಜನಾಧಿಕಾರಿಗಳಾದ ಶ್ರೀಕಾಂತ್ ನಾಯ್ಕ್, ಪಾಚ್ಚಾಪುರ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷರಾದ ಅಬ್ದುಲ್ ಗಣಿ ದರ್ಗಾ, ಗ್ರಾಮ ಪಂಚಾಯತ್ ಸದಸ್ಯರಾದ ಲಕ್ಷ್ಮೀ ದುಂಡಗಿ, ಮಹಿಳಾ ಒಕ್ಕೂಟದ ಅಧ್ಯಕ್ಷರಾದ ಶ್ರೀಮತಿ ಮಾನಿಷಾ ಸಿಂಧೆ, ಪಾಷಾಪುರ ಕಾರ್ಯಕ್ರಮ ಅಧಿಕಾರಿ ಚಂದ್ರಕಾಂತ ಹಲಸಿಗಿ, ಗಂಗಾ ಅಂಬಿಗೇರ್ ,ಪತ್ರಕರ್ತರಾದ ನಿಲೇಶ್ ಜಗಜಂಪಿ ರಮೇಶ್ ಬಾಗೇವಾಡಿ ,ಅಂಕಲಿಗಿಯ ಪಿ.ಎಸ್.ಐ ಜಾದವ್ ಮಹಿಳಾ ಸ್ವಸಾಯ ಸಂಘದ ಸರ್ವ ಸದಸ್ಯರು ಮೇಲ್ವಿಚಾರಕರು ಉಪಸ್ಥಿತರಿದ್ದರು.

*****



**ಗೋಕಾಕ: ತಾಲೂಕು ಸರ್ಕಾರಿ ಆಸ್ಪತ್ರೆ ಆವರಣದಲ್ಲಿ ನೂತನವಾಗಿ ನಿರ್ಮಿಸಲಾಗುತ್ತಿರುವ ತಾಲೂಕಾ ಮಟ್ಟದ ಸಾರ್ವಜನಿಕ ಆರೋಗ್ಯ ಪ್ರಯೋಗಾಲಯ ನೂತನ ಕಟ್ಟಡ ಗುದ್ದಲಿ ಪೂಜೆಯನ್ನು ಶಾಸಕ ರಮೇಶ ಜಾರಕಿಹೊಳಿ ಅವರು ನೆರವೇರಿಸಿದರು. ಈ ಸಂದರ್ಭದಲ್ಲಿ ಬೀಮ್ಸ ನಿರ್ದೇಶಕ ಡಾ.ಅಶೋಕ ಶೆಟ್ಟಿ, ಮುಖ್ಯ ವೈದ್ಯಾಧಿಕಾರಿ ಡಾ.ರವೀಂದ್ರ ಆಂಟೀನ, ತಾಲೂಕು ವೈದ್ಯಾಧಿಕಾರಿ ಮುತ್ತಣ್ಣ ಕೊಪ್ಪದ, ಭೀಮನಗೌಡ ಪೊಲೀಸಗೌಡರ, ಜಿಪಂ ಮಾಜಿ ಸದಸ್ಯ ಟಿ ಆರ್ ಕಾಗಲ, ಡಾ.ಕಿರಣ, ಡಾ.ಕಡ್ಲೇಪ್ಪಗೋಳ, ಡಾ.ಶಾಂತಕುಮಾರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.**

# ಕಲಘಟಗಿಯ ಗೊಬ್ಬರ ಅಂಗಡಿ- ದಾಸ್ತಾನು ಮಳಿಗೆಗಳಿಗೆ ಜಿಲ್ಲಾಧಿಕಾರಿ ದಿಢೀರ ಭೇಟಿ

ಧಾರವಾಡ : ಬೇಡಿಕೆಗಿಂತ ಹೆಚ್ಚು ರಾಸಾಯನಿಕ ಗೊಬ್ಬರ ವಿತರಿಸಿದರೂ ಕಲಘಟಗಿ ತಾಲೂಕಿನಲ್ಲಿ ಅನಗತ್ಯ ಗೊಂದಲಗಳು, ರೈತರಿಗೆ ತೊಂದರೆಗಳು ಉಂಟಾಗುತ್ತಿವೆ. ಅನಿರೀಕ್ಷಿತ ಭೇಟಿ ನೀಡಿ ಪರಿಶೀಲಿಸಿದಾಗ ವಿತರಕರು ಸರಕಾರದ ನಿಯಮ, ಷರತ್ತು ಪಾಲಿಸದೆ ಇರುವುದು ಮತ್ತು ಸಂಬಂಧಿಸಿದ ಅಧಿಕಾರಿಗಳು ಕ್ರಮಬದ್ಧವಾಗಿ ಮೇಲುಸ್ತುವಾರಿ ಹಾಗೂ ನಿಗಾವಹಿಸದಿರುವುದು ಕಂಡು ಬಂದಿದೆ. ಅಧಿಕಾರಿಗಳಿಂದ ತನಿಖೆ ಮಾಡಿ, ತಪ್ಪಿತಸ್ಥರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವದಾಗಿ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.


ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಸಾರ್ವಜನಿಕ ದೂರು ಮತ್ತು ಮಾಧ್ಯಮಗಳ ವರದಿ ಹಿನ್ನೆಲೆಯಲ್ಲಿ ಬೀಜ, ರಸಗೊಬ್ಬರದ ಸಮಸ್ಯೆಗಳನ್ನು ತಿಳಿದು, ಪರಿಹರಿಸುವ ಉದ್ದೇಶದಿಂದ ಕಲಘಟಗಿ ಪಟ್ಟಣದ ಬೀಜ, ರಸಗೊಬ್ಬರ ಮಾರಾಟ ಮಳಿಗೆಗಳಿಗೆ ಇಂದು (ಜೂ.30) ಮಧ್ಯಾಹ್ನ ದಿಡೀರ್ ಭೇಟಿ ನೀಡಿ ಪರಿಶೀಲಿಸಿದರು. ಕೊಂಡುಕೊಳ್ಳಲು ಬಂದಿದ್ದ ರೈತರಿಂದ ಆಗುತ್ತಿರುವ ಸಮಸ್ಯೆಗಳ ಬಗ್ಗೆ ಮಾಹಿತಿ ಪಡೆದುಕೊಂಡರು.

ರೈತರನ್ನು ಉದ್ದೇಶಿಸಿ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಮಾತನಾಡಿ, ಮಣ್ಣಿಗೆ ನಾವೆಲ್ಲರೂ ಗೌರವ ಕೊಡಬೇಕು. ಯಾವುದೋ ಗೊಬ್ಬರವನ್ನು ಹಾಕಿ ಅದರ ಫಲವತ್ತತೆಯನ್ನು ಹಾಳು ಮಾಡಬಾರದು. ಯಾರಾದರೂ ದಬ್ಬಾಳಿಕೆ ಮಾಡಿ ಇದೇ ಗೊಬ್ಬರ ತೆಗೆದುಕೊಳ್ಳಿ ಎಂದು ಹೇಳಿ ನಿಮ್ಮ ದಾರಿ ತಪ್ಪಿಸಿ ಗೊಬ್ಬರವನ್ನು ಕೊಟ್ಟರೆ ಅದನ್ನು ಖರೀದಿ ಮಾಡಬಾರದು. ಅತಂಹವರ ಮೇಲೆ ತಕ್ಷಣ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದು. ಈ ಸಂಬಂಧ ಒಂದು ತಂಡವನ್ನು ರಚನೆ ಮಾಡಲಾಗಿದ್ದು, ಆ ತಂಡವು ಎಲ್ಲವನ್ನು ಪರಿಶೀಲಿಸುತ್ತದೆ ಎಂದು ರೈತರಿಗೆ ಅವರು ಹೇಳಿದರು.

ಜಮೀನಿಗೆ ಹೆಚ್ಚು ಗೊಬ್ಬರ ಹಾಕಿದರೆ ಹೆಚ್ಚು ಇಳುವರಿ ಬರುತ್ತದೆ ಅಂದುಕೊಳ್ಳುವುದು ತಪ್ಪು ಕಲ್ಪನೆ. ಅವಶ್ಯಕತೆಗಿಂತ ಹೆಚ್ಚು ಗೊಬ್ಬರ ಹಾಕಿದರೆ ಅಷ್ಟೊಂದು ಇಳುವರಿ ಬರುವುದಿಲ್ಲ. ಈ ಕಲ್ಪನೆಯಿಂದ ಮೊದಲು ಹೊರಬರಬೇಕು. ಕಲಘಟಗಿ ತಾಲೂಕಿಗೆ 4800 ಮೆಟ್ರಿಕ್ ಟನ್ ಯೂರಿಯಾ ಗೊಬ್ಬರ ಬೇಕು. ಸಧ್ಯ 5000 ಮೆಟ್ರಿಕ್ ಟನ್ ಯೂರಿಯಾ ಗೊಬ್ಬರ ಪೂರೈಕೆಯಾಗಿದೆ ಎಂದು ಅವರು ಹೇಳಿದರು.

ಪ್ರತಿ ತಾಲೂಕಿಗೆ ಟಾಸ್ಕ್ ಫೋರ್ಸ್ ರಚನೆ: ಕೆಲವು ರಸಗೊಬ್ಬರ ಮಾರಾಟಗಾರರು ಮತ್ತು ಇತರರು ರೈತರಿಗೆ ರಸಗೊಬ್ಬರ ವಿತರಿಸುವಲ್ಲಿ ಕಾನೂನು, ಸರಕಾರದ ಆದೇಶ ಮೀರಿ ವರ್ತಿಸುತ್ತಿರುವುದು ಮತ್ತು ರೈತರನ್ನು ವಂಚಿಸುತ್ತಿರುವುದು ಕಂಡು ಬರುತ್ತಿದೆ. ಆದ್ದರಿಂದ ನಿಯಮಾನುಸಾರ ರೈತರಿಗೆ ರಸಗೊಬ್ಬರ, ಬಿತ್ತನೆ ಬೀಜ, ಕಳನಾಶಕ ವಿತರಿಸುವುದನ್ನು ಪರಿಶೀಲಿಸಲು, ನಿರಂತರ ನಿಗಾವಹಿಸಲು ಮತ್ತು ಸೂಕ್ತ ಕಾನೂನು ಕ್ರಮ ಕೈಗೊಳ್ಳಲು ಅವಕಾಶವಾಗುವಂತೆ ಪ್ರತಿ ತಾಲೂಕಿಗೆ ಆಯಾ ತಹಶೀಲ್ದಾರರ ನೇತೃತ್ವದಲ್ಲಿ ಟಾಸ್ಕ್ ಫೋರ್ಸ್ ರಚಿಸಲಾಗುತ್ತದೆ.

ಈ ಟಾಸ್ ಫೋರ್ಸ್‌ದಲ್ಲಿ ಕೃಷಿ ಇಲಾಖೆ ಸಹಾಯಕ ನಿರ್ದೇಶಕರು, ಪೊಲೀಸ್ ಇಲಾಖೆ, ಜಿಎಸ್‌ಟಿ ಇಲಾಖೆ, ವಾಣಿಜ್ಯ ತೆರಿಗೆ ಇಲಾಖೆ, ಅಧಿಕಾರಿಗಳು ಇರುತ್ತಾರೆ. ಈ ಸಮಿತಿ ಎಲ್ಲ ರಸಗೊಬ್ಬರ ಮಾರಾಟ ಮಳಿಗೆಗಳಿಗೆ ನಿರಂತರ ಭೇಟಿ ನೀಡಿ, ನಿಗಾವಹಿಸಲಿದೆ ಮತ್ತು ಮೇಲುಸ್ತುವಾರಿ ಮಾಡಲಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದರು.



ಗೊಬ್ಬರದ ಮಾರಾಟಕ್ಕೆ ಪಿಓಎಸ್ ಬಳಕೆ ಕಡ್ಡಾಯ: ಜಿಲ್ಲೆಯ ಎಲ್ಲ ರಸಗೊಬ್ಬರ ಮಾರಾಟಗಾರರು ರೈತರಿಗೆ ರಸಗೊಬ್ಬರ ರೈತರಿಗೆ ರಸಗೊಬ್ಬರ ಮಾರಾಟ ಮಾಡುವುದಾಗಿ ಸರ್ಕಾರದ ಆದೇಶದಂತೆ ಕಡ್ಡಾಯವಾಗಿ ಪಿಓಎಸ್ ಮಷೀನ್ ಬಳಸಬೇಕು. ರೈತರ ಹೆಬ್ಬಟ್ಟು ಪಡೆದು, ಪಹಣಿ, ಆಧಾರ ಪ್ರತಿ ಸಂಗ್ರಹಿಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ನಿರ್ದೇಶಿಸಿದರು.

ಲಿಂಕ್ ಬೇಡ, ಎಂಆರ್‌ಪಿ ದರ ಫಿಕ್ಸ್: ರಸಗೊಬ್ಬರ ಮಾರಾಟಗಾರರು ರೈತರು ಬೇಡಿದ ಗೊಬ್ಬರವನ್ನು ಪೂರೈಸಬೇಕು. ಯಾವುದೇ ಲಿಂಕ್ ಗೊಬ್ಬರ, ಇತರ ಉತ್ಪನ್ನ ತೆಗೆದುಕೊಳ್ಳುವಂತೆ ಒತ್ತಾಯಿಸುವುದು ಕಾನೂನುಬಾಹಿರ.

ಕಲಘಟಗಿ ಪಟ್ಟಣ ಸೇರಿದಂತೆ ಜಿಲ್ಲೆಯ ಬಹುತೇಕ ಗೊಬ್ಬರ ಮಾರಾಟಗಾರರು ಯೂರಿಯಾ ಜೊತೆಗೆ ಬೇರೆ ಗೊಬ್ಬರ, ಕಳೆನಾಶಕಗಳನ್ನು ಒತ್ತಾಯಪೂರ್ವಕಾಗಿ ನೀಡುತ್ತಿದ್ದಾರೆ. ಮತ್ತು ಯೂರಿಯಾ ಗೊಬ್ಬರ ದರ ರೂ. 266.50 ಇರುವುದನ್ನು ಹೆಚ್ಚಿನ ದರಕ್ಕೆ ನೀಡುತ್ತಿದ್ದಾರೆ ಎಂದು ರೈತರು ದೂರುತ್ತಿದ್ದಾರೆ.

ಇದನ್ನು ಪರಿಶೀಲಿಸಲು ಅಧಿಕಾರಿಗಳ ತಂಡ ರಚಿಸಲಾಗುತ್ತಿದ್ದು, ತಪ್ಪು ಕಂಡು ಬಂದಲ್ಲಿ ಪ್ರಕರಣ ದಾಖಲಿಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಜಿಲ್ಲಾಧಿಕಾರಿಗಳು ತಿಳಿಸಿದರು.

ಗೊಬ್ಬರ ಖರೀದಿಗೆ ಜಿ.ಎಸ್.ಟಿ ಬಿಲ್ ಕೊಡಿ: ಗೊಬ್ಬರ ಅಂಗಡಿಯವರು ರೈತರಿಗೆ ಬರೀ ಬಿಳಿ ಹಾಳೆಯಲ್ಲಿ ಬರೆದುಕೊಡುತ್ತಾರೆ. ಬಿಲ್ ಕೊಡುತ್ತಿಲ್ಲ; ಜಿ.ಎಸ್.ಟಿ ಬಿಲ್ಲ ನೀಡುವುದೇ ಇಲ್ಲ ಎಂದು ಅನೇಕರು ಜಿಲ್ಲಾಧಿಕಾರಿಗಳ ಬಳಿ ದೂರಿದರು. ಪ್ರತಿಯೊಬ್ಬ ರೈತ ಗೊಬ್ಬರ ಖರೀದಿಸಿದರೆ ಅವನಿಗೆ ಜಿ.ಎಸ್.ಟಿ ನಮೂದಿಸಿರುವ ಪಕ್ಕಾ ಬಿಲ್ಲ ಕೊಡಬೇಕು. ಬಿಲ್ ಕೊಡದೆ ರೈತರಿಗೆ ಮೋಸ ಮಾಡಿದರೆ ಕ್ರಿಮಿನಲ್ ಕೆಸ್ ದಾಖಲಿಸುವುದಾಗಿ ಜಿಲ್ಲಾಧಿಕಾರಿಗಳು ಅಂಗಡಿಕಾರರಿಗೆ ಎಚ್ಚರಿಕೆ ನೀಡಿದರು.

ಅಂಗಡಿ ಮುಂದೆ ದರ, ದಾಸ್ತಾನು ವಿವರ ಪ್ರಕಟಿಸಿ: ಪ್ರತಿ ರಸಗೊಬ್ಬರ ಮಾರಾಟ ಅಂಗಡಿ ಮುಂದೆ ಅವರಲ್ಲಿ ಲಭ್ಯವಿರುವ ರಸಗೊಬ್ಬರಗಳು, ಅವುಗಳ ದರ, ಮಾರಾಟವಾದ ಚೀಲಗಳು, ದಾಸ್ತಾನು ವಿವರಗಳನ್ನು ಸಾರ್ವಜನಿಕರಿಗೆ ಕಾಣುವಂತೆ ದಪ್ಪ ಅಕ್ಷರಗಳಲ್ಲಿ ಕಡ್ಡಾಯವಾಗಿ ಪ್ರಕಟಿಸಬೇಕು.

ಇದರಿಂದ ರೈತರಿಗೆ ಅಗತ್ಯ ಮಾಹಿತಿ ಲಭಿಸಿ, ಅನಗತ್ಯ ಸಮಯ ಹಾಳು ತಪ್ಪುತ್ತದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದರು.

ಗೊಬ್ಬರದ ಕೃತಕ ಅಭಾವ ಸೃಷ್ಟಿಸಿದರೆ ಕ್ರಿಮಿನಲ್ ಕೇಸ್: ಬೇಡಿಕೆಗಿಂತ ಹೆಚ್ಚು ಯೂರಿಯಾ ಸೇರಿ ವಿವಿಧ ರಸಗೊಬ್ಬರಗಳನ್ನು ರೈತರ ಬೇಡಿಕೆ ಮೇರೆಗೆ ಕಲಘಟಗಿ ತಾಲೂಕಿಗೆ ಕೃಷಿ ಇಲಾಖೆ ಪೂರೈಸಿದೆ. ಆದರೂ ರೈತರು ಪ್ರತಿ ದಿನ ಗೊಬ್ಬರ ಖರೀದಿಗೆ ಅಂಗಡಿಗಳ ಮುಂದೆ ಸಾಲು ನಿಲ್ಲುತ್ತಿದ್ದಾರೆ. ಗೊಬ್ಬರ ಸಿಗುತ್ತಿಲ್ಲ ಎಂದು ದೂರುತ್ತಿದ್ದಾರೆ. ಈ ಕುರಿತು ಉಪ ವಿಭಾಗಾಧಿಕಾರಿಗಳ ನೇತೃತ್ವದಲ್ಲಿ ತನಿಖೆ ಮಾಡಿಸಿ, ವಿವರ ಪಡೆದುಕೊಳ್ಳುತ್ತೇನೆ. ಗೊಬ್ಬರದ ಕಳ್ಳ ಮಾರಾಟ, ಅನರ್ಹರಿಗೆ ಮತ್ತು ಕೃಷಿಕರಲ್ಲದವರಿಗೆ ಗೊಬ್ಬರ ಪೂರೈಸಿದ್ದು ಅಥವಾ ಅಕ್ರಮ ದಾಸ್ತಾನು ಮಾಡಿ, ರಸಗೊಬ್ಬರದ ಕೃತಕ ಅಭಾವ ಸೃಷ್ಟಿಸಿದ್ದರೆ, ಅಂತವರ ವಿರುದ್ಧ ಎಫ್.ಐ.ಆರ್ ದಾಖಲಿಸಿ, ಸೂಕ್ತ ಕಾನೂನು ಕ್ರಮ ತೆಗೆದುಕೊಳ್ಳುತ್ತೇನೆ ಮತ್ತು ಮಾರಾಟದ ಲೈಸನ್ಸ್ ರದ್ದು ಮಾಡಿ ಅಂಗಡಿ ಸೀಲ್ ಮಾಡುತ್ತೇನೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದರು.

ತಾಲೂಕಾವಾರು ಗೊಬ್ಬರ ಪೂರೈಕೆಯ ವಿವರ: ಯೂರಿಯಾ ಗೊಬ್ಬರವನ್ನು ಧಾರವಾಡ ತಾಲೂಕಿನಲ್ಲಿ 6837.28 ಮೆಟ್ರಿಕ್ ಟನ್, ಹುಬ್ಬಳ್ಳಿ ತಾಲೂಕಿನಲ್ಲಿ 2336.78 ಮೆಟ್ರಿಕ್ ಟನ್, ಕಲಘಟಗಿ ತಾಲೂಕಿನಲ್ಲಿ 5127.36 ಮೆಟ್ರಿಕ್ ಟನ್, ಕುಂದಗೋಳ ತಾಲೂಕಿನಲ್ಲಿ 1774.43 ಮೆಟ್ರಿಕ್ ಟನ್, ನವಲಗುಂದ ತಾಲೂಕಿನಲ್ಲಿ 1155.09 ಮೆಟ್ರಿಕ್ ಟನ್, ಒಟ್ಟು 17,230.94 ಮೆಟ್ರಿಕ್ ಟನ್ ಯೂರಿಯಾ ಗೊಬ್ಬರ ಪೂರೈಕೆಯಾಗಿದೆ.

ಡಿಎಪಿ (ಆಂಕ) ಗೊಬ್ಬರವನ್ನು ಧಾರವಾಡ ತಾಲೂಕಿನಲ್ಲಿ 1692.18 ಮೆಟ್ರಿಕ್ ಟನ್, ಹುಬ್ಬಳ್ಳಿ ತಾಲೂಕಿನಲ್ಲಿ 1605.51 ಮೆಟ್ರಿಕ್ ಟನ್, ಕಲಘಟಗಿ ತಾಲೂಕಿನಲ್ಲಿ 1576.55 ಮೆಟ್ರಿಕ್ ಟನ್, ಕುಂದಗೋಳ ತಾಲೂಕಿನಲ್ಲಿ 1573.05 ಮೆಟ್ರಿಕ್ ಟನ್, ನವಲಗುಂದ ತಾಲೂಕಿನಲ್ಲಿ 1830.15 ಮೆಟ್ರಿಕ್ ಟನ್, ಒಟ್ಟು 8277.44 ಮೆಟ್ರಿಕ್ ಟನ್ ಡಿಎಪಿ ಗೊಬ್ಬರ ಪೂರೈಕೆಯಾಗಿದೆ.

ಎಮ್‌ಓಪಿ (ಒಔಕ) ಗೊಬ್ಬರವನ್ನು ಧಾರವಾಡ ತಾಲೂಕಿನಲ್ಲಿ 352.7 ಮೆಟ್ರಿಕ್ ಟನ್, ಹುಬ್ಬಳ್ಳಿ ತಾಲೂಕಿನಲ್ಲಿ 449.38 ಮೆಟ್ರಿಕ್ ಟನ್, ಕಲಘಟಗಿ ತಾಲೂಕಿನಲ್ಲಿ 207.75 ಮೆಟ್ರಿಕ್ ಟನ್, ಕುಂದಗೋಳ ತಾಲೂಕಿನಲ್ಲಿ 56.75 ಮೆಟ್ರಿಕ್ ಟನ್, ನವಲಗುಂದ ತಾಲೂಕಿನಲ್ಲಿ 99.15 ಮೆಟ್ರಿಕ್ ಟನ್, ಒಟ್ಟು 1165.73 ಮೆಟ್ರಿಕ್ ಟನ್ ಎಮ್‌ಓಪಿ ಗೊಬ್ಬರ ಪೂರೈಕೆಯಾಗಿದೆ.

ಕಾಂಪ್ಲೇಕ್ಸ್ (ಅಂಟಒಿಟಜಥಜ) ಗೊಬ್ಬರವನ್ನು ಧಾರವಾಡ ತಾಲೂಕಿನಲ್ಲಿ 5134.246 ಮೆಟ್ರಿಕ್ ಟನ್, ಹುಬ್ಬಳ್ಳಿ ತಾಲೂಕಿನಲ್ಲಿ 4195.948 ಮೆಟ್ರಿಕ್ ಟನ್, ಕಲಘಟಗಿ ತಾಲೂಕಿನಲ್ಲಿ 2528.22 ಮೆಟ್ರಿಕ್ ಟನ್, ಕುಂದಗೋಳ ತಾಲೂಕಿನಲ್ಲಿ 3339.116 ಮೆಟ್ರಿಕ್ ಟನ್, ನವಲಗುಂದ ತಾಲೂಕಿನಲ್ಲಿ 5541.5 ಮೆಟ್ರಿಕ್ ಟನ್, ಒಟ್ಟು 20739.03 ಮೆಟ್ರಿಕ್ ಟನ್ ಕಾಂಪ್ಲೇಕ್ಸ್ (ಅಂಟಒಿಟಜಥಜ) ಗೊಬ್ಬರ ಪೂರೈಕೆಯಾಗಿದೆ.

ಎಸ್‌ಎಸ್‌ಪಿ ಗೊಬ್ಬರವನ್ನು ಧಾರವಾಡ ತಾಲೂಕಿನಲ್ಲಿ 197.65 ಮೆಟ್ರಿಕ್ ಟನ್, ಹುಬ್ಬಳ್ಳಿ ತಾಲೂಕಿನಲ್ಲಿ 150.75 ಮೆಟ್ರಿಕ್ ಟನ್, ಕಲಘಟಗಿ ತಾಲೂಕಿನಲ್ಲಿ 164.3 ಮೆಟ್ರಿಕ್ ಟನ್, ನವಲಗುಂದ ತಾಲೂಕಿನಲ್ಲಿ 20.75 ಮೆಟ್ರಿಕ್ ಟನ್, ಒಟ್ಟು 533.45 ಮೆಟ್ರಿಕ್ ಟನ್ ಎಸ್‌ಎಸ್‌ಪಿ ಗೊಬ್ಬರ ಪೂರೈಕೆಯಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಕಲಘಟಗಿ ತಹಶೀಲ್ದಾರ ಬಸವರಾಜ ಬೆಣ್ಣೆಶಿರೂರು, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ ಅಂತರವಳ್ಳಿ, ಪ್ರಭಾರಿ ಕೃಷಿ ಸಹಾಯಕ ನಿರ್ದೇಶಕ ಚನ್ನಪ್ಪ ಅಂಗಡಿ ಸೇರಿದಂತೆ ಇತರ ಅಧಿಕಾರಿಗಳು, ರೈತ ಮುಖಂಡರು, ರೈತರು, ಸಾರ್ವಜನಿಕರು ಇದ್ದರು.

****

# ರೈತರ ಶ್ರೇಯೋಭಿವೃದ್ಧಿಗಾಗಿ ರೈತಮಿತ್ರನಾಗಿ ಕೆಲಸ ಮಾಡುತ್ತಿರುವ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕು : ಬಾಲಚಂದ್ರ ಜಾರಕಿಹೊಳಿ



ಗೋಕಾಕ: ರೈತರ ಶ್ರೇಯೋಭಿವೃದ್ಧಿಗಾಗಿ ರೈತಮಿತ್ರನಾಗಿ ಕೆಲಸ ಮಾಡುತ್ತಿರುವ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕು ಮೂಡಲಗಿ ಮತ್ತು ಗೋಕಾಕ ತಾಲ್ಲೂಕು ಸೇರಿ 519.72 ಕೋಟಿ ರೂಪಾಯಿಗಳನ್ನು ಶೂನ್ಯ ಬಡ್ಡಿದರದಲ್ಲಿ ರೈತರಿಗೆ ವಿತರಿಸಿದೆ ಎಂದು ಅರಭಾವಿ ಶಾಸಕ, ಬೆಮುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ ಅವರು ತಿಳಿಸಿದರು.

ಸೋಮವಾರದಂದು ನಗರದ ಹೊರ ವಲಯದಲ್ಲಿರುವ ಗೋಕಾಕ ಸಪ್ಲಾಯರ್ಸ್ ಸಭಾ ಭವನದಲ್ಲಿ ಮೂಡಲಗಿ ಮತ್ತು ಗೋಕಾಕ ತಾಲ್ಲೂಕುಗಳ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಅಧ್ಯಕ್ಷರು ಮತ್ತು ಅದರ ಆಡಳಿತ ಮಂಡಳಿಯ ಸದಸ್ಯರ ಸೌಹಾರ್ದಯುತ ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಮುಂದಿನ ದಿನಗಳಲ್ಲಿಯೂ ರೈತರಿಗೆ ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಸಾಲವನ್ನು ವಿತರಿಸುವ ಗುರಿಯನ್ನು ಇಟ್ಟುಕೊಳ್ಳಲಾಗಿದೆ ಎಂದವರು ಹೇಳಿದರು.

ಮೂಡಲಗಿ ಮತ್ತು ಗೋಕಾಕ ತಾಲ್ಲೂಕಿನ ಅಭ್ಯರ್ಥಿಯನ್ನು ಸೆಪ್ಟೆಂಬರ್ ತಿಂಗಳಲ್ಲಿ ಪ್ರಕಟಿಸಲಾಗುವುದು. ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಉತ್ತಮ ಅಭ್ಯರ್ಥಿಯನ್ನು ಕಣಕ್ಕಿಳಿಸಲಾಗುವುದು. ಈಗಾಗಲೇ ಬೆಳಗಾವಿ, ಖಾನಾಪೂರ, ರಾಮದುರ್ಗ ತಾಲ್ಲೂಕುಗಳಲ್ಲಿ ಬ್ಯಾಂಕಿನ ಚುನಾವಣೆ ಸಂಬಂಧ ಸಭೆಗಳನ್ನು ನಡೆಸಲಾಗಿದೆ. ಮುಂದಿನ ದಿನಗಳಲ್ಲಿ ಬಾಕಿ ಉಳಿದಿರುವ ತಾಲ್ಲೂಕುಗಳಲ್ಲಿ ಸಹಕಾರಿಗಳ ಸಭೆಯನ್ನು ನಡೆಸಲಾಗುವುದು. ಚುನಾವಣೆಗೆ ಬೇಕಾದ ಪೂರ್ಣ ತಯಾರಿಯನ್ನು ಈಗಾಗಲೇ ಸಿದ್ಧಪಡಿಸಲಾಗಿದೆ. 16 ಸ್ಥಾನಗಳ ಪೈಕಿ 13 ಸ್ಥಾನಗಳಲ್ಲಿ ತಮ್ಮ ಮೈತ್ರಿಕೂಟದ ಅಭ್ಯರ್ಥಿಗಳು ಜಯ ಗಳಿಸಲಿದ್ದು, ಮತ್ತೊಂದು ಅವಧಿಗೆ ಅಧಿಕಾರದ ಚುಕ್ಕಾಣಿ ಹಿಡಿಯಲಿದ್ದಾರೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಮುಂಬರುವ ಅಕ್ಟೋಬರ್ 19 ರಂದು ನಡೆಯುವ ಜಿಲ್ಲಾ ಮಧ್ಯವರ್ತಿ ಸಹಕಾರಿ ಬ್ಯಾಂಕ್ ಚುನಾವಣೆಯಲ್ಲಿ ಈಗಿರುವ ಆಡಳಿತ ಮಂಡಳಿಯನ್ನು ಮತ್ತೊಮ್ಮೆ ಅಧಿಕಾರಕ್ಕೆ ತಂದರೆ ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ರೈತರಿಗೆ ಸಾಲವನ್ನು ನೀಡುವುದರ ಜತೆಗೆ ರೈತ ಸ್ನೇಹಿಯಾಗಿ ಕೆಲಸ ಮಾಡುತ್ತೇವೆ. ಬ್ಯಾಂಕ್ ಅಧ್ಯಕ್ಷ ಅಪ್ಪಾಸಾಹೇಬ ಕುಲಗುಡೆ ಅವರ ನೇತೃತ್ವದ ಆಡಳಿತ ಮಂಡಳಿಯು ರೈತರ ಸೇವೆಗೆ ಬದ್ಧವಿದೆ. ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದೆ. ಜತೆಗೆ ಇವರ ಅವಧಿಯಲ್ಲಿ ಸುಮಾರು 280 ಕೋಟಿ ರೂಪಾಯಿ ಡಿಪಾಸಿಟ್ ಆಗಿದೆ ಎಂದು ತಿಳಿಸಿದರು.

ಬ್ಯಾಂಕ್ ನಿಂದ ರೈತರಿಗೆ ಅನೇಕ ಸಾಲ ಸೌಲಭ್ಯಗಳನ್ನು ವಿತರಿಸಲು ಕ್ರಮ ಕೈಕೊಳ್ಳಲಾಗುವುದು. ಮತ್ತೊಂದು ಬಾರಿ ಅಧಿಕಾರಕ್ಕೆ ಬರಲು ರೈತರ ಸಹಕಾರ, ಆಶೀರ್ವಾದ ಬೇಕೇ ಬೇಕು. ಈ ದಿಸೆಯಲ್ಲಿ ಸಹಕಾರಿ ತತ್ವಗಳನ್ನು ಪಾಲನೆ ಮಾಡಿಕೊಂಡು ಬರುತ್ತಿರುವ ನಮ್ಮ ಗುಂಪಿಗೆ ನಿಮ್ಮೆಲ್ಲರ ಆಶೀರ್ವಾದವು ಅವಶ್ಯವಾಗಿದೆ ಎಂದು ಹೇಳಿದರು.

ಪ್ರಸ್ತುತ 6 ಸಾವಿರ ಕೋಟಿ ರೂಪಾಯಿ ಇರುವ ಠೇವಣಿಯನ್ನು ಮುಂದಿನ ದಿನಗಳಲ್ಲಿ 8 ಸಾವಿರ ಕೋಟಿ ರೂಪಾಯಿ ತನಕ ವಿಸ್ತರಿಸುವ ಗುರಿಯನ್ನು ಇಟ್ಟುಕೊಳ್ಳಲಾಗಿದೆ. ರೈತರಿಗೆ ಈಗಾಗಲೇ 3400 ಕೋಟಿ ವರ್ಷಗಳ ಶೂನ್ಯ ಬಡ್ಡಿ ದರದಲ್ಲಿ ಸಾಲವನ್ನು ವಿತರಿಸಲಾಗಿದೆ. ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಸಹಕಾರಿ ಸಂಘಗಳಿಗೆ ಪತ್ತನ್ನು ಹೆಚ್ಚಿಸುವ ಮೂಲಕ ರೈತರ ಆರ್ಥಿಕ ಅಭಿವೃದ್ಧಿ ಜತೆಗೆ ಸಂಘಗಳ ಬಲವರ್ಧನೆಗಾಗಿ ಶ್ರಮಿಸುವ ಇರಾದೆ ತಮ್ಮದಾಗಿದೆ ಎಂದು ಅವರು ತಿಳಿಸಿದರು.

ಮಾಜಿ ಶಾಸಕ ಮತ್ತು ಬ್ಯಾಂಕ್ ನಿರ್ದೇಶಕ ಮಹಾಂತೇಶ ದೊಡ್ಡಗೌಡ್ರ ಮಾತನಾಡಿ, ಶಾಸಕ ಬಾಲಚಂದ್ರ ಜಾರಕಿಹೊಳಿ ಅವರ ದೂರದೃಷ್ಟಿ ನಾಯಕತ್ವದಲ್ಲಿ ನಮ್ಮ ಬೆಳಗಾವಿ ಜಿಲ್ಲೆಯಲ್ಲಿ ಸಹಕಾರಿ ರಂಗವು ಪ್ರಗತಿ ಸಾಧಿಸುತ್ತಿದೆ. ಎಲ್ಲರೂ ತನಗಾಗಿ, ತನಗಾಗಿ ಎಲ್ಲರೂ ಎಂಬ ಸಹಕಾರಿ ತತ್ವ ದಡಿ ಬಾಲಚಂದ್ರ ಜಾರಕಿಹೊಳಿ ಅವರು ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಅಭಿವೃದ್ಧಿಯನ್ನು ಮಾಡುತ್ತಿದ್ದಾರೆ. ನಿಸ್ವಾರ್ಥ ಸೇವೆಯನ್ನು ಸಲ್ಲಿಸುತ್ತಿದ್ದಾರೆ. ಕೇವಲ ಬೆಂಗಳೂರು, ಹಾಸನಗಳಿಗೆ ಅಷ್ಟೇ ಸೀಮಿತವಾಗಿದ್ದ ಕೆಎಂಎಫ್ ಸಂಸ್ಥೆಯನ್ನು ರಾಷ್ಟ್ರ ಮಟ್ಟದಲ್ಲಿ ಗುರುತಿಸುವ ಮಹಾನ್ ಕಾರ್ಯವನ್ನು ಮಾಡಿರುವುದು ಅವರ ಸಾಧನೆಗಳನ್ನು ಎತ್ತಿ ತೋರಿಸುತ್ತದೆ ಎಂದು ಗುಣಗಾನ ಮಾಡಿದರು.

ವೇದಿಕೆಯಲ್ಲಿ ಬಿಡಿಸಿಸಿ ಬ್ಯಾಂಕ್ ಅಧ್ಯಕ್ಷ ಅಪ್ಪಾಸಾಹೇಬ ಕುಲಗುಡೆ, ಮಾಜಿ ಶಾಸಕ ಅರವಿಂದ ಪಾಟೀಲ, ಉಪಾಧ್ಯಕ್ಷ ಸುಭಾಸ ಢವಳೇಶ್ವರ, ನಿರ್ದೇಶಕರಾದ ರಾಜೇಂದ್ರ ಅಂಕಲಗಿ, ಎಸ್.ಎಸ್.ಢವಣ, ನೀಲಕಂಠ ಕಪ್ಪಲಗುದ್ದಿ, ಬೆಳಗಾವಿ ಟಿಎಪಿಸಿಎಂಎಸ್ ಅಧ್ಯಕ್ಷ ಶಂಕರಗೌಡ ಪಾಟೀಲ, ಶಂಕರಗೌಡ ಪಾಟೀಲ ಮಲ್ಲಾಪೂರ ಅವರು ಉಪಸ್ಥಿತರಿದ್ದರು.

***

**ಮೂಡಲಗಿ ಮತ್ತು ಗೋಕಾಕ ತಾಲ್ಲೂಕಿನಲ್ಲಿ 114 ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘಗಳಿದ್ದು, 2014–15 ರಲ್ಲಿ 173.50 ಕೋಟಿ ರೂಪಾಯಿ ಪತ್ತು ಮಂಜೂರು ಮಾಡಲಾಗಿದೆ. ಇದೇ ಸಾಲಿನಲ್ಲಿ 519.72 ಕೋಟಿ ರೂಪಾಯಿಗಳ ಪತ್ತು ಮಂಜೂರು ಮಾಡಲಾಗಿದೆ. ಇದರಿಂದ ಕಳೆದ ಹತ್ತು ವರ್ಷದಲ್ಲಿ 346.22 ಕೋಟಿ ರೂಪಾಯಿ ಪತ್ತು ಹೆಚ್ಚಳವಾಗಿದೆ. 481.07 ಕೋಟಿ ರೂಪಾಯಿ ಡಿಕೆಸಿಸಿ ಸಾಲ, 1.13 ಕೋಟಿ ರೂಪಾಯಿ ಗೋಡಾವಣ ಸಾಲ, 2.89 ಕೋಟಿ ರೂಪಾಯಿ ಎಂ.ಟಿ ಟ್ರ್ಯಾಕ್ಟರ್ ಸಾಲ, ಒಟ್ಟು ಠೇವುಗಳು 147.50 ಕೋಟಿ ರೂಪಾಯಿ, 17.38 ಕೋಟಿ ರೂಪಾಯಿ ಚಿನ್ನದ ಸಾಲ, 16.70 ಕೋಟಿ ರೂಪಾಯಿ ಕೃಷಿಯೇತರ ಸಾಲ, 2.15 ಕೋಟಿ ರೂಪಾಯಿ ನಗದು ಪತ್ತಿನ ಸಾಲ, 2.94 ಕೋಟಿ ರೂಪಾಯಿ ಸ್ವ ಸಹಾಯ ಸಂಘಗಳಿಗೆ ಸಾಲ ವಿತರಿಸಲಾಗಿದೆ ಎಂದು ಬ್ಯಾಂಕಿನ ಮಾರ್ಗದರ್ಶಕರೂ ಆಗಿರುವ ಶಾಸಕ, ಬೆಮುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿಯವರು ವಿವರಿಸಿದರು.**

# ಶ್ರೀ ಖಾಸ್ಗತೇಶ್ವರಮಠದಲ್ಲಿ ಸಪ್ತಭಜನೆ ಪ್ರಾರಂಭ



ತಾಳಿಕೋಟೆ, ಪಟ್ಟಣದ ಶ್ರೀ ಖಾಸ್ಗತೇಶ್ವರ ಜಾತ್ರೋತ್ಸವದ ಅಂಗವಾಗಿ ಪ್ರತಿವರ್ಷದಂತೆ ಜರುಗುವ ಸಪ್ತಭಜನಾ ಕಾರ್ಯಕ್ರಮವು ಸೋಮವಾರರಂದು ಪ್ರಾರಂಭಗೊಂಡಿತು.

9 ದಿನಗಳವರೆಗೆ ಜರುಗಲಿರುವ ಸಪ್ತ ಭಜನಾ ಕಾರ್ಯಕ್ರಮಕ್ಕೆ ಶ್ರೀ ಖಾಸ್ಗತೇಶ್ವರ ಮಠದ ಬಾಲ ಶಿವಯೋಗಿ ಶ್ರೀ ಸಿದ್ದಲಿಂಗ ದೇವರು ಆಗೂ ಶ್ರೀಮಠದ ಉಸ್ತುವಾರಿ ವೇ॥ ಮುರುಘೇಶ ವಿರಕ್ತಮಠ ಅವರು ಚಾಲನೆ ನೀಡಿದರು. ಪ್ರತಿದಿನ ಹಗಲು ರಾತ್ರಿ ಸತತವಾಗಿ ನಡೆದು ದಿ. 7 ಸೋಮವಾರರಂದು ಬೆಳಿಗ್ಗೆ 5 ಘಂಟೆಗೆ ಗೋಪಾಲ ಕಾವಲಿ(ಮೊಸರುಗಡಿಗೆ) ಒಡೆಯುವದಿನದಂದು ಮುಕ್ತಾಯಗೊಳ್ಳಲಿದೆ.

ಸುಮಾರು 160 ಕ್ಕೂ ಹೆಚ್ಚು ಗ್ರಾಮಸ್ಥರು ಈ ಸಪ್ತ ಭಜನಾ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುತ್ತಾ ಸಾಗಿದ್ದಾರೆ ದಿನದ 1 ಘಂಟೆಗೆ ಒಂದು ಗ್ರಾಮಸ್ಥರಿಗೆ ಭಜನೆಯಲ್ಲಿ ಪಾಲ್ಗೊಳ್ಳಲು ಹಂಚಿಕೆ ಮಾಡಲಾಗಿದ್ದು ಸಪ್ತಭಜನೆಯಲ್ಲಿ ಓಂ ನಃಮ ಶಿವಾಯ ನಾಮಾಂಕಿತ ಮಠಕ್ಕೆ ಆಗಮಿಸುತ್ತಿರುವ ಭಕ್ತಾಧಿಕಾರಿಗಳಿಗೆ ಭಕ್ತಿಯ ಮಾರ್ಗದತ್ತಗೊಂಡೊಯುತ್ತಿದೆ.

****

### ಇದೇ 3 ರಂದು ಇಂಗಳೆ ಚಲೋ ಕಾರ್ಯಕ್ರಮ

# ಹಲ್ಲೆ ಮಾಡಿದವರಿಗೆ ಕಠಿಣ ಶಿಕ್ಷೆ ನೀಡಿ




ರಬಕವಿ–ಬನಹಟ್ಟಿ,ಜೂ30: ಹುಕ್ಕೇರಿ ತಾಲ್ಲೂಕಿನ ಇಂಗಳೆ ಗ್ರಾಮದಲ್ಲಿ ಗೋವು ರಕ್ಷಕರ ಮೇಲೆ ಮುಸ್ಲಿಂ ಜಿಹಾದಿಗಳು ಹಲ್ಲೆ ನಡೆಸಿರುವುದು ಖಂಡಣೀಯವಾಗಿದೆ. ಇದನ್ನು ಶ್ರೀರಾಮ ಸೇನೆ ಖಂಡಿಸುತ್ತದೆ ಎಂದು ಶ್ರೀರಾಮ ಸೇನೆಯ ಮುಖಂಡ ಈಶ್ವರ ಯಳಸೂರ ತಿಳಿಸಿದರು.

ಅವರು ಸೋಮವಾರ ಇಲ್ಲಿನ ಜಮಖಂಡಿ ಕುಡಚಿ ರಾಜ್ಯ ಹೆದ್ದಾರಿಯ ಮೇಲೆ ಹಮ್ಮಿಕೊಂಡ ಪ್ರತಿಭಟನೆಯ ಸಂದರ್ಭದಲ್ಲಿ ಮಾತನಾಡಿದರು. ರಾಜ್ಯ ಸರ್ಕಾರ ಅದಷ್ಟು ಬೇಗನೆ ಹಲ್ಲೆ ನಡೆಸಿರುವವರನ್ನು ಬಂಧಿಸಿ ಅವರಿಗೆ ಕಠಿಣ ಶಿಕ್ಷೆಯನ್ನು ನೀಡಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಇನ್ನಷ್ಟು ಉಗ್ರ ಹೋರಾಟವನ್ನು ಕೈಗೊಳ್ಳಲಾಗುವುದು. ಇದೇ 3 ರಂದು ಬೃಹತ್ ಪ್ರತಿಭಟನೆಯನ್ನು ಕೈಗೊಳ್ಳಲು ಶ್ರೀರಾಮ ಸೇನೆ ಕಾರ್ಯಕರ್ತರು ಮತ್ತು ಹಿಂದೂಪರ ಸಂಘಟನೆಗಳಿಂದ ಇಂಗಳೆ ಗ್ರಾಮ ಚಲೋ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಈಶ್ವರ ಯಳಸೂರ ತಿಳಿಸಿದರು.

ಮತ್ತೋರ್ವ ಮುಖಂಡ ಸಂಜಯ ತೆಗ್ಗಿ ಮಾತನಾಡಿ, ಗೋವುಗಳ ಸಾಗಾಣಿಕೆ ಮಾಡುತ್ತಿರುವ ವ್ಯಕ್ತಿಗಳಿಂದ ಗೋವುಗಳನ್ನು ರಕ್ಷಣೆ ಮಾಡಿ ಅವುಗಳನ್ನು ಪೊಲೀಸ್ ಠಾಣೆಗೆ ನೀಡಲಾಗಿತ್ತು. ನಂತರ ಗೋವು ಸಾಗಾಣಿಕೆ ಮಾಡುವವರು ಪೊಲೀಸ್ ರಿಂದ ಗೋವುಗಳನ್ನು ಬಿಡಿಸಿಕೊಂಡು ಬಂದು ಮತ್ತೆ ಅವುಗಳನ್ನು ಸಾಗಾಣಿಕೆ ಮಾಡುತ್ತಿದ್ದರು. ಆಗ ಅವುಗಳನ್ನು ರಕ್ಷಣೆ ಮಾಡುವ ಸಂದರ್ಭದಲ್ಲಿ ಅಲ್ಲಿರುವ ಮುಸ್ಲಿಂ ಜಿಹಾದಿಗಳು, ಹಿಂದೂ ಕಾರ್ಯಕರ್ತರ ಮೇಲೆ ಪೈಶಾಚಿಕ ಹಲ್ಲೆಯನ್ನು ಮಾಡಿದ್ದಾರೆ. ಇದನ್ನು ಪ್ರತಿಯೊಬ್ಬ ಹಿಂದೂ ಸಮಾಜದವರು ಖಂಡಿಸಬೇಕು. ಸರ್ಕಾರ ಇಂಥ ವ್ಯಕ್ತಿಗಳ ವಿರುದ್ಧ ಕಠಿಣ ಕಾನೂನು ಕ್ರಮ ತೆಗೆದುಕೊಳ್ಳಬೇಕು ಎಂದು ಆಗ್ರಹಿಸಿದರು.

ಜಮಖಂಡಿ ಕುಡಚಿ ರಾಜ್ಯ ಹೆದ್ದಾರಿಯ ಮೇಲೆ ಪ್ರತಿಭಟನೆ ನಡೆದಿದ್ದರಿಂದ ಸಂಚಾರಕ್ಕೆ ತೊಂದರೆಯಾಯಿತು. ಈ ಸಂದರ್ಭದಲ್ಲಿ ಯಮನಪ್ಪ ಕೋರಿ, ವೀರೂಪಾಕ್ಷಯ್ಯ ಮಠದ, ಎಂ.ಎಂ. ಹೊಸಮನಿ, ಸಂಜು ರಾವಳ, ಬಸವರಾಜ ಮನ್ನಿ, ಮಲ್ಲು ಸವದಿ ಸೇರಿದಂತೆ ಅನೇಕರಿದ್ದರು.

# ಮೂಲ ಸೌಲಭ್ಯಕ್ಕೆ ಆದ್ಯತೆ - ಶಾಸಕ ನಿಖಿಲ್ ಕತ್ತಿ



ಹುಕ್ಕೇರಿ; ಮಕ್ಕಳ ಶಿಕ್ಷಣ ಬುನಾದಿಯಾಗಿ ಅಂಗನವಾಡಿ ಕಟ್ಟಡ, ಹಾಗೂ ಶಾಲಾ ಕಟ್ಟಡಗಳಿಗೆ ಹೆಚ್ಚಿನ ಆದ್ಯತೆ ನೀಡಿ ಮೂಲಭೂತ ಸೌಲಬ್ಯಗಳನ್ನು ಒದಗಿಸಲು ಪ್ರಯತ್ನಿಸಿಲಾಗುತ್ತಿದೆ ಯೋಜನೆಗಳು ಯಶಸ್ವಿಗೊಳ್ಳಲು ಸಾರ್ವಜನಿಕರ ಸಹಕಾರ ಅಗತ್ಯವೆಂದು ಶಾಸಕ ನಿಖಿಲ್ ಕತ್ತಿ ಹೇಳಿದರು.

ಕ್ಷೇತ್ರದ ವಿವಿಧ ಹಳ್ಳಿಗಳಲ್ಲಿ ಸೋಮವಾರ ಮಿಂಚಿನ ಸಂಚಾರ ನಡೆಸಿದ ಶಾಸಕ ನಿಖಿಲ್ ಕತ್ತಿ ಅವರು ಅಂಗನವಾಡಿ ಕಟ್ಟಡ ಹಾಗೂ ಜಲಕುಂಭಗಳನ್ನು ಉದ್ಘಾಟಿಸಿದರು.

ಹುಕ್ಕೇರಿ ಮತಕ್ಷೇತದ ಅಂಕಲೆ ಗ್ರಾಮದಲ್ಲಿ ನರೇಗಾ ಯೋಜನೆ ಹಾಗೂ ಇಲಾಖೆಯ ಒಗ್ಗೂಡಿಸುವಿಕೆಯ ಅನುದಾನದಡಿ ನೂತನವಾಗಿ ನಿರ್ಮಿಸಿದ 13 ಲಕ್ಷರೂ ವೆಚ್ಚ ಅಂಗನವಾಡಿ ಕಟ್ಟಡವನ್ನು ಉದ್ಘಾಟಿಸಿದರು. ಹಾಗೂ ಅಮ್ಮಣಗಿ ಗ್ರಾಮ ಪಂಚಾಯತಿಯ ವ್ಯಾಪ್ತಿಯಲ್ಲಿ 15 ನೇ ಹಣಕಾಸು ಯೋಜನೆಯಡಿ ಹೊಸ ಪೈಪಲೈನ್ ಹಾಗೂ ಜಲ ಕುಂಭಗಳನ್ನು ಉದ್ಘಾಟಿಸಿದರು.

ಉದ್ಯೋಗ ಖಾತರಿ ಯೋಜನೆ ಹಾಗೂ 15ನೇ ಹಣಕಾಸು ಯೋಜನೆಯಡಿ ನೀರಿನ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಕ್ಷೇತ್ರದಲ್ಲಿ ಸ್ವಚ್ಛ, ಶುದ್ಧ ಪರಿಸರ ನಿರ್ಮಾಣಕ್ಕೆ ಪಣ ತೊಡಲಾಗಿದ್ದು ಈ ನಿಟ್ಟಿನಲ್ಲಿ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ ಎಂದರು.

ಸಿಡಿಪಿಓ ಹರಿಪ್ರಸಾದ ಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ತಾ.ಪಂ ಇಓ ಟಿ ಆರ್ ಮಲ್ಲಾಡದ ಮುಖಂಡರಾದ ಜಿ.ಆರ್ ಪಾಟೀಲ, ಗ್ರಾ.ಪಂ ಮಾಜಿ ಅಧ್ಯಕ್ಷ ಭರತ ಪುಂಡೆ, ಪ್ರಶಾಂತ ಪಾಟೀಲ, ಉಪಾಧ್ಯಕ್ಷರಾದ ಸುಜಾತಾ ಘಸ್ತಿ, ಸದಸ್ಯರಾದ ಅನಿತಾ ಅಜರೇಕರ, ಗಂಗವ್ವಾ ಖಾತೇದಾರ, ಲಲಿತಾ ಸುತಾರ, ವಿಶ್ವನಾಥ ಪಾಟೀಲ, ಪಿಡಿಓ ಕಲ್ಲಪ್ಪಾ ಕುರಣಿ, ಸಾವಿತ್ರಿ ಬ್ಯಾಕೂಡ, ಎಸ್ ಅಲಗರಾವುತ ಗ್ರಾಮಸ್ಥರು, ಮೇಲ್ವಿಚಾರಕರು ಮತ್ತಿತರರು ಉಪಸ್ಥಿತರಿದ್ದರು.

ಸಾರ್ವಜನಿಕರ ಕುಂದುಕೊರತೆ ಪಟ್ಟಣದ ಪಿಕಾರ್ಡ ಆವರಣದಲ್ಲಿ ಸಾರ್ವಜನಿಕರ ಕುಂದುಕೊರತೆ ಸಭೆ ಶಾಸಕ ನಿಖಿಲ್ ಕತ್ತಿ ನಡೆಸಿದರು,

## ಪರಿಶಿಷ್ಟ ಪಂಗಡದ ಇಂಜಿನಿಯರಿಂಗ್ ಪದವೀಧರರಿಗೆ ಶಿಷ್ಯವೇತನ/ತರಬೇತಿ: ಅರ್ಜಿ ಆಹ್ವಾನ

ಕೊಪ್ಪಳ : ಐಐಎಸಿ, ಐಐಟಿ & ಎನ್‌ಐಟಿ ಸಂಸ್ಥೆಗಳ ಮೂಲಕ ಆರ್ಟಿಫಿಶಿಯಲ್ & ಮಷಿನ್ ಲರ್ನಿಂಗ್ **(Artificial Intelligence and Machine Learning)** ವೃತ್ತಿಪರ ಕೋರ್ಸ್‌ಗಳಲ್ಲಿ ಭಾಗವಹಿಸುವ ಪರಿಶಿಷ್ಟ ಪಂಗಡದ 200 ಇಂಜಿನಿಯರಿಂಗ್ ಪದವೀಧರರಿಗೆ ಶಿಷ್ಯವೇತನ/ ತರಬೇತಿ ನೀಡುವ ಸಂಬಂಧ ಅರ್ಜಿ ಸಲ್ಲಿಸಲಾಗಿದೆ ಎಂದು ಕೊಪ್ಪಳ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

2024–25ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆಯಲ್ಲಿ ಐಐಎಸಿ, ಐಐಟಿ & ಎನ್‌ಐಟಿ ಸಂಸ್ಥೆಗಳ ಮೂಲಕ ಆರ್ಟಿಫಿಶಿಯಲ್ & ಮಷಿನ್ ಲರ್ನಿಂಗ್ ವೃತ್ತಿಪರ ಕೋರ್ಸ್‌ಗಳಲ್ಲಿ ಭಾಗವಹಿಸುವ ಪರಿಶಿಷ್ಟ ಪಂಗಡದ 200 ಇಂಜಿನಿಯರಿಂಗ್ ಪದವೀಧರರಿಗೆ ರೂ. 15,000 ಗಳ ಶಿಷ್ಯವೇತನ ನೀಡಲಾಗುವುದೆಂದು ಕೆಲವು ಷರತ್ತಿಗೊಳಪಟ್ಟು ಮಂಜೂರಾತಿ ನೀಡಿ ಆದೇಶಿಸಿರುತ್ತಾರೆ. ಸರ್ಕಾರದ ಆದೇಶದನ್ವಯ ತರಬೇತಿಗೆ ಸಂಬಂಧಿಸಿದಂತೆ ನಿಯಮಾನುಸಾರ ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿ ಉಚಿತವಾಗಿ ಮಾಧ್ಯಮಗಳ ಮತ್ತು ಪತ್ರಿಕೆಯ ಮುಖಾಂತರ ವ್ಯಾಪಕವಾಗಿ ಪ್ರಚಾರ ನೀಡಿ, ಆಫ್‌ಲೈನ್ ಮುಖಾಂತರ ಅರ್ಜಿಯನ್ನು ಮತ್ತೊಮ್ಮೆ ಆಹ್ವಾನಿಸಲು ಸೂಚಿಸಿರುತ್ತಾರೆ.

ವೃತ್ತಿಪರ ತರಬೇತಿ ಕೋರ್ಸ್‌ಗಳಲ್ಲಿ ಭಾಗವಹಿಸುವ ಪರಿಶಿಷ್ಟ ಪಂಗಡಗಳ ಆಸಕ್ತ ಇಂಜಿನಿಯರಿಂಗ್ ಪದವೀಧರರು ಕೊಪ್ಪಳ ಜಿಲ್ಲೆಯಲ್ಲಿರುವ ತಾಲೂಕಾಧಿಕಾರಿಗಳು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಗಂಗಾವತಿ, ಕುಷ್ಟಗಿ ಮತ್ತು ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ, ಕೊಪ್ಪಳ/ಯಲಬುರ್ಗಾ ಕಛೇರಿಗೆ ಸಂಪರ್ಕಿಸಿ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಜುಲೈ 4 ಕೊನೆಯ ದಿನಾಂಕವಾಗಿದ್ದು, ತದನಂತರ ಸ್ವೀಕೃತವಾಗುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಸ್ವೀಕೃತವಾದ ಅರ್ಜಿಗಳನ್ನು ಜು. 5ರಂದು ಪರಿಶೀಲನೆ (ಜಿಲ್ಲಾಮಟ್ಟದ ಅಧಿಕಾರಿಗಳಿಂದ ಪರಿಶೀಲನೆ ಮಾಡಿ ದೃಢೀಕರಣ) ಮಾಡಲಾಗುವುದು ಹಾಗೂ ಪರಿಶೀಲಿಸಿದ ಅರ್ಜಿಯನ್ನು ಅಗತ್ಯ ದಾಖಲಾತಿಗಳೊಂದಿಗೆ ಕೇಂದ್ರ ಕಛೇರಿಗೆ ಜು. 7ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಕೊಪ್ಪಳ ಕಛೇರಿಯನ್ನು ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

# ಜ್ಞಾನಗುರುಕುಲ ಶಾಲೆಯಲ್ಲಿ ಶಾಲಾ ಸಂಸತ್ತು ಚುನಾವಣೆ




ಮಹಾಲಿಂಗಪುರ: ಸಮೀಪದ ರನ್ನಬೆಳಗಲಿಯ ಎಸ್.ಸಿ.ತೆಗ್ಗಿನಮಠ ಜ್ಞಾನಗುರುಕುಲ ಪ್ರಾಥಮಿಕ ಮತ್ತು ಪ್ರೌಢಶಾಲೆಯಲ್ಲಿ ಶನಿವಾರ ಶಾಲಾ ಸಂಸತ್ತು ಚುನಾವಣೆ ನಡೆಸಲಾಯಿತು. ಮೋಬೈಲ್ ಆ್ಯಪ್ ಮೂಲಕ ಇವಿಎಂ ಮಷಿನ್‌ನಲ್ಲಿ ಮತದಾನ ನಡೆಸಿ ಮತ ಎಣಿಕೆ ಮಾಡಿ ಪ್ರತಿನಿಧಿಗಳನ್ನು ಆಯ್ಕೆ ಮಾಡಲಾಯಿತು. ಅತಿಥಿಯಾಗಿ ಪಾಲ್ಗೊಂಡ ಉಪನ್ಯಾಸಕ ಶಿವಲಿಂಗ ಸಿದ್ನಾಳ ಚಾಲನೆ ನೀಡಿದರು.

ಕನ್ನಡ ಮಾಧ್ಯಮದಲ್ಲಿ ಸಾಲುಮರದ ತಿಮ್ಮಕ್ಕ, ಆಯ್ದಕ್ಕಿ ಲಕ್ಕಮ್ಮ, ಅತ್ತಿಮಬ್ಬೆ, ಅಕ್ಕಮಹಾದೇವಿ ಪಕ್ಷದ ಪ್ರತಿನಿಧಿಗಳು ಕಣದಲ್ಲಿದ್ದರು. ದಾನೇಶ್ವರಿ ಲಾತೂರ (ಪ್ರಧಾನ ಮಂತ್ರಿ), ಮಹಾಲಕ್ಷ್ಮೀ ಜಟರಕಿ (ಶಿಕ್ಷಣ ಮಂತ್ರಿ), ಶ್ರೇಯಾ ಹಣಮನ್ನವರ (ಸಾಂಸ್ಕೃತಿಕ ಮಂತ್ರಿ), ಸಮೀರ ನದಾಫ (ಕ್ರಿಡಾ ಮಂತ್ರಿ), ಸಮರ್ಥ ಅಂದಾನಿ (ಪ್ರವಾಸ ಮಂತ್ರಿ), ಸಮೀರ ಮುಧೋಳ (ಶಿಸ್ತು ಮಂತ್ರಿ), ದರ್ಶನ ಮಠದ (ಆರೋಗ್ಯ ಮಂತ್ರಿ), ಮಲ್ಲಿಕಾರ್ಜುನ ಪೂಜೇರಿ (ಸ್ವಚ್ಚತಾ ಮಂತ್ರಿ), ಮಧು ಹಿಪ್ಪರಗಿ (ಮಗ್ಗಿ ಮಂತ್ರಿ)ಯಾಗಿ ಆಯ್ಕೆಯಾದರು.

ಆಂಗ್ಲಮಾಧ್ಯಮದಲ್ಲಿ ಸ್ವಾಮಿ ವಿವೇಕಾನಂದ, ರಾಮಕೃಷ್ಣ ಪರಮಹಂಸ, ಕಿತ್ತೂರು ಚೆನ್ನಮ್ಮ, ಝೂನ್ಸಿರಾಣಿ ಲಕ್ಷ್ಮೀಬಾಯಿ ಪಕ್ಷದ ಪ್ರತಿನಿಧಿಗಳು ಕಣದಲ್ಲಿದ್ದರು. ಸಚಿನ ಬಡಿಗೇರ (ಪ್ರಧಾನ ಮಂತ್ರಿ), ಸೋಹಂ ಅಂಬುರೆ (ಶಿಕ್ಷಣ ಮಂತ್ರಿ), ಹರ್ಷಿತಾ ಗೂಗಾಡ (ಸಾಂಸ್ಕೃತಿಕ ಮಂತ್ರಿ), ಸಮರ್ಥ ಕೊಣ್ಣೂರ (ಕ್ರಿಡಾ ಮಂತ್ರಿ), ವೈಷ್ಣವಿ ಸಾರಂಗಮಠ (ಪ್ರವಾಸ ಮಂತ್ರಿ), ರಾಹುಲ ಹಳ್ಳೂರ (ಶಿಸ್ತು ಮಂತ್ರಿ), ಲಕ್ಷ್ಮೀ ಕಡಪಟ್ಟಿ (ಆರೋಗ್ಯ ಮಂತ್ರಿ), ಪರಮಾನಂದ ದೊಡ್ಡಟ್ಟಿ (ಸಂಪರ್ಕ ಮತ್ತು ಸಂವಹನ), ಕಾವೇರಿ ಗಣಾಚಾರಿ (ಮಗ್ಗಿ ಮಂತ್ರಿ) ಯಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ, ಶಾಲೆಯ ಸಂಸ್ಥಾಪಕ ಎಂ.ಎಸ್.ತೆಗ್ಗಿನಮಠ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಪ್ರತಿಯೊಬ್ಬರು ಕೆಲ ಸಮಯವನ್ನು ಧಾರ್ಮಿಕ ಕಾರ್ಯಗಳಿಗಾಗಿ ಮೀಸಲಿಡಬೇಕು



ಉಗರಗೋಳ : ಇಂದಿನ ಒತ್ತಡದ ಜೀವನದಲ್ಲಿ ಪ್ರತಿಯೊಬ್ಬರು ಕೆಲ ಸಮಯವನ್ನು ಧಾರ್ಮಿಕ ಕಾರ್ಯಗಳಿಗಾಗಿ ಮೀಸಲಿಡಬೇಕು ಎಂದು ಚಿಕ್ಕುಂಬಿಯ ಅಜಾತ ನಾಗಲಿಂಗಮಠದ ಪೂಜ್ಯ ಅಭಿನವ ನಾಗಲಿಂಗ ಶ್ರೀಗಳು ಹೇಳಿದರು.

ಸವದತ್ತಿ ತಾಲೂಕಿನ ಚಿಕ್ಕುಂಬಿ ಗ್ರಾಮದಲ್ಲಿ ಸೋಮವಾರ ಶ್ರೀ ಜಗದ್ಗುರು ಅಜಾತ ನಾಗಲಿಂಗ ಮಹಾಸ್ವಾಮಿಗಳ 144ನೇ ಪುಣ್ಯಾರಾಧಣೆಯ ಅಂಗವಾಗಿ. ಪಲ್ಲಕ್ಕಿ ಉತ್ಸವಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಮಾನವನಾಗಿ ಹುಟ್ಟಿದ ಮೇಲೆ, ಮಹಾತ್ಮರ ಪುರಾಣ ಪ್ರವಚನ ಆಲಿಸುವುದು ಹಾಗೂ ಸಮರ್ಥ ಗುರುವಿನ ದರ್ಶನದಿಂದ ಮತಿವಂತ ಮಾನವನಾಗಲು ಸಾಧ್ಯವೆಂದರು.

ಸುಮಂಗಲಿಯರ ಆರತಿ, ಬಜನೆ, ಕರಡಿ ಮಜಲು, ಬಾಜಾಬಜಂತ್ರಿಗಳೊಂದಿಗೆ ಶ್ರೀ ಜಗದ್ಗುರು ಅಜಾತ ನಾಗಲಿಂಗ ಮಹಾಸ್ವಾಮಿಗಳ ಪಲ್ಲಕ್ಕಿ ಉತ್ಸವವು ಗ್ರಾಮದಲ್ಲಿ ಜರುಗಿತು.

ಶಿವಾನಂದ ಶ್ರೀಗಳು, ಮಾತೋಶ್ರೀ ಶಿವಯೋಗಿ ತಾಯಿ, ರುದ್ರಮ್ಮಾ ತಾಯಿ, ಗೀತಾಮಾತಾ, ರಾಹುಲ ಸಂಗ್ರೇಶ, ಎಸ್ ಬಿ ವಾರೇಪ್ಪನವರ, ಮಲ್ಲಪ್ಪ ಬಡಿಗೇರ, ನಿಂಗನಗೌಡ್ರ ಸಂಗನಗೌಡ್ರ, ರಂಗಪ್ಪ ಜಂಬಳ್ಳಿ, ಮಂಜುನಾಥ ಸಂಗ್ರೇಶ, ಪ್ರಭು ಗೊವಣ್ಣವರ, ಅಶೋಕ ಕರಿ, ಯಲ್ಲಪ್ಪ ಕರಿ, ಎಮ್ ಡಿ ಶಿದ್ದಾಪೂರ ಹಾಗೂ ಗ್ರಾಮಸ್ಥರು, ಶರಣರು, ಸಂತರು, ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಉಪಸ್ಥಿತರಿದ್ದರು.

# ಇಂದು ಕೊಪ್ಪಳದಲ್ಲಿ ಡಾ. ಫ.ಗು.ಹಳಕಟ್ಟಿ ಜಯಂತಿ

ಕೊಪ್ಪಳ : ಕೊಪ್ಪಳ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೊಪ್ಪಳ ನಗರಸಭೆ ಇವರ ಸಂಯುಕ್ತಾಶ್ರಯದಲ್ಲಿ ಡಾ. ಫ.ಗು.ಹಳಕಟ್ಟಿ ಜಯಂತಿ ಕಾರ್ಯಕ್ರಮವನ್ನು ಜುಲೈ 2 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಸಾಹಿತ್ಯ ಭವನದಲ್ಲಿ ಆಯೋಜಿಸಲಾಗಿದೆ.

ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ತಂಗಡಗಿ ಶಿವರಾಜ ಸಂಗಪ್ಪ ಅವರು ಕಾರ್ಯಕ್ರಮ ಉದ್ಘಾಟಿಸುವರು. ಕರ್ನಾಟಕ ವಿಧಾನಸಭೆಯ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಕುಷ್ಟಗಿ ಶಾಸಕರಾದ ದೊಡ್ಡನಗೌಡ ಹನುಮಗೌಡ ಪಾಟೀಲ ಮತ್ತು ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ಶಾಸಕರಾದ ಬಸವರಾಜ ರಾಯರಡ್ಡಿ ಅವರು ಘನ ಉಪಸ್ಥಿತಿ ವಹಿಸುವರು. ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಅವರು ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಕೊಪ್ಪಳ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ, ಗಂಗಾವತಿ ಶಾಸಕರಾದ ಜಿ.ಜನಾರ್ಧನರೆಡ್ಡಿ, ವಿಧಾನ ಪರಿಷತ್ ಸದಸ್ಯರಾದ ಶಶೀಲ್ ಜಿ.ನಮೋಶಿ, ಡಾ.ಚಂದ್ರಶೇಖರ ಬಿ.ಪಾಟೀಲ, ಶರಣಗೌಡ ಅನ್ನದಾನಗೌಡ ಪಾಟೀಲ ಬಯ್ಯಾಪೂರ ಹಾಗೂ ಹೇಮಲತಾ ನಾಯಕ, ಮುನಿರಾಬಾದ್ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ ತುಂಗಭದ್ರಾ ಯೋಜನೆಯ ಅಧ್ಯಕ್ಷರಾದ ಹಸನಸಾಬ್ ನಬೀಬ್ ಸಾಬ್ ದೋಟಿಹಾಳ, ಕೊಪ್ಪಳ ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್ ಮತ್ತು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀನಿವಾಸ್ ಗುಪ್ತಾ ಅವರು ಭಾಗವಹಿಸುವರು.

ವಿಶೇಷ ಆಹ್ವಾನಿತರಾಗಿ ಕೃಷ್ಣಭಾಗ್ಯ ಜಲ ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಕೆ.ಪಿ ಮೋಹನ್‌ರಾಜ್ ಅವರು ಭಾಗವಹಿಸುವರು. ಕಾರ್ಯಕ್ರಮದ ಅಂಗವಾಗಿ ಗದಗಿನ ನಿವೃತ್ತ ಕಾರ್ಯನಿರ್ವಾಹಕ ಇಂಜಿನಿಯರ್ ಅಶೋಕ ಬಸಪ್ಪ ಬರಗುಂಡಿ ಅವರು ಡಾ. ಫ.ಗು.ಹಳಕಟ್ಟಿಯವರ ಕುರಿತು ವಿಶೇಷ ಉಪನ್ಯಾಸ ನೀಡುವರು.


ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ ಅವರು ಉಪಸ್ಥಿತರಿರುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕೊಟ್ರೇಶ್ ಮರಬನಳ್ಳಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

ಗದಗ : ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಡಿಯಲ್ಲಿ ಬರುವ ಸರ್ಕಾರಿ ಬಾಲಕರ/ ಬಾಕಿಯರ ಬಾಲಮಂದಿರಗಳಲ್ಲಿ ಗಣಿತ/ ವಿಜ್ಞಾನ ಅರೆಕಾಲಿಕ ಟ್ಯೂಷನ್ ಸೇವೆಯನ್ನು ಪಡೆಯಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳನ್ನು ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುವುದು. ಹುದ್ದೆ ತಾತ್ಕಾಲಿಕವಾಗಿದ್ದು ( 1 ವರ್ಷಕ್ಕೆ ಮಾತ್ರ ಅನ್ವಯವಾಗುವಂತೆ ) ಯಾವುದೇ ಸಂದರ್ಭದಲ್ಲಿ ಖಾಯಂಗೊಳಿಸಲಾಗುವುದಿಲ್ಲ. ಅರ್ಜಿಗಳನ್ನು ಜುಲೈ 7 ರ ಸಾಯಂಕಾಲ 5:30 ರೊಳಗಾಗಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾಘಟಕ, ಜಿಲ್ಲಾಡಳಿತ ಭವನ, ಎರಡನೇ ಮಹಡಿರೂ ನಂ–225 ಈ ಕಛೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಕಛೇರಿಗೆ ಸಂಪರ್ಕಿಸುವುದು.

ಅನುಭವ ಹೊಂದಿದ ಶಿಕ್ಷಕರಿಗೆ ಶಿಕ್ಷಕರಾಗಿ ಸೇವೆ ಸಲ್ಲಿಸಿದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ಬಾಲಕಿಯರ ಬಾಲಮಂದಿರ ಸಂಸ್ಥೆಗೆ ಕಡ್ಡಾಯವಾಗಿ ಮಹಿಳಾ ಶಿಕ್ಷಕಿಯನ್ನು ಆಯ್ಕೆ ಮಾಡಲಾಗುವುದು. ಸ್ಥಳೀಯ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ಅರ್ಹ ಅಭ್ಯರ್ಥಿಗಳನ್ನು ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುವುದು.ಅರೆಕಾಲಿಕ ಶಿಕ್ಷಕರು ಹುದ್ದೆಗಳ ತಾತ್ಕಾಲಿಕವಾಗಿದೆ. ಸದರಿ ನೇಮಕಾತಿ ಆದೇಶ ಕೇವಲ ಒಂದು ವರ್ಷಕ್ಕೆ ಮಾತ್ರ ಅನ್ವಯವಾಗುತ್ತದೆ. ನಿಗದಿತ ನಮೂನೆಯಲ್ಲಿ ಭರ್ತಿ ಮಾಡಿ ಜಿಲ್ಲಾ ಮಕ್ಕಳ ರಕ್ಷಣಾಘಟಕ, ಜಿಲ್ಲಾಡಳಿತ ಭವನ, ಎರಡನೇ ಮಹಡಿರೂ ನಂ–225, ಗದಗ ಇಲ್ಲಿ ಸಲ್ಲಿಸಬಹುದು. ಅರ್ಜಿಯೊಂದಿಗೆ ಫೋಟೋ, ಎಸ್.ಎಸ್.ಎಲ್.ಸಿ. ಅಂಕಪಟ್ಟಿ, ಆದಾರ ಕಾರ್ಡ, ನಿಗದಿಪಡಿಸಿದ ವಿದ್ಯಾರ್ಹತೆಯ ಪ್ರಮಾಣ ಪತ್ರ, ಸೇವಾ ಅನುಭವ ಪ್ರಮಾಣ ಪತ್ರ ದ ದೃಢೀಕೃತ ದಾಖಲೆಗಳನ್ನು ಲಗತ್ತಿಸಬೇಕು.

## ಪಟ್ಟಣದಮಾರುತಿ ನಗರ ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿದೆ ಪುರಸಭೆಯ ಅಧಿಕಾರಿಗಳಿಗೆ ಮನವಿ



ಮುದ್ದೇಬಿಹಾಳ ; ಮುದ್ದೇಬಿಹಾಳ ಪಟ್ಟಣದ ಮಾರುತಿ ನಗರ ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿದೆ ಸಮಸ್ಯೆಗಳಿಗೆ ಮುಖ್ಯಾಧಿಕಾರಿಗಳಾಗಲಿ ಬಡಾವಣೆಯ ಪುರಸಭೆ ಸದಸ್ಯರು ಸ್ಪಂದಿಸುತ್ತಿಲ್ಲವೆಂದು ಬಡಾವಣೆಯ ನಿವಾಸಿಗಳು ಮಂಗಳವಾರ ಪುರಸಭೆ ಕಂದಾಯ ಅಧಿಕಾರಿಗಳಿಗೆ ಮನವಿಯನ್ನು ಸಲ್ಲಿಸಿದರು

ಈ ವೇಳೆ ಮಾತನಾಡಿದ ಮಾರುತಿ ನಗರ ನಿವಾಸಿ ಸಂಗನಗೌಡ ಪಾಟೀಲ್ ಮುದ್ದೇಬಿಹಾಳ ಪಟ್ಟಣದಲ್ಲಿ ಅತಿಹೆಚ್ಚು ತೆರಿಗೆಯನ್ನು ನಮ್ಮ ಬಡಾವಣೆಯಿಂದ ತುಂಬಿದರು ಅಭಿವೃದ್ಧಿ ಕುಂಠಿತವಾಗಿದೆ ಸರಿಯಾಗಿ ಕುಡಿಯುವ ನೀರು ಪೂರೈಕೆಯಿಲ್ಲಾ, ಚರಂಡಿ ಸ್ವಚ್ಚತೆ ಗಾರ್ಡನ್ ಸ್ವಚ್ಚತೆ ಇಲ್ಲ, ವಿದ್ಯುತ್ ದೀಪಗಳ ಸಮಸ್ಯೆ, ರಸ್ತೆ ಸಂಚಾರ ಸಮಸ್ಯೆ ಇದೆ ಈ ಕುರಿತು ಪುರಸಭೆ ಮುಖ್ಯಾಧಿಕಾರಿಗಳಿಗೆ ಬಡಾವಣೆಯ ಸದಸ್ಯರಿಗೆ ಮನವಿ ಮಾಡಿದರು ಕ್ಯಾರೆ ಮಾಡುತ್ತಿಲ್ಲ ಹೀಗಾಗಿ ಇಂದು ಬಡಾವಣೆಯ ಎಲ್ಲಾ ನಿವಾಸಿಗಳು ಲಿಖಿತವಾಗಿ ಮನವಿಯನ್ನು ನೀಡಿದ್ದೇವೆ ವಾರದಲ್ಲಿ ಸಮಸ್ಯೆ ಪರಿಹರಿಸದಿದ್ದರೆ ಪುರಸಭೆ ಮುಂದೆ ಧರಣಿ ಸತ್ಯಾಗ್ರಹ ಮಾಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು

ಮನವಿ ಪತ್ರವನ್ನು ಪುರಸಭೆ ಕಂದಾಯ ಅಧಿಕಾರಿ ಶ್ರೀಮತಿ ಎನ್ ಎಸ್ ಪಾಟೀಲ್ ನೀಡಲಾಯಿತು ಈ ವೇಳೆ ಹುಸೇನ್ ಮುಲ್ಲಾ, ಬಸವರಾಜ ಬೂದಿಹಾಳ, ವಿರೇಶ ಢವಳಗಿ, ಶಶಿಧರ ಹಿರೇಮಠ, ಬಿ ವಿ ಮಠ, ಸಿದ್ರಾಮಪ್ಪ ಕಲ್ಯಾಣಿ, ಹಣಮಂತ ನಾವದಗಿ, ಸಿ ಎನ್ ಮಠಪತಿ, ಐಎ ಢವಳಗಿ, ಹೆಚ್ ಬಿ ದಳವಾಯಿ, ಜಿ ಟಿ ಕಾಚಾಪೂರ, ಬಸಲಿಂಗಯ್ಯ ಹಿರೇಮಠ, ವಿಲಾಸ ಪಾಟೀಲ್, ಡಿ ಬಿ ಓಲೇಕಾರ, ಸಂಗಪ್ಪ ಹೋಳಿ, ರಾಜು ಮಡಿವಾಳರು ಇತರರು ಭಾಗವಹಿಸಿದ್ದರು.

### ನಿವೃತ್ತಿ ಹೊಂದಿದ ಹಿರಿಯ ತಾಂತ್ರಿಕ ನಿರ್ದೇಶಕರಿಗೆ ಆತ್ಮೀಯ ಬೀಳ್ಕೊಡುಗೆ

## ವಿ.ಗಿರಿಯಾಚಾರ ಸೇವೆ ಅವಿಸ್ಮರಣೀಯ : ಶಶಿಧರ ಕುರೇರ



ಬಾಗಲಕೋಟೆ, : ಬಾಗಲಕೋಟೆಯಲ್ಲಿ ಕಳೆದ 22 ವರ್ಷಗಳ ಕಾಲ ನಿರಂತರ ಸೇವೆ ಸಲ್ಲಿಸಿ, ಎಲ್ಲ ಅಧಿಕಾರಿಗಳ ಮನ ಗೆದ್ದ ವಿ.ಗಿರಿಯಾಚಾರರ ಸೇವೆ ಅವಿಸ್ಮರಣೀಯವೆಂದು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಹೇಳಿದರು.

ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಸೋಮವಾರ ರಾಷ್ಟ್ರೀಯ ಸೂಚನಾ ವಿಜ್ಞಾನ ಕೇಂದ್ರ (ಎನ್.ಐ.ಸಿ)ದ ಹಿರಿಯ ತಾಂತ್ರಿಕ ನಿರ್ದೇಶಕ ವಿ.ಗಿರಿಯಾಚಾರ ಅವರ ವಯೋನಿವೃತ್ತಿ ಹೊಂದಿದ ನಿಮಿತ್ಯ ಹಮ್ಮಿಕೊಂಡ ಬೀಳ್ಕೊಡುವ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಗಿರಯಾಚಾರ ಅಧಿಕಾರ ಅವಧಿಯಲ್ಲಿ ಹಲವಾರು ಚುನಾವಣಾ ಕಾರ್ಯಗಳಲ್ಲಿ ಪಾಲ್ಗೊಂಡಿದ್ದು, ಯಾವುದೇ ಚುನಾವಣಾ ಕಾರ್ಯದಲ್ಲಿ ದೋಷವಾಗದಂತೆ, ತಾಂತ್ರಿಕ ಸಮಸ್ಯೆಯಾಗದಂತೆ ಕಾರ್ಯನಿರ್ವಹಿಸಿ ಯಶಸ್ಸು ಪಡೆದವರು ಎಂದರು.

ಇವರ ಸುದೀರ್ಘ ಸೇವೆಯಲ್ಲಿ ಅನೇಕ ಐ.ಎ.ಎಸ್ ಅಧಿಕಾರಿಗಳು ಆಗಿ ಹೋಗಿದ್ದು, ಆ ಎಲ್ಲ ಅಧಿಕಾರಿಗಳು ಗಿರಿಯಾಚಾರವರ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಆರೋಗ್ಯ ಇಲಾಖೆಯಲ್ಲಿನ ವರ್ಗಾವಣೆಗೆ ಸಂಬಂಧಿಸಿದ ಸಮಸ್ಯೆಯಲ್ಲಿ ಯಾವುದೇ ತೊಂದರೆಯಾಗದಂತೆ ತಾಂತ್ರಿಕ ಸಲಹೆ ನೀಡಿದ್ದಾರೆ. ಅಧಿಕಾರಿಗಳಾಗಿ ಇಲ್ಲವೇ ಸಿಬ್ಬಂದಿಗಳಾಗಲಿ ಕೀಳರಿಮೆ ಇರಬಾರದು. ತಮಗೆ ಒದಗಿ ಬಂದ ಅಧಿಕಾರವನ್ನು ಜವಾಬ್ದಾರಿಯಿಂದ ನಿರ್ವಹಿಸಿದಾಗ ಯಶಸ್ಸು ಸಿಗಲು ಸಾಧ್ಯ. ಈ ನಿಟ್ಟಿನಲ್ಲಿ ಗಿರಿಯಾಚಾರ ವಯೋ ನಿವೃತ್ತಿ ಹೊಂದಿದ್ದರು ಕೂಡಾ ಸದೃಡವಾಗಿದ್ದು, ಮುಂಬರುವ ದಿನಗಳಲ್ಲಿ ನಿವೃತ್ತರಾದರು ಕೂಡಾ ಜಿಲ್ಲಾಡಳಿತಕ್ಕೆ ತಮ್ಮ ಸಲಹೆಗಳನ್ನು ನೀಡಬೇಕೆಂದು ಆಶಿಸುತ್ತೇವೆ ಎಂದರು.

ಗಿರಿಯಾಚಾರ ಕೇವಲ ದಕ್ಷ ಅಧಿಕಾರಿ ಅಲ್ಲದೇ ತಮ್ಮ ಕುಟುಂಬದ ಎಲ್ಲ ಸದಸ್ಯರನ್ನು ಪ್ರೀತಿಯಿಂದ ಕಂಡವರಾಗಿದ್ದು, ತಮ್ಮ ಮಕ್ಕಳನ್ನು ಸಹ ವಿದ್ಯಾವಂತರನ್ನಾಗಿ ಮಾಡಿದ್ದಾರೆ. ಮನೆ ಗೆದ್ದು, ಮಾರ ಗೆದ್ದವರಾಗಿದ್ದಾರೆ. ಅವರ ನಿವೃತ್ತಿ ಜೀವನ ಸುಖಮಯವಾಗಿರಲೆಂದು ಆಶಿಸಿದರು.

ವಯೋನಿವೃತ್ತಿ ಹೊಂದಿ ಸನ್ಮಾನ ಸ್ವೀಕರಿಸಿ ಮಾತನಾಡಿದ ವಿ.ಗಿರಿಯಾಚಾರ ಅವರು ಗದಗದಲ್ಲಿ ಭೂಮಿ ಕೇಂದ್ರದ ಸಿಇಓ ಆಗಿ, ತದನಂತರ ಬಾಗಲಕೋಟೆಗೆ ಬಂದಾಗ ಯುವಕನಾಗಿದ್ದೆ. ಆ ಸಮಯದಲ್ಲಿ ಜಿಲ್ಲಾಧಿಕಾರಿ ಹಾಗೂ ಜಿ.ಪಂ ಸಿಇಓ ಅವರ ಮಾರ್ಗದರ್ಶನದಲ್ಲಿ ಉತ್ತಮ ಕಾರ್ಯನಿರ್ವಹಿಸಲು ಸಾಧ್ಯವಾಯಿತು. ಒಟ್ಟಿನಲ್ಲಿ ಧನಾತ್ಮಕ ಚಿಂತನೆಯಿಂದ ಕಾರ್ಯ ನಿರ್ವಹಿಸಿದಲ್ಲಿ ಎಲ್ಲವೂ ಒಳಿತಾಗುತ್ತವೆ ಎಂಬುದನ್ನು ನನ್ನ ಅಧಿಕಾರ ಅವಧಿಯಲ್ಲಿ ತಿಳಿದುಕೊಳ್ಳಲಾಗಿದ್ದು, ನನ್ನ ಅವಧಿಯಲ್ಲಿ ಮೇಲಾಧಿಕಾರಿಗಳಿಂದ ಹಿಡಿದು ಎಲ್ಲ ಸಿಬ್ಬಂದಿಗಳಿಗೆ ಚಿರಋಣಿಯಾಗಿರುತ್ತೇನೆ ಎಂದರು.

ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಮಾತನಾಡಿ ಗಿರಿಯಾಚಾರ ನಿವೃತ್ತಿಯಾದರು ಕೂಡಾ ಯುವಕರನ್ನು ಮೀರಿಸುವಂತ ಉತ್ಸಾಹ ಹೊಂದಿದ್ದು, ಅವರು ನಮಗೆಲ್ಲರಿಗಳು ಮಾದರಿಯಾಗಿದ್ದಾರೆ ಎಂದರು. ಈ ಸಂದರ್ಭದಲ್ಲಿ ಜಿಲ್ಲಾ ನೌಕರರ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಬಳ್ಳಾರಿ, ಜಿ.ಪಂ ಮುಖ್ಯ ಲೆಕ್ಕಾಧಿಕಾರಿ ಸಿದ್ದರಾಮೇಶ್ವರ ಉಕ್ಕಲಿ, ನೂತನ ಎನ್.ಐಸಿಯ ಅಧಿಕಾರಿ ಪಿ.ಜೈಕುಮಾರ, ಆಧಾರ ಜಿಲ್ಲಾ ಸಂಯೋಜಕ ಸಿದ್ದಪ್ಪ ಅನಿಸಿಕೆ ವ್ಯಕ್ತಪಡಿಸಿದರು. ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ ಸರ್ವರನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಜಿ.ಪಂ ಉಪಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ನಿವೃತ್ತಿ ಹೊಂದಿದ ಗಿರಿಯಾಚಾರ ಪತ್ನಿ ಪರಿಮಳಾ ಗಿರಿಯಾಚಾರ, ಶಾಲಾ ಶಿಕ್ಷಣ ಇಲಾಖೆಯ ಪ್ರಭಾರಿ ಉಪನಿರ್ದೇಶಕ ಎಸ್.ಜಿ.ಮಿರ್ಜಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಕೆ.ಪ್ರಭಾಕರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

### ಜಿಲ್ಲಾ ಲೇಖಕಿಯರ ಸಂಘದ ವಾರ್ಷಿಕೋತ್ಸವ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭ

## ಜ್ಞಾನ ಸಂಪಾದನೆ ಸಮಾಜಕ್ಕೆ ಉಣಬಡಿಸಿ: ಶ್ವೇತಾ ನರಗುಂದ



ಬೆಳಗಾವಿ: ಜಿಲ್ಲಾ ಲೇಖಕಿಯರ ಸಂಘದ ವಾರ್ಷಿಕೋತ್ಸವ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭ ಜ್ಞಾನ ಸಂಪಾದನೆ ಸಮಾಜಕ್ಕೆ ಉಣಬಡಿಸಿ: ಶ್ವೇತಾ ನರಗುಂದ ಬೆಳಗಾವಿ: ಮನುಷ್ಯ ಉಸಿರಿವವರೆಗೂ ಹೆಚ್ಚಿನ ಜ್ಞಾನ ಸಂಪಾದನೆ ವೃದ್ಧಿಸಿಕೊಳ್ಳುತ್ತಿರಬೇಕು. ನಮ್ಮಲ್ಲಿರುವ ವಿಚಾರ, ಜ್ಞಾನ ಸಂಪಾದನೆಯನ್ನು ಸಮಾಜಕ್ಕೆ ಉಣಬಡಿಸಬೇಕು. ಇದರಿಂದ ಮನುಷ್ಯನ ಜ್ಞಾನ ವಿಕಾಸಕ್ಕೆ ಅನುಕೂಲವಾಗುತ್ತದೆ ಎಂದು ಸಂಘದ ಹಿರಿಯ ಲೇಖಕಿ ಶ್ವೇತಾ ನರಗುಂದ ಅವರು ಹೇಳಿದರು.

ಇಲ್ಲಿನ ಕನ್ನಡ ಸಾಹಿತ್ಯ ಭವನದಲ್ಲಿ ಜಿಲ್ಲಾ ಲೇಖಕಿಯರ ಸಂಘದ ವಾರ್ಷಿಕೋತ್ಸವ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಿಕ್ಷಕರ, ಸಾಹಿತಿಗಳ ಜ್ಞಾನ ಅಪಾರ ವಾದದ್ದು, ಅವರು ತಮ್ಮಲ್ಲಿರುವ ಜ್ಞಾನ, ವಿಚಾರವನ್ನು ಹೊರ ಜಗತ್ತಿಗೆ ಉಣಬಡಿಸುತ್ತಾರೆ. ಹೀಗಾಗಿ ನಾವಿಂದೂ ಸಮಾಜದಲ್ಲಿ ಜ್ಞಾನವಂತರಾಗಿ ಬದುಕು ನಡೆಸಲು ಸಾಧ್ಯವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಲೇಖಕಿಯರ ಸಂಘದ ಪ್ರಧಾನ ಕಾರ್ಯದರ್ಶಿ ಆಶಾ ಯಮಕನಮರಡಿ ಅವರು ವಾರ್ಷಿಕ ವರದಿ ಓದುವುದುರೊಂದಿಗೆ, ಸಂಘದ ಸರ್ವತೋಮುಖ ಬೆಳವಣಿಗೆಗೆ ದತ್ತಿ ದಾನಿಗಳ ಸಹಕಾರ ಸಹಾಯ ಅತ್ಯವಶ್ಯಕವಾಗಿದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿ ಸುಮಾ ಕಿತ್ತೂರ ಅವರು ಮಾತನಾಡಿ, ಸಾಹಿತಿಗಳು ತಮ್ಮ ಬರಹಗಳ ಮೂಲಕ ನಮ್ಮ ಬದುಕಿಗೆ ಉತ್ತರ ಕೊಡುವ ಸಾಮರ್ಥ್ಯ ಹೊಂದಿರಬೇಕೆಂದು ಹೇಳಿದರು. ಈ ವೇಳೆ ಸಂಘದ 30 ಸಾಧಕರ ಸದಸ್ಯರಿಗೆ ಸೇವೆಗೆ ಸಂದ ಪ್ರಶಸ್ತಿ ಪುರಸ್ಕೃತರಿಗೆ ಗೌರವಿಸಿ ಸನ್ಮಾನ ನೀಡಲಾಯಿತು.

ಶಶಿಕಲಾ ಹಾಗೂ ಲಿಂ.ಶಿವಪುತ್ರಪ್ಪ ಯಾದವಾಡ ಅವರ ಸ್ಮರಣಾರ್ಥ ನೀಡುವ ದತ್ತಿ ಪುಸ್ತಕ ಪ್ರಶಸ್ತಿಗೆ ಭಾಜನರಾದ ಗಂಗಾದೇವಿ ಚಕ್ರಸಾಲಿ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು. ದಾನಿಗಳಾದ ರೋಹಿಣಿ ಯಾದವಾಡ ಉಪಸ್ಥಿತರಿದ್ದರು.

ಕಟ್ಟಿಮನಿ ಪ್ರತಿಷ್ಠಾನದ ಬೆಳಗಾವಿ ಜಿಲ್ಲಾ ಅಧ್ಯಕ್ಷರಾದ ಯಲ್ಲಪ್ಪ ಹಿಮ್ಮಡಿ ಅವರಿಗೆ ಗೌರವ ಸನ್ಮಾನ ಮಾಡಲಾಯಿತು. ಅವರ ಪರಿಚಯವನ್ನು ಹಿರಿಯ ಲೇಖಕಿ ನೀಲಗಂಗಾ ಚರಂತಿಮಠ ಮಾಡಿದರು.

ಕಥಾ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಿಸಿ, ದತ್ತಿದಾನಿಗಳಿಗೂ ಸನ್ಮಾನಿಸಲಾಯಿತು.

ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಬೆಳ್ಳುಚುಕ್ಕಿ ತಂಡದ ರಾಜೇಶ್ವರಿ ಹಿರೇಮಠ, ಮಮತಾ ಶಂಕರ, ದಾನಮ್ಮ ಅಂಗಡಿ, ಜಯಶ್ರೀ ನಾಯಕ ಅವರಿಂದ ಗೀತಗಾಯನ, ಸುನೀತಾ ನಂದೆನ್ನವ, ದಾನಮ್ಮ ಝುಳಕಿ,ಶಾಲಿನಿ ಚಿನಿವಾರ, ಶೋಭಾ ಶಿವಳ್ಳಿ, ದಾಕ್ಷಾಯಿಣಿ ತಂಡದಿಂದ ಅಕ್ಕ ಅಲ್ಲಮರ ಸಂವಾದ ರೂಪಕ,ಹೀರಾ ಚೌಗಲಾ, ಕಲ್ಪನಾ, ಶುಭಾ ತೆಲಸಂಗ, ಶಾಲಿನಿ ಅವರಿಂದ ದೇಶಭಕ್ತಿ ಹಾಡಿದರು. ಮಮತಾ ಶಂಕರ,ಸುನಂದಾ ಹಾಲಬಾವಿ, ಲಲಿತಾ ಕ್ಯಾಸನ್ನವರ, ಸುಪ್ರಿಯಾ ದೇಶಪಾಂಡೆ, ಪ್ರಶಸ್ತಿ ಪುರಸ್ಕೃತರ, ದತ್ತಿ ದಾನಿಗಳ ಪರಿಚಯ ಮಾಡಿಕೊಟ್ಟರು. ಹೇಮಾ ಭರಭರೆ ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಟ್ಟರು.

ಹಿರಿಯ ಲೇಖಕಿ ಪುಷ್ಪಾ ಮುರಗೋಡ, ಶ್ವೇತಾ ನರಗುಂದ ಅವರು ತಮ್ಮ ನೂರಕ್ಕೂ ಹೆಚ್ಚು ಪುಸ್ತಕಗಳನ್ನು ಸಂಘಕ್ಕೆ ದೇಣಿಗೆ ಕೊಟ್ಟರು.

ಈ ವೇಳೆ ದಾಕ್ಷಾಯಣಿ ಕಾಪಸೆ 25 ಸಾವಿರ ರೂ. ದತ್ತಿ ನಿಧಿಗೆ ನೀಡಿದರು. ಬೆಳಗಾವಿ ಸಂಘದ ಉಪಾಧ್ಯಕ್ಷರಾದ ವಾಸಂತಿ ಮೇಳೆರ ಸ್ವಾಗತಿಸಿದರು. ತಾಲೂಕು ಅಧ್ಯಕ್ಷ ಸುರೇಶ್ ಹಂಜಿ, ಜಿಲ್ಲಾ ಕಾರ್ಯದರ್ಶಿ ಎಮ್ಮ ವಾಯ ಮೆಣಸಿನಕಾಯಿ ಹಿರಿಯ ಲೇಖಕರಾದ ಸಾ ರಾ ಸುಳಕುಡೆ, ಅಶೋಕ ನರೋಡೆ, ಲೇಖಕಿ ಶಬಾನಾ ಅಣ್ಣಿಗೇರಿ, ಮೀನಾಕ್ಷಿ ಸೂಡಿ, ಹಮೀದಾ ಬೇಗಂ, ದೇಸಾಯಿ, ಅನ್ನಪೂರ್ಣ ಹಿರೇಮಠ ಹಾಗೂ ಇತರರು ಇದ್ದರು. ಸಂಘದ ಸದಸ್ಯರು ನಾಡಗೀತೆ ನುಡಿಸಿದರು.ರಾಜೇಶ್ವರಿ ಹೆಗಡೆ ವಂದಿಸಿದರು.

## ಪ್ರಭಾರಿ ಸಹಾಯಕ ಕಾರ್ಯಪಾಲಕ ಅಭಿಯಂತರಾಗಿ ಮಲ್ಲಿಕಾರ್ಜುನ ಮಗದುಮ್ ಅಧಿಕಾರ



ಮೋಳೆ :- ಲೋಕೋಪಯೋಗಿ ಇಲಾಖೆಯ ಅಥಣಿ ಉಪ ವಿಭಾಗದ ಪ್ರಭಾರಿ ಸಹಾಯಕ ಕಾರ್ಯ ಪಾಲಕ ಅಭಿಯಂತರಾಗಿ ಅಧಿಕಾರ ಸ್ವೀಕರಿಸಿದ ಮಲ್ಲಿಕಾರ್ಜುನ ಮಗದುಮ್ ಇವರಿಗೆ ಸರಕಾರಿ ನೌಕರರ ಸಂಘದ ಪದಾಧಿಕಾರಿಗಳು, ಇಲಾಖಾ ಸಿಬ್ಬಂದಿ, ಸರಕಾರಿ ವಿವಿಧ ಇಲಾಖೆಗಳ ಅಧಿಕಾರಿಗಳು,ಗುತ್ತಿಗೆದಾರರು, ನಿವೃತ್ತ ಅಧಿಕಾರಿಗಳು ಶುಭ ಹಾರೈಸಿದರು.

ಲೋಕೋಪಯೋಗಿ ಇಲಾಖೆಯಲ್ಲಿ ಕಳೆದ ಹತ್ತು ವರ್ಷಗಳಿಂದ ಸಹಾಯಕ ಅಭಿಯಂತರರಾಗಿ ಕಾರ್ಯನಿರ್ವಹಿಸುತ್ತಿರುವ ಮಲ್ಲಿಕಾರ್ಜುನ ಮಗದುಮ್ ಈ ಮೊದಲು ಜಿಲ್ಲಾ ಪಂಚಾಯತನಲ್ಲಿಯೂ ಕಾರ್ಯನಿರ್ವಹಿಸಿದ ಅನುಭವ ಇವರಿಗಿದೆ.

ಅಧಿಕಾರ ಸ್ವೀಕರಿಸಿ ಮಾತನಾಡಿದ ಮಲ್ಲಿಕಾರ್ಜುನ ಮಗದುಮ್, ಲೋಕೋಪಯೋಗಿ ಇಲಾಖೆಯ ಜನಪರ ಯೋಜನೆಗಳನ್ನು ಪ್ರಾಮಾಣಿಕವಾಗಿ ಅನುಷ್ಠಾನಗೊಳಿಸುವೆ ಎಂದರು. ಜನ ಪ್ರತಿನಿಧಿಗಳ ಹಾಗೂ ಇಲಾಖೆಯ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಕಾರ್ಯನಿರ್ವಹಿಸುವೆ ಎಂದ ಅವರು ಈಗಷ್ಟೇ ನಿವೃತ್ತರಾದ ಜಯಾನಂದ ಹಿರೇಮಠರಿಗೆ ಸಹಕಾರ ನೀಡಿದಂತೆ ನನಗೂ ಸಹಕಾರ ನೀಡಿ ಎಂದು ಇಲಾಖೆಯ ಸಿಬ್ಬಂದಿ ವರ್ಗದಲ್ಲಿ ಮನವಿ ಮಾಡಿದರು. ಈ ಸಂದರ್ಭದಲ್ಲಿ ನಿವೃತ್ತ ಅಭಿಯಂತರ ಜಯಾನಂದ ಹಿರೇಮಠ, ಸರಕಾರಿ ನೌಕರರ ಸಂಘದ ಅಧ್ಯಕ್ಷ ರಾಮನಗೌಡ ಪಾಟೀಲ, ಮಾಜಿ ಅಧ್ಯಕ್ಷ ರಾಮ ಧರಿಗೌಡ, ಶಿವಲಿಂಗ ಹುಕ್ಕೇರಿ, ಎ.ಜಿ.ಮುಲ್ಲಾ,ಗೌಡಪ್ಪ ಘುಳಪ್ಪನವರ, ಪ್ರವೀಣ ಪಾಟೀಲ, ಬಿ.ಎಸ್.ಬಿರಾದಾರ, ಗುತ್ತಿಗೆದಾರರಾದ ನಾನಾಸಾಹೇಬ ಅವತಾಡೆ,ಮಲ್ಲಿಕಾರ್ಜು ಅಂದಾಣಿ.ಬಸವರಾಜ ಮಗದುಮ್, ಸುನಿಲ ಅವಟಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಪಟ್ಟಿಹಾಳ(ಕೆ.ಎಸ್)ದಲ್ಲಿ ನಮ್ಮೂರು ನಮ್ಮ ಕೆರೆ ಹಸ್ತಾಂತರ ಕಾರ್ಯಕ್ರಮ



ಬೈಲಹೊಂಗಲ– ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನಾ ಕಛೇರಿಯ ಹಿರೇಬಾಗೇವಾಡಿ ಹಾಗೂ ಕೆರೆ ಅಭಿವೃದ್ಧಿ ಸಮಿತಿ ಪಟ್ಟಿಹಾಳ(ಕೆ.ಎಸ್) ಇವರ ಸಂಯುಕ್ತ ಆಶ್ರಯದಲ್ಲಿ ಪಟ್ಟಿಹಾಳದಲ್ಲಿ ನಮ್ಮೂರು ನಮ್ಮ ಕೆರೆ ಕಾರ್ಯಕ್ರಮದಡಿಯಲ್ಲಿ ಪುನಶ್ಚೇತನಗೊಳಿಸಿದ ದ್ಯಾಮವ್ವನ ಕಟ್ಟೆಯ 843 ನೇಯ ನಾಮಫಲಕ ಅನಾವರಣ ಮತ್ತು ಕೆರೆ ಹಸ್ತಾಂತರ ಕೆರೆ ಅಂಗಳದಲ್ಲಿ ಗಿಡ ನಾಟಿಯ ಕಾರ್ಯಕ್ರಮವು ಮಂಗಳವಾರ ನೆರವೇರಿತು. ಮುಖ್ಯ ಅಥಿತಿಯಾದ ಸಂಸ್ಥೆಯ ಜಿಲ್ಲಾ ನಿರ್ದೇಶಕ ಸತೀಶ ನಾಯ್ಕ ಮಾತನಾಡಿ, ಶ್ರೀ ಕ್ಷೇತ್ರ ಧರ್ಮಸ್ಥಳದ ಧಮಾಧಿಕಾರಿ ಅವರ ಕಲ್ಪನೆಯಂತೆ ಹಲವಾರು ಕಾರ್ಯಕ್ರಮಗಳಲ್ಲಿ, ಕೆರೆ ಅಂಗಳ ನಮ್ಮೂರು ನಮ್ಮ ಕೆರೆ ಕಾರ್ಯಕ್ರಮವು ಯಶಸ್ಸಿನತ್ತ ಸಾಗಿದ್ದು ಸಮುದಾಯವು ಕೂಡಾ ಸಹಕಾರ ನೀಡುತ್ತಿದೆ ಎಂದರು.

ಮರಡಿನಾಗಲಾಪೂರ ಗ್ರಾ.ಪಂ. ಅಭಿವೃದ್ಧಿ ಅಧಿಕಾರಿ ಸೌಮ್ಯ ನಾಮಫಲಕವನ್ನು ಅನಾವರಣಗೊಳಿಸಿದರು. ಒಕ್ಕೂಟದ ಅಧ್ಯಕ್ಷೆ ಗಂಗವ್ವ ಪೂಜಾರ ಕೆರೆ ಅಂಗಳದಲ್ಲಿ ಗಿಡ ನಾಟಿ ಮಾಡಿದರು. ಧಾರವಾಡ ಪ್ರಾದೇಶಿಕ ಕೆರೆ ಅಭಿಯಂತರರಾದ ನಿಂಗರಾಜ, ಕೆರೆ ಸಮೀತಿ ಅಧ್ಯಕ್ಷ ಅಪ್ಪಣ್ಣ ಹತ್ತಿ, ಗೌಡಪ್ಪ ಪಾಟೀಲ, ಮಲ್ಲನಗೌಡ ಪಾಟೀಲ, ಬಸಯ್ಯ ಹಿರೇಮಠ, ದ್ಯಾಮಪ್ಪ ಹುದಲಿ, ದ್ಯಾಮಪ್ಪ ನೇಗಿನಾಳ, ಈರಪ್ಪ ತವಗದ, ಹಿರೇಬಾಗೇವಾಡಿ ವಲಯ ಯೋಜನಾಧಿಕಾರಿ ಯೋಗೇಶ್ ಕೆ. ಮರಡಿನಾಗಲಾಪೂರ ಗ್ರಾ.ಪಂ. ಸದಸ್ಯರು ಉಪಸ್ಥಿತರಿದ್ದರು.

ಮೇಲ್ವಿಚಾರಕ ಪ್ರಶಾಂತ, ಕೃಷಿ ಮೇಲ್ವಿಚಾರಕ ರಿಯಾಜಸಾಹೇಬ್ ದರಗಾದ, ಗ್ರಾ.ಪಂ. ಸದಸ್ಯರು, ಸಂಘದ ಸದಸ್ಯರು, ಸೇವಾ ಪ್ರತಿನಿಧಿಗಳು ಪಾಲ್ಗೊಂಡಿದ್ದರು.

### ಪಂಢರಪುರ ವಾರಿ: ಒಂದು ವಾರ ಅನ್ನಪ್ರಸಾದ



ರಬಕವಿ–ಬನಹಟ್ಟಿ,ಜೂ30: ಮಹಾರಾಷ್ಟ್ರದ ಪಂಢರಪುರ ವಾರಿ ನಿಮಿತ್ತ ಜುಲೈ 7 ನೇ ತಾರೀಖಿನವರೆಗೆ ಜ್ಞಾನೇಶ್ವರ ಮತ್ತು ತುಕಾರಾಮರ ಪಾದುಕೆ, ಪಲ್ಲಕ್ಕಿಗಳನ್ನು ತೆಗೆದುಕೊಂಡು ಹೋಗುವ ಲಕ್ಷಾಂತರ ಭಕ್ತರಿಗೆ ಪ್ರತಿನಿತ್ಯ ಬಂಡಿಗಣಿಯ ಬಸವಗೋಪಾಲ ನೀಲಮಾಣಿಕಮಠದಿಂದ ಅನ್ನದಾಸೋಹ ಕಾರ್ಯಕ್ರಮ ನಿರಂತರವಾಗಿ ಜರುಲಿದೆ ಎಂದು ದಾನೇಶ್ವರಶ್ರೀಗಳು ತಿಳಿಸಿದರು.

ಕಾಲ್ನಡಿಗೆಯಲ್ಲಿ ಬರುವ ಭಕ್ತರಿಗೆ ನಿರಂತರ ಸೇವೆ ಮಠದಿಂದ ಜರುಗುತ್ತಿದ್ದು, ಈ ವರ್ಷವೂ ಮುನ್ನಡೆಯಲಿದೆ ಎಂದು ತಿಳಿಸಿದರು.

### ಮಹಾನಗರ ಪಾಲಿಕೆ ಸ್ಥಾಯಿ ಸಮಿತಿಗಳ ಸದಸ್ಯರುಗಳ ಚುನಾವಣೆ ಮುಂದೂಡಿಕೆ

ಬೆಳಗಾವಿ, : ಬೆಳಗಾವಿ ಮಹಾನಗರ ಪಾಲಿಕೆಯ 23 ನೇ ಅವಧಿಗೆ ವಿವಿಧ 04 ಸ್ಥಾಯಿ ಸಮಿತಿಗಳ ಸದಸ್ಯರುಗಳ ಚುನಾವಣೆಯನ್ನು ಜುಲೈ 2, 2025 ರಂದು ನಿಗದಿಪಡಿಸಲಾಗಿತ್ತು, ಕಾರಣಾಂತರಗಳಿಂದ ವಿವಿಧ 04 ಸ್ಥಾಯಿ ಸಮಿತಿಗಳ ಸದಸ್ಯರುಗಳ ಚುನಾವಣೆಯನ್ನು ಮುಂದೂಡಲಾಗಿದೆ ಎಂದು ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನಿಪ್ಪಾಣಿ ನಗರಸಭೆ ವ್ಯಾಪ್ತಿಯ ವಸತಿ ರಹಿತ, ನಿವೇಶನ ರಹಿತರಿಂದ ಅರ್ಜಿ ಆಹ್ವಾನ

ಬೆಳಗಾವಿ, ಕೇಂದ್ರ ಸರ್ಕಾರದ ಪರಿಷ್ಕೃತ ಪ್ರಧಾನಮಂತ್ರಿ ಆವಾಸ ಯೋಜನೆಯಡಿ ವಸತಿ ರಹಿತ ಮತ್ತು ನಿವೇಶನ ರಹಿತ ಕುಟುಂಬಗಳಿಗೆ ವಸತಿ ಕಲ್ಪಿಸಲು ಕೇಂದ್ರ ಸರ್ಕಾರವು ಗಟಿಜಿಜಜ ಘಜಥ ಕ೦ಡಿ–ಣ೦ಟ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ನಿಪ್ಪಾಣಿ ನಗರಸಭೆ ವ್ಯಾಪ್ತಿಯೊಳಗೆ ಬರುವ ಎಲ್ಲಾ ವಾರ್ಡುಗಳ ವಸತಿ ರಹಿತ ಮತ್ತು ನಿವೇಶನ ರಹಿತ ಕುಟುಂಬಗಳು ವಸತಿ ಪಡೆಯಲು ಕೇಂದ್ರ ಸರ್ಕಾರದ ಠಣಣಠಿ:// ೦ಟಚಿಥಿ.ಣಡಿಥಚಿಟ.ರಂತ.ಎಟ ನಲ್ಲಿ ಅರ್ಜಿ ಸಲ್ಲಿಸಿ, ಅರ್ಜಿ ಸಲ್ಲಿಸಿದ ಪ್ರತಿಯನ್ನು ನಿಪ್ಪಾಣಿ ನಗರಸಭೆ ಕಾರ್ಯಾಲಯದ ಆಶ್ರಯ ಶಾಖೆಗೆ ಸಲ್ಲಿಸಬೇಕು ಎಂದು ನಿಪ್ಪಾಣಿ ಪುರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿಕಲಚೇತನ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನ

ಬೆಳಗಾವಿ, 2025–26ನೇ ಸಾಲಿನ ಪ್ರೀ ಮೆಟ್ರಿಕ್ ಮತ್ತು ಪೋಸ್ಟ್ ಮೆಟ್ರಿಕ್ ವಿದ್ಯಾರ್ಥಿ ವೇತನಕ್ಕಾಗಿ ವಿಕಲಚೇತನ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಬೆಳಗಾವಿ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿಕಲಚೇತನ ವಿದ್ಯಾರ್ಥಿಗಳ , ಶಾಲಾ ಕಾಲೇಜುಗಳು / ಶಿಕ್ಷಣ ಸಂಸ್ಥೆಗಳ ಮುಖಾಂತರ ಸದರಿ ಯೋಜನೆಯಡಿ ವಿದ್ಯಾರ್ಥಿವೇತನ ಸೌಲಭ್ಯಕ್ಕಾಗಿ ಪ್ರೀ ಮೆಟ್ರಿಕ್ ವಿದ್ಯಾರ್ಥಿಗಳ ವೇತಕ್ಕಾಗಿ https://ssp.postmatric.karnataka.gov.in/ssppre/ ವೆಬ್ ಸೈಟ್ ಹಾಗೂ ಪೋಸ್ಟ್ ಮೆಟ್ರಿಕ್ ವಿದ್ಯಾರ್ಥಿಗಳ ವೇತನಕ್ಕಾಗಿ https://ssp.postmatric.karnataka.gov.in/post_sa/signin.aspx ವೆಬ್ ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಛೇರಿಯ ದೂರವಾಣಿ ಸಂಖ್ಯೆ: 0831–2476096/2476097 ಗೆ ಅಥವಾ ತಮ್ಮ ತಾಲೂಕಿನ (ಎಂ.ಆರ್.ಡಬ್ಲ್ಯೂ.) ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಳಗಾವಿಯಲ್ಲಿ ನಟಿ ಉಮಾಶ್ರೀ ಏಕಪಾತ್ರಾಭಿನಯ ನಾಟಕ



ಬೆಳಗಾವಿ 3– ನಗರದ ಚೆನ್ನಮ್ಮ ವೃತ್ತದ ಬಳಿಯಿರುವ ಸಾಹಿತ್ಯ ಭವನದಲ್ಲಿ ಜುಲೈ ದಿ. 1 ಮಂಗಳವಾರದಂದು ಮುಂ. 11 ಗಂಟೆಗೆ ಮಾಧ್ಯಮ ಗೋಷ್ಠಿಯನ್ನು ಕರೆದಿದ್ದರು. ಈ ಸಂದರ್ಭದಲ್ಲಿ ರಂಗಸಂಪದದ ಅಧ್ಯಕ್ಷ ಡಾ. ಅರವಿಂದ ಕುಲಕರ್ಣಿಯವರು ಮಾಧ್ಯಮದವರೊಂದಿಗೆ ಮಾತನಾಡಿದರು.

ಬೆಳಗಾವಿಯ ರಂಗಸಂಪದದವರು ಶ್ರೇಷ್ಠ ನಟಿ, ರಾಜಕಾರಣಿ ಉಮಾಶ್ರೀಯವರು ಅಭಿನಯಿಸಿರುವ ರಂಗಸಂಪದ ಬೆಂಗಳೂರಿನ ತಂಡದ 'ಶರ್ಮಿಷ್ಠೆ' ಏಕವ್ಯಕ್ತಿ ನಾಟಕ ಪ್ರದರ್ಶನ ಇದೇ ದಿ.5 ಶನಿವಾರದಂದು ಸಾಯಂಕಾಲ ಸರಿಯಾಗಿ 6–30 ಕ್ಕೆ ಕೋನವಾಳ ಬೀದಿಯಲ್ಲಿರುವ ಲೋಕಮಾನ್ಯ ರಂಗಮಂದಿರ (ಹಳೆ ರೀಝು ಟಾಕೀಜ್)ದಲ್ಲಿ ಪ್ರದರ್ಶನಗೊಳ್ಳಲಿದೆ.

ಮುಂದೆ ಮಾತನಾಡುತ್ತ ಡಾ. ಕುಲಕರ್ಣಿಯವರು ಸಾಕಷ್ಟು ಚಲನಚಿತ್ರಗಳಲ್ಲ ಅಭಿನಯಿಸಿ, ಮಂತ್ರಿ ಪಟ್ಟವನ್ನು ಅಲಂಕರಿಸಿ ಕರ್ನಾಟಕ ಜನರ ಮನವನ್ನು ಗೆದ್ದಿರುವ ಖ್ಯಾತ ಅಭಿನೇತ್ರಿ ಶ್ರೀಮತಿ ಉಮಾಶ್ರೀಯವರು ಶರ್ಮಿಷ್ಠೆ ಏಕವ್ಯಕ್ತಿ ನಾಟಕದಲ್ಲಿ ಶರ್ಮಿಷ್ಠೆಯಾಗಿ ಕಾಣಿಸಿಕೊಳ್ಳಲಿದ್ದಾರೆ. ಈಗಾಗಲೇ ಈ ನಾಟಕ ಬೆಂಗಳೂರು ಮತ್ತು ಮೈಸೂರದಲ್ಲಿ ಪ್ರದರ್ಶನಗೊಂಡು ಕಲಾಸಕ್ತರ ಮನಸ್ಸನ್ನು ಗೆದ್ದಿದೆ. ಈ ನಾಟಕ ಅಲ್ಲದೇ ಉಮಾಶ್ರೀಯವರ ಅಭಿನಯ ಕುರಿತಂತೆ ಮಾಧ್ಯಮದವರು ಸಾಕಷ್ಟು ಉತ್ತಮ ಪ್ರತಿಕ್ರಿಯೆಗಳೊಂದಿಗೆ ಹಾಡಿ ಹೊಗಳಿದ್ದಾರೆ.

ಉಮಾಶ್ರೀಯವರು ಸುಮರು 40 ವರ್ಷಗಳ ಹಿಂದೆಯೇ ಅಂದರೆ ಚಲನಚಿತ್ರರಂಗ ಪ್ರವೇಶ ಮಾಡುವ ಮೊದಲೇ ರಂಗಸಂಪದದವರು ಹಮ್ಮಿಕೊಂಡಿದ್ದ 5 ನಾಟಕಗಳ ಪ್ರಮುಖ ಪಾತ್ರಗಳಲ್ಲಿ ಅಭಿನಯಸಿದ್ದರೆಂಬುದು ರಂಗಸಂಪದದವರಿಗೊಂದು ಅಭಿಮಾನದ ಸಂಗತಿ. ಮುಂದೆ ಇವರು ಚಿತ್ರರಂಗದ ಮೂಲಕ ಪ್ರಸಿದ್ಧರಾದರು. ಈಗ ಬಹಳ ವರ್ಷಗಳ ನಂತರ ರಂಗಸಂಪದ ತಂಡ ಹಮ್ಮಿಕೊಂಡಿರುವ ಶರ್ಮಿಷ್ಠೆ ನಾಟಕದಲ್ಲಿ ಕಾಣಿಸಿಕೊಳ್ಳುತ್ತಿರುವುದು ರಂಗಸಂಪದ ತಂಡಕ್ಕಷ್ಟೆ ಅಲ್ಲ ಬೆಳಗಾವಿ ರಂಗಪ್ರೇಮಿಗಳಿಗೆಲ್ಲ ಸಂಭ್ರಮವನ್ನುಂಟು ಮಾಡಿದೆ.

ಮೂಲ ಮರಾಠಿಯ ವಿ.ಸ ಖಾಂಡೇಕರ ಅವರ ಯಯಾತಿ ಕಾದಂಬರಿಯನ್ನು ಕನ್ನಡಕ್ಕೆ ವಿ.ಎಮ್. ಇನಾಮದಾರ ಅವರು ಅನುವಾದಿಸಿದ್ದಾರೆ. ಇದರ ಆಧಾರದ ಮೇಲೆ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಲೇಖಕ ಗಿರೀಶ ಕಾರ್ನಾಡರ ಯಯಾತಿ ನಾಟಕದಲ್ಲಿ ಬರುವ ಒಂದು ಪ್ರಮುಖ ಪಾತ್ರವೇ ಶರ್ಮಿಷ್ಠೆ. ಇವಳು ಒಬ್ಬಳು ರಾಜಕುಮಾರಿಯಾಗಿದ್ದರೂ ದೇವಯಾನಿ ಹತ್ತಿರ ಆಳಾಗಿ ದುಡಿದು ಬದುಕುವ ಪ್ರಸಂಗ ಬಂದಾಗ ಅವಳ ಮನಸ್ಸಿನಲ್ಲಿ ಆಗುವ ತಳಮಳ, ಹೆಣ್ಣಾಗಿ ಅನುಭವಿಸುವ ನೋವುಗಳು ಈ ನಾಟಕದ ಕಥಾವಸ್ತು.

ಈ ನಾಟಕದ ನಿರ್ದೇಶನ ಮತ್ತು ವಿನ್ಯಾಸ ಚಿದಂಬರರಾವ್ ಜಂಬೆಯವರದಾಗಿದ್ದು ನಾಟಕ ರೂಪಾಂತರ ಬೇಲೂರು ರಘುನಂದನ ಅವರದ್ದಾಗಿದೆ. ರಂಗಸಂಪದ ವಾರ್ಷಿಕ ಪ್ರೇಕ್ಷಕ ಸದಸ್ಯತ್ವವನ್ನು ಹೊಂದಿದವರಿಗೆ ಉಚಿತ ಪ್ರವೇಶವಿದ್ದು ಉಳಿದವರಿಗೆ ಸಹಾಯ ದೇಣಿಗೆ ಒಬ್ಬರಿಗೆ ರೂ.200 ಇರತ್ತದೆ. ದೇಣಿಗೆ ನೀಡಿ ಪ್ರವೇಶ ಪಡೆಯಲಿಚ್ಛಿಸುವವರು 9845025638 ಮೊಬೈಲ್ ಸಂಖ್ಯೆಗೆ ಸಂಪರ್ಕಿಸಬಹುದೆಂದು ಹೇಳಿದರು.

ಮಾಧ್ಯಮ ಗೋಷ್ಠಿಯಲ್ಲಿ ಕಾರ್ಯದರ್ಶಿ ಪ್ರಸಾದ ಕಾರಜೋಳ, ಖಜಾಂಚಿ ದಿಲೀಪ ಮಳಗಿ, ಉಪಾಧ್ಯಕ್ಷರಾದ ಗುರುನಾಥ ಕುಲಕರ್ಣಿ ರಾಮಚಂದ್ರ ಕಟ್ಟಿ ಸದಸ್ಯರಾದ ಚಿದಾನಂದ ವಾಳ್ಕೆ, ಅಶೋಕ ಕುಲಕರ್ಣಿ, ಬಸವರಾಜ ಹುಣಸಿಕಟ್ಟಿಯವರು ಉಪಸ್ಥಿತರಿದ್ದರು.

## ನಿಸ್ವಾರ್ಥದಿಂದ ಮಾಡುವ ಸಮಾಜ ಸೇವೆಯು ನಿಜವಾದ ಸಮಾಜ ಸೇವೆ



ಮೂಡಲಗಿ : 'ನಿಸ್ವಾರ್ಥದಿಂದ ಮಾಡುವ ಸಮಾಜ ಸೇವೆಯು ನಿಜವಾದ ಸಮಾಜ ಸೇವೆಯಾಗುತ್ತದೆ' ಎಂದು ಡಿಸ್ಟ್ರೀಕ್ಟ್ ಲಯನ್ಸ್ ಪಸ್ಟ್ ಡಿಸ್ಟ್ರೀಕ್ಟ್ ಗವರ್ನರ್ ಬೆಳಗಾವಿಯ ರಾಜಶೇಖರ ಹಿರೇಮಠ ಹೇಳಿದರು.

ಇಲ್ಲಿಯ ಎಸ್‌ಎಸ್‌ಆರ್ ಪ್ರೌಢ ಶಾಲೆಯ ಕಲ್ಮೇಶ್ವರ ಸಭಾಭವನದಲ್ಲಿ ಏರ್ಪಡಿಸಿದ್ದ ಲಯನ್ಸ್‌ಕ್ಲಬ್ ಮೂಡಲಗಿ ಪರಿವಾರದ 2025–26ನೇ ಸಾಲಿನ ಪದಗ್ರಹಣ ಸಮಾರಂಭದ ಮುಖ್ಯ ಅತಿಥಿಯಾಗಿ ಮಾತನಾಡಿದರು,

ಸಮಾಜ ಸೇವೆ ಮಾಡಲು ನಿತ್ಯ ಸಾಕಷ್ಟು ಅವಕಾಶಗಳಿದ್ದು, ಸೇವೆಯು ಜನರಿಗೆ ತಲುಪುವಂತೆ ಕಾರ್ಯ ಮಾಡಬೇಕು ಎಂದರು.

2025–26ನೇ ಸಾಲಿಗೆ ಅಧ್ಯಕ್ಷರಾಗಿರುವ ವಿಶಾಲ ಶೀಲವಂತ, ಕಾರ್ಯದರ್ಶಿ ಗಿರೀಶ ಆಸಂಗಿ, ಖಜಾಂಚಿಯಾಗಿರುವ ಡಾ. ಪ್ರಶಾಂತ ಬಾಬಣ್ಣವರ ಹಾಗೂ ಉಳಿದ ಪದಾಧಿಕಾರಿಗಳಿಗೆ ಪದಗ್ರಹಣದೊಂದಿಗೆ ಪ್ರಮಾಣ ವಚನ ಬೋಧಿಸಿದರು.

ಲಯನ್ ಜೋನಲ್ ಅಧ್ಯಕ್ಷ ಡಾ.ರಮೇಶ ಶೆಟ್ಟರ, ನಿರ್ಗಮಿತ ಅಧ್ಯಕ್ಷ ಸಂಜಯ ಮೋಕಾಶಿ, ನೂತನ ಅಧ್ಯಕ್ಷ ವಿಶಾಲ ಶೀಲವಂತ ಮಾತನಾಡಿದರು.

ನಿರ್ಗಮಿತ ಅಧ್ಯಕ್ಷ ಸಂಜಯ ಮೋಕಾಶಿ, ಕಾರ್ಯದರ್ಶಿ ಸೋಮಶೇಖರ ಹಿರೇಮಠ ಮತ್ತು ಖಜಾಂಚಿ ಕೃಷ್ಣಾ ಕೆಂಪಸತ್ತಿ ಮತ್ತು ಸರ್ಕಾರಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಅನ್ನದಾಸೋಹ ಮಾಡಿರುವ ಮಹನೀಯರಿಗೆ ಸನ್ಮಾನಿಸಿದರು. ಪ್ರಾರಂಭದಲ್ಲಿ ಕಾಲೇಜು ರಸ್ತೆ ಬದಿಯಲ್ಲಿ ಸಸಿಗಳನ್ನು ನೆಟ್ಟರು.

ಬಾಲಶೇಖರ ಬಂದಿ ಪ್ರಾಸ್ತಾವಿಕ ಮಾತನಾಡಿದರು.

ಲಯನ್ಸ್‌ಕ್ಲಬ್ ಮೂಡಲಗಿ ಪರಿವಾರದ ಸಂಸ್ಥಾಪಕ ಅಧ್ಯಕ್ಷ ವೆಂಕಟೇಶ ಸೋನವಾಲಕರ, ಶಿವಾನಂದ ಗಾಡವಿ, ಪುಲಕೇಶ ಸೋನವಾಲಕರ, ಮಹಾಂತೇಶ ಹೊಸೂರ, ಸಂಜಯ ಮಂದ್ರೋಳಿ, ಸಂದೀಪ ಸೋನವಾಲಕರ, ಶಿವಬೋಧ ಯರಝುರವಿ, ಶ್ರೀಶೈಲ್ ಲೋಕನ್ನವರ ಮತ್ತಿತರು ಇದ್ದರು.

ಗೋಪಾಲ ದರೂರ ಪ್ರಾರ್ಥಿಸಿದರು,ಡಾ.ಅನಿಲ ಪಾಟೀಲ ಪರಿಚಯಿಸಿದರು, ಈರಣ್ಣ ಕೊಣ್ಣೂರ ಸ್ವಾಗತಿಸಿದರು, ಶಿವಾನಂದ ಕಿತ್ತೂರ, ಮಹಾವೀರ ಸಲ್ಲಾಗೋಳ ನಿರೂಪಿಸಿದರು.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :126, Postal Reg No. PMG/KA/NK/BM/135/25-27 / POST AT Vantamury Colony Post Office